ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೨೧

# ಪಟ್ಟಿ – ೦೨

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೊಂಭತ್ತನೆ ಅಧಿವೇಶನ

ಮಂಗಳವಾರ, ದಿನಾಂಕ : ೧೮ನೇ ಆಗಸ್ಟ್, ೨೦೨೬

---

## ಸಮೂಹ – II

೧. ವಸತಿ ಸಚಿವರು

೨. ಕೃಷಿ ಸಚಿವರು

೩. ಸಕ್ಕರೆ ಮತ್ತು ಜವಳಿ ಸಚಿವರು

೪. ಸಹಕಾರ ಸಚಿವರು

೫. ಪೌರಾಡಳಿತ ಸಚಿವರು

೬. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು

೭. ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೮. ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಗೆ ಸಚಿವರು

**ರೇಷ್ಮೆ ಕೃಷಿ ಬೆಳೆಗೂ ವಿಮಾ ಪದ್ಧತಿಯನ್ನು ಜಾರಿಗೊಳಿಸುವ ಬಗ್ಗೆ**

**ಶ್ರೀ ಎಂ. ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೮ (೨೦೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೇಷ್ಮೆ ಇಲಾಖೆಯಿಂದ ಸಲಕರಣೆಗಳನ್ನು ಮತ್ತು ಸೋಂಕು ನಿವಾರಕವನ್ನು ಯಾವ ರೀತಿಯಲ್ಲಿ ರೈತರಿಗೆ ನೀಡಲಾಗುತ್ತಿದೆ ; ಕೃಷಿ ಇಲಾಖೆ ಮತ್ತು ತೋಟಗಾರಿಕೆ ಇಲಾಖೆಯಲ್ಲಿ ನೀಡುತ್ತಿರುವ ಹಾಗೆಯೇ ರೇಷ್ಮೆ ಇಲಾಖೆಯಲ್ಲಿಯೂ ಸಹ ನೀಡಲು ಸರ್ಕಾರದಿಂದ ಯಾವಾಗ ಕ್ರಮ ಕೈಗೊಳ್ಳಲಾಗುವುದು ;

(ಆ) ಕೃಷಿ ಇಲಾಖೆ ಮತ್ತು ತೋಟಗಾರಿಕಾ ಬೆಳೆಗಳಿಗೆ ವಿಮಾ ಪದ್ಧತಿ ಜಾರಿಯಲ್ಲಿರುವುದರಿಂದ ಸದರಿ ಬೆಳೆಗಳು ಹವಾಮಾನ ವೈಪರೀತ್ಯಗಳಿಂದ ನಷ್ಟಕ್ಕೆ ಒಳಗಾದಲ್ಲಿ ಬೆಳೆ ವಿಮಾ ಪದ್ಧತಿ ಸಹಾಯಕ್ಕೆ ಬರುವಂತೆ ರೇಷ್ಮೆ ಕೃಷಿಗೂ ಸಹ ಬೆಳೆ ವಿಮಾ ಪದ್ಧತಿಯನ್ನು ಜಾರಿಗೊಳಿಸಲು ಸರ್ಕಾರ ಚಿಂತಿಸಿದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಈ ಪದ್ಧತಿಯನ್ನು ಜಾರಿಗೊಳಿಸಲಾಗುವುದು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಪ್ರಸ್ತುತ ರೇಷ್ಮೆ ಗೂಡಿಗೆ ವೈಜ್ಞಾನಿಕವಾಗಿ ಕನಿಷ್ಠ ಬೆಂಬಲ ಬೆಲೆಯನ್ನು ಹಾಗೂ ರೇಷ್ಮೆ ಗೂಡಿಗೆ ಪ್ರೋತ್ಸಾಹಧನವನ್ನು ಎಷ್ಟು ನೀಡಲಾಗುತ್ತಿದೆ ; ಸದರಿ ಬೆಲೆಯನ್ನು ಹೆಚ್ಚಿಸಲು ಸರ್ಕಾರದಿಂದ ಯಾವಾಗ ಕ್ರಮ ಕೈಗೊಳ್ಳಲಾಗುವುದು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಈ) ರೇಷ್ಮೆ ಇಲಾಖೆಯಲ್ಲಿ ತಾಂತ್ರಿಕ ಮತ್ತು ತಾಂತ್ರಿಕೇತರ ಹುದ್ದೆಗಳು ಎಷ್ಟು; ಬಾಕಿಯಿರುವ ಹುದ್ದೆಗಳು ಎಷ್ಟು; ಬಾಕಿಯಿರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ತುಂಬಲಾಗುವುದು ; (ಪ್ರತಿ ಜಿಲ್ಲಾ ವೃಂದವಾರು/ಹುದ್ದೆವಾರು ಸಂಪೂರ್ಣವಾದ ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ ರೇಷ್ಮೆ ಕೃಷಿಯ ಉಳಿವಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ; ಸದರಿ ಸಂಸ್ಥೆಯಲ್ಲಿ ಹಾಲಿ ನಿರ್ದೇಶಕರ ಹುದ್ದೆಗೆ ಐಎಎಸ್ ಅಧಿಕಾರಿಗಳನ್ನು ನೇಮಿಸುವ ಪದ್ಧತಿಯನ್ನು ಕೈಬಿಟ್ಟು ಅದೇ ಅಭಿವೃದ್ಧಿ ಸಂಸ್ಥೆಯಲ್ಲಿ ಸುದೀರ್ಘವಾಗಿ ಸೇವೆ ಸಲ್ಲಿಸುತ್ತಿರುವ ಹಿರಿಯ ವಿಜ್ಞಾನಿಗಳನ್ನು ನಿರ್ದೇಶಕರಾಗಿ ನೇಮಿಸುವುದರಿಂದ ರೇಷ್ಮೆ ಕೃಷಿ ಸಂಶೋಧನೆ ಮತ್ತು ಅಭಿವೃದ್ಧಿಗೆ ಸಹಾಯವಾಗುವುದು ಸರ್ಕಾರದ ಗಮನದಲ್ಲಿದೆಯೇ ; ಇಲ್ಲದಿದ್ದಲ್ಲಿ, ನಿರ್ದೇಶಕರ ನೇಮಕದ ಕುರಿತು ಯಾವ ಕ್ರಮ ಕೈಗೊಳ್ಳಾಗುವುದು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಜಾನುವಾರುಗಳ ಸಾಂಕ್ರಾಮಿಕ ರೋಗ ನಿಯಂತ್ರಣ ಲಸಿಕೆ ಕಾರ್ಯಕ್ರಮ ಹಾಗೂ ಪರಿಹಾರ ವಿತರಣೆ ಬಗ್ಗೆ

**ಶ್ರೀ ಡಿ. ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೯ (೨೧೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ವಿವಿಧ ಸಾಂಕ್ರಾಮಿಕ ಹಾಗೂ ಇತರೆ ರೋಗಗಳಿಂದ ಎಷ್ಟು ಜಾನುವಾರುಗಳು ಮತ್ತು ಇತರ ಸಾಕುಪ್ರಾಣಿಗಳು ಮೃತಪಟ್ಟಿವೆ ; ಶಿವಮೊಗ್ಗ ಜಿಲ್ಲೆಗೆ ಸಂಬಂಧಿಸಿದಂತೆ ರೋಗವಾರು ಹಾಗೂ ತಾಲ್ಲೂಕುವಾರು ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು ;

(ಆ) ಕಳೆದ ಮೂರು ವರ್ಷಗಳಲ್ಲಿ ಜಾನುವಾರುಗಳಿಗೆ ಲಸಿಕೆ ಹಾಕುವ ಕಾರ್ಯಕ್ರಮದಡಿ ರಾಜ್ಯದಲ್ಲಿ ಎಷ್ಟು ಜಾನುವಾರುಗಳಿಗೆ ಲಸಿಕೆ ನೀಡಲಾಗಿದೆ ; ಶಿವಮೊಗ್ಗ ಜಿಲ್ಲೆಗೆ ಸಂಬಂಧಿಸಿದಂತೆ ತಾಲ್ಲೂಕುವಾರು ಹಾಗೂ ವರ್ಷವಾರು ವಿವರವನ್ನು ಪ್ರತ್ಯೇಕವಾಗಿ ನೀಡುವುದು ;

(ಇ) ಕಳೆದ ಮೂರು ವರ್ಷಗಳಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿ ಜಾನುವಾರುಗಳಲ್ಲಿ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು ಸರ್ಕಾರದಿಂದ ಎಷ್ಟು ಲಸಿಕೆ ಶಿಬಿರಗಳನ್ನು ಆಯೋಜಿಸಲಾಗಿದೆ ; ಅವುಗಳ ಫಲಿತಾಂಶವೇನು ಹಾಗೂ ಮುಂದಿನ ದಿನಗಳಲ್ಲಿ ವಿಶೇಷ ಲಸಿಕಾ ಅಭಿಯಾನ ನಡೆಸುವ ಬಗ್ಗೆ ಸರ್ಕಾರ ವಹಿಸಿರುವ ಕ್ರಮಗಳೇನು ;

(ಈ) ಶಿವಮೊಗ್ಗ ಜಿಲ್ಲೆಯಲ್ಲಿ ವಿವಿಧ ರೋಗಗಳಿಂದ ಮೃತಪಟ್ಟ ಜಾನುವಾರುಗಳಿಗೆ ಸಂಬಂಧಿಸಿದಂತೆ ರೈತರಿಗೆ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪರಿಹಾರ ಧನವನ್ನು ವಿತರಿಸಲಾಗಿದೆ ; ಇನ್ನೂ ಬಾಕಿ ಇರುವ ಪರಿಹಾರ ಅರ್ಜಿಗಳ ಸಂಖ್ಯೆ ಎಷ್ಟು ಹಾಗೂ ಅವುಗಳನ್ನು ಯಾವ ಅವಧಿಯಲ್ಲಿ ವಿಲೇವಾರಿ ಮಾಡಲು ಸರ್ಕಾರ ಉದ್ದೇಶಿಸಿದೆ ?

## ಮೂರ್ತೆದಾರರ ಸಹಕಾರಿ ಮಹಾಮಂಡಲ ನಿಗಮ ಸ್ವಂತ ಕಟ್ಟಡಕ್ಕೆ ನಿವೇಶನ ಮಂಜೂರು ಬಗ್ಗೆ

**ಶ್ರೀ ಡಿ. ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೦ (೨೧೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆ ಮೂರ್ತೆದಾರರ ಸಹಕಾರಿ ಮಹಾಮಂಡಲ ನಿ, ಬ್ರಹ್ಮಾವರ ಇವರ ಸ್ವಂತ ಕಟ್ಟಡಕ್ಕೆ ನಿವೇಶನ ಮಂಜೂರು ಮಾಡುವಂತೆ ಮನವಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಬಂದಿದ್ದಲ್ಲಿ, ಸದರಿಯವರಿಗೆ ಯಾವ ಕಾಲಮಿತಿಯೊಳಗೆ ನಿವೇಶನ ಮಂಜೂರು ಮಾಡಲು ಸರ್ಕಾರ ಕ್ರಮಕೈಗೊಳ್ಳುವುದು ;

(ಇ) ನಿವೇಶನ ಮಂಜೂರು ಮಾಡಲು ಸರ್ಕಾರಕ್ಕೆ ಇರುವ ತಾಂತ್ರಿಕ ತೊಂದರೆಗಳೇನು ; ಈ ವಿಳಂಬಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದ ವಸತಿ ಯೋಜನೆಗಳ ಅನುಷ್ಠಾನ ಮನೆ ನಿರ್ಮಾಣ ಪ್ರಗತಿ ಹಾಗೂ ಬಾಕಿ ಅನುದಾನದ ಬಗ್ಗೆ

**ಶ್ರೀ ಡಿ. ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೧ (೨೧೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ವಿವಿಧ ವಸತಿ ಯೋಜನೆಗಳಡಿ ಎಷ್ಟು ಮನೆಗಳಿಗೆ ಮಂಜೂರಾತಿ ನೀಡಲಾಗಿದೆ ಹಾಗೂ ಅವುಗಳಲ್ಲಿ ಎಷ್ಟು ಮನೆಗಳ ನಿರ್ಮಾಣ ಕಾರ್ಯ ಪೂರ್ಣಗೊಂಡಿದೆ ; (ಜಿಲ್ಲಾವಾರು ಶಿವಮೊಗ್ಗ ಜಿಲ್ಲೆಗೆ ಸಂಬಂಧಿಸಿದಂತೆ ತಾಲ್ಲೂಕುವಾರು ವಿವರವನ್ನು ಪ್ರತ್ಯೇಕವಾಗಿ ನೀಡುವುದು)

(ಆ) ರಾಜ್ಯದಲ್ಲಿ ಮನೆ ನಿರ್ಮಾಣಕ್ಕೆ ಮಂಜೂರಾತಿ ದೊರೆತಿದ್ದರೂ ಇನ್ನೂ ಮನೆ ನಿರ್ಮಾಣ ಪೂರ್ಣಗೊಳಿಸದ ಅಥವಾ ಮನೆಗಾಗಿ ಕಾಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಹಾಗೂ ಶಿವಮೊಗ್ಗ ಜಿಲ್ಲೆಗೆ ಸಂಬಂಧಿಸಿದಂತೆ ತಾಲ್ಲೂಕುವಾರು ವಿವರವನ್ನು ಪ್ರತ್ಯೇಕವಾಗಿ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ವಿವಿಧ ವಸತಿ ಯೋಜನೆಗಳಡಿ ಫಲಾನುಭವಿಗಳಿಗೆ ಒಟ್ಟು ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಹಾಗೂ ಇನ್ನೂ ಎಷ್ಟು ಅನುದಾನ ಬಿಡುಗಡೆಗೆ ಬಾಕಿಯಿದೆ ; ಜಿಲ್ಲಾವಾರು ಹಾಗೂ ಶಿವಮೊಗ್ಗ ಜಿಲ್ಲೆಗೆ ಸಂಬಂಧಿಸಿದಂತೆ ತಾಲ್ಲೂಕುವಾರು ಬಿಡುಗಡೆಯಾದ ಮತ್ತು ಬಾಕಿ ಇರುವ ಅನುದಾನದ ವಿವರವನ್ನು ಪ್ರತ್ಯೇಕವಾಗಿ ನೀಡುವುದು ;

(ಈ) ರಾಜ್ಯದಲ್ಲಿ ವಸತಿ ಯೋಜನೆಗಳಡಿ ಮಂಜೂರಾದ ಮನೆಗಳ ನಿರ್ಮಾಣ ವಿಳಂಬವಾಗಲು ಪ್ರಮುಖ ಕಾರಣಗಳೇನು ; ಬಾಕಿ ಮನೆಗಳ ನಿರ್ಮಾಣವನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಹಾಗೂ ಬಾಕಿ ಇರುವ ಅನುದಾನವನ್ನು ಶೀಘ್ರ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ವಿಶೇಷ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಅಲ್ಪಸಂಖ್ಯಾತ ವಿದ್ಯಾರ್ಥಿ ವಸತಿ ನಿಲಯಗಳ ಕಟ್ಟಡ ದುರಸ್ತ ಹಾಗೂ ನಿರ್ವಹಣೆ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೨ (೨೩೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಟ್ಟಡ ದುರಸ್ತಿ ಅಗತ್ಯವಿರುವ ಅಲ್ಪಸಂಖ್ಯಾತ, ವಿದ್ಯಾರ್ಥಿ ವಸತಿ ನಿಲಯಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ೨೦೨೬-೨೭ನೇ ಸಾಲಿನಲ್ಲಿ ಅಲ್ಪಸಂಖ್ಯಾತ ವಿದ್ಯಾರ್ಥಿಗಳ ವಸತಿ ನಿಲಯಗಳ ಕಟ್ಟಡ ದುರಸ್ತಿ ಹಾಗೂ ನಿರ್ವಹಣೆಗೆ ಸರ್ಕಾರ ಎಷ್ಟು ಅನುದಾನ ಮೀಸಲಿಟ್ಟಿದೆ ;

(ಇ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ವಸತಿ ನಿಲಯಗಳಲ್ಲಿ ದುರಸ್ತಿ ಕಾಮಗಾರಿ ಪೂರ್ಣಗೊಂಡಿವೆ ; ಅದಕ್ಕೆ ಖರ್ಚಾದ ಅನುದಾನವೆಷ್ಟು ; ದುರಸ್ತಿ ಕಾಮಗಾರಿ ಕೈಗೊಳ್ಳಬೇಕಾದ ವಸತಿ ನಿಲಯಗಳ ಸಂಖ್ಯೆ ಎಷ್ಟು ;

(ಈ) ಉನ್ನತೀಕರಣಗೊಂಡ ನಂತರ ಈ ಶಾಲೆಗಳಲ್ಲಿ ಎಷ್ಟು ವಿದ್ಯಾರ್ಥಿಗಳು ದಾಖಲಾತಿ ಪಡೆದಿದ್ದಾರೆ; ಕಳೆದ ಮೂರು ವರ್ಷಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ವಿವರವೇನು ;

(ಉ) ವಸತಿ ನಿಲಯದಲ್ಲಿ ಕೊಠಡಿಗಳನ್ನು ಹಂಚಿಕೆ ಮಾಡುವಾಗ ಎಷ್ಟು ವಿದ್ಯಾರ್ಥಿಗಳಿಗೆ ಒಂದು ಕೊಠಡಿಗಳನ್ನು ಹಂಚಿಕೆ ಮಾಡಲಾಗುತ್ತದೆ ; ಹಂಚಿಕೆ ಮಾಡಲು ಇರುವ ಮಾನದಂಡಗಳು ಯಾವುವು?

## ರೈತರಿಗೆ ಸಹಕಾರ ಸಾಲ ವಿತರಣೆ ಮತ್ತು ಸಾಲ ಮನ್ನಾ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೩ (೨೪೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸಹಕಾರ ಬ್ಯಾಂಕ್‌ಗಳು ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ ರೈತರಿಗೆ ನೀಡಲಾಗುತ್ತಿರುವ ಕೃಷಿ ಸಾಲಗಳು ಸಮಯಕ್ಕೆ ಸರಿಯಾಗಿ ದೊರೆಯುತ್ತಿವೆಯೇ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ರೈತರು ಕೃಷಿ ಸಾಲಕ್ಕಾಗಿ ಅರ್ಜಿ ಸಲ್ಲಿಸಿರುತ್ತಾರೆ ; ಎಷ್ಟು ರೈತರಿಗೆ ಸಾಲ ಮಂಜೂರಾಗಿದೆ ಹಾಗೂ ಎಷ್ಟು ಅರ್ಜಿಗಳು ತಿರಸ್ಕೃತವಾಗಿವೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಸಾಲ ವಿತರಣೆಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಾಲ ವಿತರಣೆ ಮತ್ತು ತಾಂತ್ರಿಕ ತೊಂದರೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಕಾಮಗಾರಿಗಳು ಅಪೂರ್ಣವಾಗಿರುವ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭಾಯಿಂದ ಚುನಾಯಿತರಾದವರು) :–**

೧೫೪ (೨೪೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅನುಮೋದನೆ ಪಡೆದಿದ್ದರೂ ವಿವಿಧ ಕಾರಣಗಳಿಂದ ಅಪೂರ್ಣವಾಗಿ ಉಳಿದಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಕಾಮಗಾರಿವಾರು ಮಾಹಿತಿ ಒದಗಿಸುವುದು)

(ಆ) ರಸ್ತೆ, ಚರಂಡಿ, ಕುಡಿಯುವ ನೀರಿನ ಪೈಪ್‌ಲೈನ್, ಮೇಲ್ಸೇತುವೆ ಹಾಗೂ ಇತರೆ ನಗರಾಭಿವೃದ್ಧಿ ಕಾಮಗಾರಿಗಳು ಅಪೂರ್ಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಕಾಮಗಾರಿಗಳು ವಿಳಂಬಗೊಳ್ಳಲು ಕಾರಣಗಳೇನು ; ಅವುಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ಇದಕ್ಕಾಗಿ ವಿಶೇಷ ಕಾರ್ಯಯೋಜನೆಯನ್ನು ರೂಪಿಸಿರುವುದೇ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಅಪೂರ್ಣಗೊಂಡಿರುವ ಕಾಮಗಾರಿಗಳ ಪೈಕಿ ಗುತ್ತಿಗೆದಾರರ ನಿರ್ಲಕ್ಷ್ಯ ಅಥವಾ ಒಪ್ಪಂದ ಉಲ್ಲಂಘನೆಯಿಂದ ವಿಳಂಬಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; ಅಂತಹ ಗುತ್ತಿಗೆದಾರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ನಿವೇಶನ ಮಾರಾಟ ಮಾಡಿರುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೫ (೧೮೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆ ಔರಾದ್ ಪಟ್ಟಣದ ಹೃದಯ ಭಾಗದಲ್ಲಿರುವ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ಎರಡು ಎಕರೆ ಜಮೀನು ಪಡೆದ ಕೈಗಾರಿಕಾ ಘಟಕ ಸ್ಥಾಪಿಸುವುದಾಗಿ ತಿಳಿಸಿ ಸದರಿ ಸಾಯಿ ಜಿನ್ನಿಂಗ್ ಮಿಲ್ ರವರು ಜಮೀನನ್ನು ನಿವೇಶನಗಳನ್ನಾಗಿ ಮಾಡಿ ಮಾರಾಟ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ; ಸರ್ಕಾರದಿಂದ ಜಮೀನು ಮುಟ್ಟುಗೋಲು, ಆದೇಶವಿದ್ದರೂ, ಇನ್ನೂ ಮುಟ್ಟುಗೋಲು ಹಾಕಿಕೊಳ್ಳದಿರಲು ಕಾರಣಗಳೇನು ; (ಮಾಹಿತಿ ನೀಡುವುದು)

(ಇ) ಆದೇಶಗಳನ್ನು ಉಲ್ಲಂಘನೆ ಮಾಡಿರುವುದಕ್ಕೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕ್ರೀಡಾಂಗಣ ನಿರ್ಮಾಣವಾಗುತ್ತಿರುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೬ (೧೮೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ನಗರದಲ್ಲಿ ತೋಟಗಾರಿಕೆ ಮಹಾವಿದ್ಯಾಲಯ ಕಾಲೇಜಿನ ಮಾನ್ಯತೆ ವಿಸ್ತರಿಸಲು ಮೀಸಲಿಟ್ಟ ಜಮೀನಿನ ಪೈಕಿ ೨೫ ಎಕರೆಯಲ್ಲಿ ಕ್ರೀಡಾಂಗಣ ನಿರ್ಮಿಸಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಕ್ರೀಡಾಂಗಣ ನಿರ್ಮಿಸಿದರೆ ಕಾಲೇಜು ಮಾನ್ಯತೆ ರದ್ದಾಗಿ ವಿದ್ಯಾರ್ಥಿಗಳ ಭವಿಷ್ಯಕ್ಕೆ ಮಾರಕವಾಗುವುದಿಲ್ಲವೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಯಚೂರು ನಗರದ ವಿಮಾನ ನಿಲ್ದಾಣ ಕಾಮಗಾರಿ ಕುರಿತು

**ಶ್ರೀ ಎನ್ ಎಸ್ ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೭ (೧೮೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ನಗರದಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿ ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಸದರಿ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿಯಲ್ಲಿ ಎದುರಿಸುತ್ತಿರುವ ಸಮಸ್ಯೆಗಳೇನು ;

(ಇ) ಸದರಿ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸಲು ನಿಗದಿಪಡಿಸುವ ಅವಧಿ ಎಷ್ಟು; ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಅಲ್ಪಸಂಖ್ಯಾತರ ಕಾಲೋನಿಗಳ ಅಭಿವೃದ್ಧಿ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೮ (೧೯೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಾಲೋನಿಗಳ ಅಭಿವೃದ್ಧಿಗಾಗಿ ಯಾವ ಯಾವ ಯೋಜನೆಗಳನ್ನು ಜಾರಿಗೊಳಿಸಲಾಗಿದೆ ;

(ಆ) ಕಳೆದ ಮೂರು ವರ್ಷಗಳಲ್ಲಿ ಕಾಲೋನಿಗಳ ಅಭಿವೃದ್ಧಿಗಾಗಿ ಎಷ್ಟು ಅನುದಾನವನ್ನು ಮಂಜೂರು ಮಾಡಲಾಗಿದೆ ; ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; ಖರ್ಚು ಮಾಡಿರುವ ಅನುದಾನ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳು ಹಾಗೂ ಪ್ರಗತಿಯಲ್ಲಿರುವ ಕಾಮಗಾರಿಗಳ ಜಿಲ್ಲಾವಾರು ವಿವರ ನೀಡುವುದು ;

(ಈ) ಇನ್ನೂ ಅಭಿವೃದ್ಧಿಗೆ ಆಯ್ಕೆಯಾಗದ ಅಲ್ಪಸಂಖ್ಯಾತರ ಕಾಲೋನಿಗಳನ್ನು ಗುರುತಿಸಿ ಮುಂದಿನ ಹಂತದಲ್ಲಿ ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸ್ಲಂ (ಕೊಳೆಗೇರಿ) ಪ್ರದೇಶ ಎಂದು ಘೋಷಣೆ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೫ (೧೯೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವುದೇ ಪ್ರದೇಶವನ್ನು ಸ್ಲಂ (Slum) ಕೊಳೆಗೇರಿ ಎಂದು ಘೋಷಿಸಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳು ಯಾವುವು ;

(ಆ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಹೊಸದಾಗಿ ಸ್ಲಂ (ಕೊಳೆಗೇರಿ) ಎಂದು ಘೋಷಿಸಲಾದ ಪ್ರದೇಶಗಳ ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಕಳೆದ ಮೂರು ವರ್ಷಗಳಲ್ಲಿ ಸ್ಲಂ ಘೋಷಣೆಗೆ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ವಿಲೇವಾರಿ ಮಾಡಲಾದ ಅರ್ಜಿಗಳ ಸಂಖ್ಯೆ ಹಾಗೂ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು)

(ಈ) ಸ್ಲಂ ಎಂದು ಘೋಷಿಸಿದ ನಂತರ ಅಲ್ಲಿನ ನಿವಾಸಿಗಳಿಗೆ ಒದಗಿಸಲಾಗುವ ಮೂಲಭೂತ ಸೌಲಭ್ಯಗಳು ಹಾಗೂ ಅಭಿವೃದ್ಧಿ ಕಾಮಗಾರಿಗಳು ಯಾವುವು ;

(ಉ) ಸ್ಲಂ ಪ್ರಕ್ರಿಯೆಯನ್ನು ತ್ವರಿತಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಉರ್ದು ಮಾಧ್ಯಮ ಶಾಲೆಗಳನ್ನು ಉನ್ನತೀಕರಿಸುವ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೦ (೨೯೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ೨೧೩ರಲ್ಲಿ ಘೋಷಿಸಿರುವಂತೆ ಅತಿ ಹೆಚ್ಚು ದಾಖಲಾತಿ ಹೊಂದಿರುವ ೧೦೦ ಉರ್ದು ಮಾಧ್ಯಮ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆ (KPS) ಮಾದರಿಯಲ್ಲಿ ಉನ್ನತೀಕರಿಸುವ ಯೋಜನೆಯ ಅನುಷ್ಠಾನ ಯಾವ ಹಂತದಲ್ಲಿದೆ ;

(ಆ) ಆಯ್ಕೆಗೊಂಡಿರುವ ೧೦೦ ಉರ್ದು ಮಾಧ್ಯಮ ಶಾಲೆಗಳ ಜಿಲ್ಲಾವಾರು ಮಾಹಿತಿ ನೀಡುವುದು ; ಈ ಯೋಜನೆಯಡಿ ಶಿಕ್ಷಕರ ನೇಮಕಾತಿ, ಹೆಚ್ಚುವರಿ ಬೋಧನಾ ಸೌಲಭ್ಯಗಳು ಹಾಗೂ ಕಲಿಕಾ ಗುಣಮಟ್ಟ ಸುಧಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈ ಯೋಜನೆಗೆ ಒಟ್ಟು ಎಷ್ಟು ಅನುದಾನವನ್ನು ಮಂಜೂರು ಮಾಡಲಾಗಿದೆ ; ಇದುವರೆಗೆ ಎಷ್ಟು ಮೊತ್ತವನ್ನು ಬಿಡುಗಡೆ ಮಾಡಲಾಗಿದೆ ಹಾಗೂ ಎಷ್ಟು ವೆಚ್ಚ ಮಾಡಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಜವಳಿ ಪಾರ್ಕ್ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೧ (೨೫೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನಲ್ಲಿ ಜವಳಿ ಪಾರ್ಕ್ ನಿರ್ಮಾಣ ಮಾಡುವ ಸಂಬಂಧ ಸುಮಾರು ೧೫ ಎಕರೆ ಜಾಗವನ್ನು ಜವಳಿ ಇಲಾಖೆಯ ಹೆಸರಿಗೆ ಹಸ್ತಾಂತರಿಸಲು ಸಿಂಧನೂರು ತಹಶೀಲ್ದಾರರಿಗೆ ಪತ್ರ ಬರೆಯಲಾಗಿದೆಯೇ ;

(ಆ) ಬರೆದಿದ್ದಲ್ಲಿ, ಈ ಸಂಬಂಧ ಯಾವ ಕ್ರಮವಾಗಿದೆ ;

(ಇ) ಸಿಂಧನೂರು ತಾಲ್ಲೂಕಿನಲ್ಲಿ ಕೇಂದ್ರ ಸರ್ಕಾರದ ಅಧೀನದಲ್ಲಿರುವ 'CSF'ನ ಸುಮಾರು ೭,೫೦೦ ಎಕರೆಯಷ್ಟು ಭೂಮಿಯಲ್ಲಿ ೧೫ ಎಕರೆ ಭೂಮಿಯನ್ನು 'ಜವಳಿ ಪಾರ್ಕ್' ನಿರ್ಮಾಣ ಸಂಬಂಧ ಮಂಜೂರು ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಇಲಾಖೆಯಿಂದ ಈಗಾಗಲೇ ಪತ್ರ ಬರೆಯಲಾಗಿದೆಯೇ ;

(ಈ) ಬರೆದಿದ್ದಲ್ಲಿ, ಈ ಸಂಬಂಧ ಯಾವ ಕ್ರಮವಾಗಿದೆ ;

(ಉ) ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿನಲ್ಲಿ ಜವಳಿ ಪಾರ್ಕ್ ನಿರ್ಮಾಣ ಮಾಡಲಾಗುವುದು ?

## ರಾಜೀವ್‌ಗಾಂಧಿ ವಸತಿ ನಿಗಮದಿಂದ ಮನೆಗಳನ್ನು ಮಂಜೂರು ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೨ (೨೫೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿಗೆ ೨೦೨೩ರಿಂದ ಇಲ್ಲಿಯವರೆಗೆ ರಾಜೀವ್‌ಗಾಂಧಿ ವಸತಿ ನಿಗಮದಿಂದ ಎಷ್ಟು ಮನೆಗಳು ಮಂಜೂರಾಗಿವೆ ;

(ಆ) ಮಂಜೂರಾಗಿರುವ ಮನೆಗಳಲ್ಲಿ ಈಗಾಗಲೇ ಎಷ್ಟು ಮನೆಗಳು ಪೂರ್ಣಗೊಂಡು ಹಣ ಬಿಡುಗಡೆಯಾಗಿವೆ ;

(ಇ) ಪೂರ್ಣಗೊಳ್ಳಲು ಬಾಕಿಯಿರುವ ಮನೆಗಳ ಸಂಖ್ಯೆ ಎಷ್ಟು ;

(ಈ) ಯಾವ ಕಾಲಮಿತಿಯೊಳಗೆ ಸದರಿ ಮನೆಗಳ ಪೂರ್ಣ ಹಣ ಬಿಡುಗಡೆಯಾಗುತ್ತದೆ ?

## ಭತ್ತ ಅಭಿವೃದ್ಧಿ ಮಂಡಳಿಯನ್ನು ಸ್ಥಾಪಿಸುವ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೩ (೨೬೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದ ಕೃಷಿ ಆರ್ಥಿಕತೆಯಲ್ಲಿ ಭತ್ತವು ಒಂದು ಪ್ರಮುಖ ಆಹಾರ ಧಾನ್ಯವಾಗಿದ್ದು, ಉತ್ತರ ಕರ್ನಾಟಕ ಭಾಗದ ರಾಯಚೂರು, ಕೊಪ್ಪಳ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ಹೆಚ್ಚು ಪ್ರಮಾಣದ ಭತ್ತದ ಬೆಳೆಯನ್ನು ಬೆಳೆಯುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಳೆಯ ಸಂಶೋಧನೆ, ಸೂಕ್ತ ಮಾರುಕಟ್ಟೆ ವ್ಯವಸ್ಥೆ, ಬೆಲೆ ಸ್ಥಿರತೆ ಹಾಗೂ ರೈತರ ಹಿತಾಸಕ್ತಿಯ ರಕ್ಷಣೆಗಾಗಿ 'ಕರ್ನಾಟಕ ತೊಗರಿ ಅಭಿವೃದ್ಧಿ ಮಂಡಳಿ' ಹಾಗೂ 'ಕಾಫಿ ಅಭಿವೃದ್ಧಿ ಮಂಡಳಿ'ಯ ರೀತ್ಯಾ ಭತ್ತದ ಬೆಳೆಗೆ ಪ್ರತ್ಯೇಕವಾಗಿ ರಾಯಚೂರು ಜಿಲ್ಲೆಯಲ್ಲಿ 'ಕರ್ನಾಟಕ ಭತ್ತ ಅಭಿವೃದ್ಧಿ ಮಂಡಳಿ'ಯನ್ನು ಸ್ಥಾಪಿಸುವ ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ರಾಜ್ಯ ಸರ್ಕಾರದಿಂದ ಯಾವ ಕಾಲಮಿತಿಯೊಳಗೆ ರಾಯಚೂರು ಜಿಲ್ಲೆಯಲ್ಲಿ ಭತ್ತ ಅಭಿವೃದ್ಧಿ ಮಂಡಳಿಯನ್ನು ಸ್ಥಾಪಿಸಲಾಗುತ್ತದೆ ?

## ಕೊಟ್ಟಿಗೆಹಾರ, ಮೂಡಿಗೆರೆ ಭಾಗದಲ್ಲಿ ನಿರಂತರ ಮಳೆಯಿಂದ ಕಾಫಿ ಬೆಳೆ ಹಾಳಾಗಿರುವ ಬಗ್ಗೆ

**ಶ್ರೀ ವಿನಯ್ ಕಾರ್ತಿಕ್ ಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೪ (೨೬೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕೊಟ್ಟಿಗೆಹಾರ, ಮೂಡಿಗೆರೆ ಭಾಗದಲ್ಲಿ ಇತ್ತೀಚೆಗೆ ಸುರಿದ ನಿರಂತರ ಮಳೆಯಿಂದ ಕಾಫಿ ಗಿಡಗಳಲ್ಲಿ ಕೊಳೆರೋಗ (ಬೆರಿ ರಾಟ್) ವ್ಯಾಪಕವಾಗಿ ಕಾಣಿಸಿಕೊಂಡಿದ್ದು, ಕಾಫಿ ಬೆಳೆಗಾರರು ಅತ್ಯಂತ ಸಂಕಷ್ಟದ ಪರಿಸ್ಥಿತಿಗೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನಿರಂತರ ಮಳೆಯಿಂದ ತೋಟಗಳ ನಿರ್ವಹಣೆ ಹಾಗೂ ರೋಗ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲು ಸಾಧ್ಯವಾಗದಿರುವುದು ಜೊತೆಗೆ ಔಷಧ ಸಿಂಪಡಣೆ ಸ್ಥಗಿತಗೊಂಡಿರುವುದರಿಂದ, ಕೊಳೆರೋಗ ಇನ್ನಷ್ಟು ವ್ಯಾಪಿಸುವ ಆತಂಕ ಎದುರಾಗಿದ್ದು, ಸಂಕಷ್ಟದಲ್ಲಿರುವ ಕಾಫಿ ಬೆಳೆಗಾರರ ನೆರವಿಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ;

(ಇ) ಪ್ರತಿ ಹೋಬಳಿಯಲ್ಲೂ ಹಾನಿಗೊಳಗಾದ ಕಾಫಿ ತೋಟಗಳ ಸಮೀಕ್ಷೆಯನ್ನು ಕೂಡಲೇ ನಡೆಸಿ, ತುರ್ತು ನೆರವು ಮತ್ತು ಗರಿಷ್ಠ ಮಟ್ಟದ ಪರಿಹಾರ ನೀಡುವ ನಿಟ್ಟಿನಲ್ಲಿ ಸರ್ಕಾರ ಈ ಕೂಡಲೇ ಅಗತ್ಯ ಕ್ರಮವಹಿಸುವುದೇ ?

## ಸಿರಾ ನಗರಸಭೆ ವ್ಯಾಪ್ತಿಯಲ್ಲಿನ ಬಹುಮಹಡಿ ವಸತಿ ಸಂಕೀರ್ಣದ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೬೫ (೨೬೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿರಾ ನಗರಸಭೆ ವ್ಯಾಪ್ತಿಯಲ್ಲಿರುವ ವಸತಿ ರಹಿತರ ಮತ್ತು ನಿವೇಶನ ರಹಿತರ ಸಂಖ್ಯೆ ಎಷ್ಟು ; (ವಾರ್ಡ್‌ವಾರು ವಿವರ ನೀಡುವುದು)

(ಆ) ಸಿರಾ ನಗರಸಭೆ ವ್ಯಾಪ್ತಿಯಲ್ಲಿ ವಸತಿ ರಹಿತರಿಗೆ ವಸತಿ ನೀಡಲು ನಿರ್ಮಿಸುತ್ತಿರುವ ಬಹುಮಹಡಿ ವಸತಿ ಸಂಕೀರ್ಣದ ಕಾಮಗಾರಿ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸದರಿ ಕಾಮಗಾರಿಯನ್ನು ಪುನಃ ಪ್ರಾರಂಭಿಸಲು ಸರ್ಕಾರ ಕೈಗೊಳ್ಳುವ ಕ್ರಮವೇನು ;

(ಇ) ಸದರಿ ವಸತಿ ಸಂಕೀರ್ಣದಲ್ಲಿ ಎಷ್ಟು ಫಲಾನುಭವಿಗಳಿಗೆ ಮನೆ ನೀಡಲು ಉದ್ದೇಶಿಸಲಾಗಿದೆ ;

(ಈ) ಸದರಿ ಯೋಜನೆಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆಯೇ ; ಆಯ್ಕೆಯಾಗಿದ್ದರೆ, ಆಯ್ಕೆಯಾದ ಫಲಾನುಭವಿಗಳ ಸಂಪೂರ್ಣ ವಿವರ ನೀಡುವುದು ;

(ಉ) ಫಲಾನುಭವಿಗಳನ್ನು ಆಯ್ಕೆ ಮಾಡದೆ ಇದ್ದಲ್ಲಿ, ಮಾಡದಿರಲು ಕಾರಣವೇನು ? (ಮಾಹಿತಿ ನೀಡುವುದು)

## ಬೆಂಬಲ ಬೆಲೆಯಡಿ ಖರೀದಿಸಿದ್ದ ರಾಗಿ ಮತ್ತು ಜೋಳಕ್ಕೆ ಹಣ ಪಾವತಿಸುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೬೬ (೨೬೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೬ರಲ್ಲಿ ರಾಗಿ ಮತ್ತು ಜೋಳಕ್ಕೆ ಸರ್ಕಾರ ನಿಗದಿ ಮಾಡಿದ್ದ ಬೆಂಬಲ ಬೆಲೆ ಎಷ್ಟು; ಎಷ್ಟು ಟನ್ ರಾಗಿ ಮತ್ತು ಜೋಳ ಖರೀದಿಸುವ ಗುರಿಯನ್ನು ಹೊಂದಲಾಗಿತ್ತು ; ಎಷ್ಟು ಖರೀದಿಸಲಾಯಿತು ; (ಜಿಲ್ಲಾವಾರು ವಿವರ ನೀಡುವುದು)

(ಆ) ೨೦೨೬ರಲ್ಲಿ ರಾಗಿ ಮತ್ತು ಜೋಳ ಮಾರಾಟ ಮಾಡಲಾದ ರೈತರಿಗೆ ಸರ್ಕಾರ ಪಾವತಿಸಬೇಕಾಗಿದ್ದ ಹಣವೆಷ್ಟು ; ಪಾವತಿಸಿರುವ ಹಣ ಹಾಗೂ ಬಾಕಿಯಿರುವ ಹಣ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಗಿ ಮತ್ತು ಜೋಳ ಖರೀದಿ ಮಾಡಿ ಎಷ್ಟು ದಿನಗಳಲ್ಲಿ ರೈತರಿಗೆ ಹಣ ಪಾವತಿ ಮಾಡಬೇಕಾಗಿತ್ತು ; ಇಲ್ಲಿಯವರೆಗೂ ಹಣ ಪಾವತಿ ಮಾಡದೆ ಇರಲು ಕಾರಣಗಳೇನು ;

(ಈ) ಪ್ರಸ್ತುತ ರೈತರು ಬರಗಾಲದಿಂದ ಕಂಗಾಲಾಗಿದ್ದು, ಕೃಷಿ ಚಟುವಟಿಕೆಗಳಿಗೂ ಹಣವಿಲ್ಲದೆ ಸಂಕಷ್ಟ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದೆಯೇ ; ಬಂದಿದ್ದಲ್ಲಿ, ಶೀಘ್ರವಾಗಿ ಹಣ ಬಿಡುಗಡೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ಸಿರಾ ತಾಲ್ಲೂಕು ಗೌಡಗೆರೆ ಮತ್ತು ಹುಳಿಯಾರು ಹೋಬಳಿ ಕೃಷಿ ಚಟುವಟಿಕೆಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೬೭ (೨೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ, ಸಿರಾ ತಾಲ್ಲೂಕು, ಗೌಡಗೆರೆ ಮತ್ತು ಹುಳಿಯಾರು ಹೋಬಳಿಯಲ್ಲಿ ಎಷ್ಟು ಹೆಕ್ಟೇರ್‌ಗಳಲ್ಲಿ ಮಳೆಯಾಧಾರಿತ ಬೆಳೆ ಬೆಳೆಯಲಾಗುತ್ತದೆ ; ಬೆಳೆಯುವ ಬೆಳೆಗಳು ಯಾವುವು ;

(ಆ) ಸದರಿ ಹೋಬಳಿಗಳಲ್ಲಿ ಬಿತ್ತನೆ ಬೀಜ ಮತ್ತು ಗೊಬ್ಬರ ವಿತರಣೆ ಮಾಡಿದ ಸಂಪೂರ್ಣ ವಿವರ ನೀಡುವುದು ;

(ಇ) ಬಿತ್ತನೆಯಾದ ಪ್ರದೇಶದ ವಿಸ್ತೀರ್ಣವೆಷ್ಟು; ಮಳೆಯ ಅಭಾವದಿಂದ ಬಿತ್ತನೆ ಕಾರ್ಯ ನಡೆಯದ ಪ್ರದೇಶದ ವಿಸ್ತೀರ್ಣವೆಷ್ಟು; ಬಿತ್ತನೆ ಮಾಡಿ ಬೆಳೆ ಬರದ ಪ್ರದೇಶದ ವಿಸ್ತೀರ್ಣವೆಷ್ಟು;

(ಈ) ಸಿರಾ ತಾಲ್ಲೂಕಿನಲ್ಲಿ ಎಷ್ಟು ರೈತರು ವಿಮಾ ಯೋಜನೆಗೆ ನೋಂದಾಯಿಸಿಕೊಂಡಿದ್ದಾರೆ; ನೋಂದಾಯಿಸಿಕೊಂಡ ರೈತರಿಗೆ ನೀಡುವ ಪರಿಹಾರವೆಷ್ಟು; (ಬೆಳೆವಾರು, ಹೆಕ್ಟೇರ್‌ವಾರು ವಿವರ ನೀಡುವುದು)

(ಉ) ವಿಮಾ ಯೋಜನೆಗೆ ನೋಂದಾಯಿಸಿಕೊಳ್ಳದ ರೈತರಿಗೆ ಸರ್ಕಾರ ನೀಡುವ ಪರಿಹಾರದ ಮೊತ್ತವೆಷ್ಟು ?

## ರಾಜ್ಯದಲ್ಲಿನ ವಿಮಾನ ನಿಲ್ದಾಣಗಳ ಕಾರ್ಯನಿರ್ವಹಣೆ ಬಗ್ಗೆ

**ಡಾ. ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವದರು) :–**

೧೬೮ (೧೮೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ವಿಮಾನ ನಿಲ್ದಾಣಗಳು ಎಷ್ಟು; (ವಿಮಾನ ನಿಲ್ದಾಣಗಳ ವಿವರ ನೀಡುವುದು)

(ಆ) ರಾಜ್ಯದಲ್ಲಿ ಹೊಸದಾಗಿ ವಿಮಾನ ನಿಲ್ದಾಣದ ಪ್ರಾಸ್ತಾವನೆಗೆ ಸರ್ಕಾರ ಅನುಮೋದಿಸಿದ ಜಿಲ್ಲೆಗಳು ಯಾವುವು;

(ಇ) ಪ್ರಸ್ತುತ ಪ್ರಗತಿಯಲ್ಲಿರುವ ವಿಮಾನ ನಿಲ್ದಾಣಗಳೆಷ್ಟು; ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ; (ಸಂಪೂರ್ಣ ವಿವರ ನೀಡುವುದು)

(ಈ) ರಾಜ್ಯದಲ್ಲಿ ವಿಮಾನ ನಿಲ್ದಾಣಗಳಿದ್ದರೂ ವಿಮಾನಗಳ ಹಾರಾಟಗಳಿಲ್ಲದೆ ಕಾರ್ಯ ನಿರ್ವಹಣೆಯಾಗದೇ ಇರುವ ವಿಮಾನ

ನಿರ್ಧಾರಗಳು ಯಾವುವು ; ವಿವರಾನ ನಿರ್ಧಾರಗಳ ಕಾರ್ಯಯೋಜನೆಗೆ ಸರ್ಕಾರವು ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಬೆಂಗಳೂರು ನಗರ ಜಿಲ್ಲೆಗಳಲ್ಲಿ ವಸತಿ ಇಲಾಖೆಯಿಂದ ಕಟ್ಟಿರುವ ಮನೆಗಳ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೯ (೨೭೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಸರ್ಕಾರವು ಬಡಜನರಿಗೆ ವಸತಿ ಯೋಜನೆಯಡಿಯಲ್ಲಿ ಎಷ್ಟು ವಸತಿಗಳನ್ನು ನಿರ್ಮಾಣ ಮಾಡಲು ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಮತ್ತು ಯಾವ ಯಾವ ನಗರದಲ್ಲಿ ವಸತಿಗಳನ್ನು ನಿರ್ಮಾಣ ಮಾಡಿರುವುದರ ಬಗ್ಗೆ ಸಂಪೂರ್ಣ ವಿವರ ನೀಡುವುದು ;

(ಆ) ಈವರೆಗೂ ನಿರ್ಮಾಣ ಮಾಡಿರುವ ಒಟ್ಟು ಮನೆಗಳು ಎಷ್ಟು, ನಿರ್ಮಾಣ ಮಾಡಲು ಬಾಕಿ ಉಳಿದಿರುವ ಮನೆಗಳು ಎಷ್ಟು: (ವಿವರ ನೀಡುವುದು)

(ಇ) ಬಡ ಜನರಿಗೆ ಮನೆಗಳನ್ನು ಯಾವ ಮಾನದಂಡಗಳ ಆಧಾರದ ಮೇಲೆ ಹಂಚಿಕೆ ಮಾಡಲಾಗುವುದು ? (ವಿವರ ನೀಡುವುದು)

## ಸ್ಥಳೀಯ ಸಂಸ್ಥೆಗಳಲ್ಲಿ ಕಾವೇರಿ ತಂತ್ರಾಂಶದ ಸಮಸ್ಯೆ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೦ (೨೭೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸ್ಥಳೀಯ ಸಂಸ್ಥೆಗಳಾದ ಪಟ್ಟಣ ಪಂಚಾಯಿತಿ, ನಗರ ಸಭೆ ಮತ್ತು ಪುರಸಭೆಗಲ್ಲಿ ಕಾವೇರಿ ತಂತ್ರಾಂಶ ಸಮಸ್ಯೆಯಿಂದ ಇ–ಖಾತಾ ಸ್ಥಗಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ೨೦೨೫ರ ಡಿಸೆಂಬರ್‌ನಲ್ಲಿ ಆರಂಭಿಸಿರುವ ಈ ಯೋಜನೆಯು, ೨–೩ ತಿಂಗಳಲ್ಲಿ ತಂತ್ರಾಂಶದ ಸಮಸ್ಯೆ ಎಂದು ಹೇಳುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಇ–ಖಾತಾ ನಿರ್ವಹಿಸುವ ಸಲುವಾಗಿ ಯಾವ ಸಾಫ್ಟ್‌ವೇರ್ ಕಂಪನಿಗೆ ಈ ಯೋಜನೆಯುನ್ನು ವಹಿಸಲಾಗಿತ್ತು ; (ಆ ಕಂಪನಿಯ ವಿವರ ನೀಡುವುದು)

(ಇ) ಈ ತಂತ್ರಾಂಶದ ಸಮಸ್ಯೆಯಿಂದ ಆನ್‌ಲೈನ್ ಬಿಲ್ಡಿಂಗ್ ಲೈಸನ್ಸ್ ಪಡೆಯುವುದು ಆಸ್ತಿ, ವಹಿವಾಟು, ಪೌತಿ ಖಾತೆ ವರ್ಗಾವಣೆಗೆ ತೊಂದರೆ ಆಗಿರುವುದು ಹಾಗೂ ಇದರಿಂದ ಸರ್ಕಾರಕ್ಕೆ ಬಹುದೊಡ್ಡ ಮೊತ್ತ ನಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ೨.೦ ತಂತ್ರಾಂಶ ಸರಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ೨೦೨೬–೨೭ನೇ ಸಾಲಿನಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ರೈತರು ಬೆಳೆ ವಿಮೆ ಯೋಜನೆಯಡಿ ನೋಂದಣಿ ಮಾಡಿರುವ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧ (೨೭೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೬–೨೭ನೇ ಸಾಲಿನಲ್ಲಿ ರಾಜ್ಯದ ಜಿಲ್ಲೆಗಳಲ್ಲಿ ಒಟ್ಟು ಎಷ್ಟು ರೈತರು ಬೆಳೆ ವಿಮೆ ಯೋಜನೆಯಡಿ ನೋಂದಣಿ ಮಾಡಿಕೊಂಡಿದ್ದಾರೆ ; (ಜಿಲ್ಲಾವಾರು ಹಾಗೂ ಬೆಳೆಗಳವಾರು ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಬೆಳೆ ವಿಮೆಗೆ ಅರ್ಹರಾಗಿದ್ದರೂ ಇದುವರೆಗೆ ಬೆಳೆ ವಿಮೆ ಮಾಡಿಸಿಕೊಳ್ಳದ ರೈತರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಬೆಳೆ ವಿಮೆ ಮಾಡಿಸಿಕೊಳ್ಳದ ಅರ್ಹ ರೈತರನ್ನು ಯೋಜನೆಯ ವ್ಯಾಪ್ತಿಗೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಈ ಕುರಿತು ವಿಶೇಷ ಜಾಗೃತಿ ಅಭಿಯಾನ ಅಥವಾ ಗಡುವು ವಿಸ್ತರಣೆ ಕುರಿತು ಸರ್ಕಾರ ಯಾವುದೇ ನಿರ್ಧಾರ ಕೈಗೊಂಡಿದೆಯೇ ? (ವಿವರ ಒದಗಿಸುವುದು)

## ೨೦೨೪-೨೫ನೇ ಸಾಲದಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ವಿವಿಧ ವಸತಿ ಯೋಜನೆಗಳಡಿ ಮಂಜೂರಾದ ಹಾಗೂ ಹಂಚಿಕೆಯಾದ ಮನೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೭೨ (೨೭೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪-೨೫ನೇ ಸಾಲಿನಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ವಿವಿಧ ವಸತಿ ಯೋಜನೆಗಳಡಿ ಒಟ್ಟು ಎಷ್ಟು ಮನೆಗಳನ್ನು ಹಂಚಿಕೆ ಮಾಡಲು ಗುರಿ ನಿಗದಿಪಡಿಸಲಾಗಿದೆ ; (ಯೋಜನೆವಾರು ಹಾಗೂ ಜಿಲ್ಲಾವಾರು ವಿವರ ಒದಗಿಸುವುದು)

(ಆ) ಮೇಲ್ಕಂಡ ಗುರಿಯ ಪೈಕಿ ಇದುವರೆಗೆ ಎಷ್ಟು ಫಲಾನುಭವಿಗಳಿಗೆ ವಸತಿ ಸೌಲಭ್ಯ (ಮನೆ)ಗಳನ್ನು ಮಂಜೂರು/ಹಂಚಿಕೆ ಮಾಡಲಾಗಿದೆ ; (ಯೋಜನೆವಾರು ಹಾಗೂ ಜಿಲ್ಲಾವಾರು ವಿವರ ಒದಗಿಸುವುದು)

(ಇ) ಇನ್ನೂ ವಸತಿ ಸೌಲಭ್ಯ ದೊರೆಯದೆ ಬಾಕಿ ಉಳಿದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ಯೋಜನೆವಾರು ಹಾಗೂ ಜಿಲ್ಲಾವಾರು ವಿವರ ನೀಡುವುದು)

(ಈ) ಅರ್ಹ ಫಲಾನುಭವಿಗಳಿಗೆ ಇನ್ನೂ ವಸತಿ ಸೌಲಭ್ಯ ನೀಡದಿರುವುದಕ್ಕೆ ಕಾರಣಗಳೇನು ; (ಯೋಜನೆವಾರು ವಿವರ ನೀಡುವುದು)

(ಉ) ವಸತಿ ರಹಿತ ಅರ್ಹ ಫಲಾನುಭವಿಗಳಿಗೆ ಶೀಘ್ರವಾಗಿ ವಸತಿ ಸೌಲಭ್ಯ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಈ ಉದ್ದೇಶಕ್ಕಾಗಿ ಹೆಚ್ಚುವರಿ ಅನುದಾನ ಅಥವಾ ವಿಶೇಷ ಕಾರ್ಯಕ್ರಮವನ್ನು ರೂಪಿಸಲಾಗಿದೆಯೇ ; (ವಿವರ ನೀಡುವುದು)

(ಊ) ಬಾಕಿ ಉಳಿದಿರುವ ಎಲ್ಲಾ ಅರ್ಹ ಫಲಾನುಭವಿಗಳಿಗೆ ವಸತಿ ಸೌಲಭ್ಯ ಒದಗಿಸಲು ಸರ್ಕಾರ ಯಾವುದೇ ಕಾಲಮಿತಿಯನ್ನು ನಿಗದಿಪಡಿಸಿರುವುದೇ ; ಇಲ್ಲವಾದಲ್ಲಿ, ಅದರ ಕಾರಣಗಳನ್ನು ತಿಳಿಸುವುದು ? (ವಿವರ ನೀಡುವುದು)

## ೨೦೨೬–೨೭ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಬಿತ್ತನೆಯಾಗಿರುವ ಕೃಷಿ ಪ್ರದೇಶದ ವಿಸ್ತೀರ್ಣದ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೩ (೨೭೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೬–೨೭ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಇದುವರೆಗೆ ಬಿತ್ತನೆಯಾಗಿರುವ ಕೃಷಿ ಪ್ರದೇಶದ ವಿಸ್ತೀರ್ಣ ಎಷ್ಟು; (ಜಿಲ್ಲಾವಾರು ಹಾಗೂ ಬೆಳೆವಾರು ವಿವರ ಒದಗಿಸುವುದು)

(ಆ) ೨೦೨೫-೨೬ ಮತ್ತು ೨೦೨೬-೨೭ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಇದೇ ಅವಧಿಗೆ ಬಿತ್ತನೆಯಾಗಿದ್ದ ಕೃಷಿ ಪ್ರದೇಶದ ವಿಸ್ತೀರ್ಣ ಎಷ್ಟು; (ಜಿಲ್ಲಾವಾರು ಹಾಗೂ ಬೆಳೆವಾರು ವಿವರ ಒದಗಿಸುವುದು)

(ಇ) ೨೦೨೫-೨೬ ಹಾಗೂ ೨೦೨೬-೨೭ನೇ ಸಾಲುಗಳಲ್ಲಿ ಬಿತ್ತನೆ ಆಗದೆ ಉಳಿದಿರುವ ಕೃಷಿ ಪ್ರದೇಶದ ವಿಸ್ತೀರ್ಣ ಎಷ್ಟು; (ಜಿಲ್ಲಾವಾರು ಹಾಗೂ ಕಾರಣವಾರು ವಿವರ ಒದಗಿಸುವುದು)

(ಈ) ೨೦೨೫-೨೬ ಹಾಗೂ ೨೦೨೬-೨೭ನೇ ಸಾಲಿನಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸುರಿದ ವಾಸ್ತವಿಕ ಮಳೆಯ ಪ್ರಮಾಣ ಎಷ್ಟು; ಸಾಮಾನ್ಯ (ವಾಡಿಕೆ) ಮಳೆಯ ಪ್ರಮಾಣ ಎಷ್ಟು ಮಳೆಯ ಕೊರತೆ ಅಥವಾ ಹೆಚ್ಚುವರಿ ಪ್ರಮಾಣ ಎಷ್ಟು; (ಜಿಲ್ಲಾವಾರು ವಿವರ ಒದಗಿಸುವುದು)

(ಉ) ಮಳೆಯ ಕೊರತೆಯಿಂದ ಉಂಟಾಗಿರುವ ಬೆಳೆ ನಷ್ಟವನ್ನು ಭರಿಸಲು ಸರ್ಕಾರ ಯಾವ ಪರಿಹಾರ ಕ್ರಮಗಳನ್ನು ಕೈಗೊಂಡಿದೆ ಅಥವಾ ಕೈಗೊಳ್ಳಲಿದೆ ? (ಬೆಳೆಹಾನಿ ಪರಿಹಾರ, ಇನ್‌ಪುಟ್ ಸಬ್ಸಿಡಿ, ಬೀಜ, ರಸಗೊಬ್ಬರ, ಬಡ್ಡಿರಹಿತ ಸಾಲ, ಮುಂದೂಡಿಕೆ ಸೇರಿದಂತೆ ಕೈಗೊಂಡಿರುವ ಕ್ರಮಗಳ ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪಶು ಆಸ್ಪತ್ರೆಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೭೪ (೧೯೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಯಲ್ಲಿ ಎಷ್ಟು ಪಶು ಆಸ್ಪತ್ರೆಗಳಿವೆ; ಅವುಗಳಲ್ಲಿ ಎಷ್ಟು ಸ್ವಂತ ಕಟ್ಟಡಗಳು ಹೊಂದಿವೆ ; ಎಷ್ಟು ಬಾಡಿಗೆ ಕಟ್ಟಡಗಳಲ್ಲಿ ಸೇವೆ ಸಲ್ಲಿಸುತ್ತಿವೆ ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ಜಿಲ್ಲೆಯಿಂದ ಎಷ್ಟು ಹೊಸ ಪಶು ಆಸ್ಪತ್ರೆಗೆ ಬೇಡಿಕೆ ಬಂದಿದೆ ; ಬೇಡಿಕೆ ಅನ್ವಯ ಎಷ್ಟು ಹೊಸ ಪಶು ಆಸ್ಪತ್ರೆಗಳನ್ನು ಮಂಜೂರು ಮಾಡಲಾಗಿದೆ ;

(ಇ) ಪಶು ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳ ಕೊರತೆಯಿದೆ ಎಂದು ದೂರು ಬಂದಿರುವುದು ನಿಜವೇ ; ಬಂದಿದ್ದಲ್ಲಿ, ಸಿಬ್ಬಂದಿಗಳ ಕೊರತೆ ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು ;

(ಈ) ಬಾಡಿಗೆ ಕಟ್ಟಡದಲ್ಲಿ ಸೇವೆ ಸಲ್ಲಿಸುತ್ತಿರುವ ಪಶು ಆಸ್ಪತ್ರೆಗಳಿಗೆ ಸ್ವಂತ ಕಟ್ಟಡ ಹೊಂದಲು ಸರ್ಕಾರ ಅನುದಾನ ಬಿಡುಗಡೆ ಮಾಡಲು ಕ್ರಮಕೈಗೊಳ್ಳುವುದೇ ?

## ಕರ್ನಾಟಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಯೋಜನೆಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫ (೧೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನ ಆಯ–ವ್ಯಯದಲ್ಲಿ ಕರ್ನಾಟಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಈ ಆಯ–ವ್ಯಯದಲ್ಲಿ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ; ಪ್ರಗತಿ ಹಂತದಲ್ಲಿರುವ ಕಾಮಗಾರಿಗಳು ಯಾವುವು ; ಎಷ್ಟು ಕಾಮಗಾರಿಗಳು ಮುಕ್ತಾಯಗೊಂಡಿದೆ ; (ವಿವರ ನೀಡುವುದು)

(ಆ) ಮಂಡಳಿಯಲ್ಲಿ ನಡೆಯುತ್ತಿರುವ ಕೇಂದ್ರ ಪ್ರಾಯೋಜಿತ ಯೋಜನೆಗಳು ಹಾಗೂ ರಾಜ್ಯ ಸರ್ಕಾರದ ಪ್ರಾಯೋಜಿತ ಯೋಜನೆಗಳಾವುವು ; (ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಿಂದ ಮಂಡಳಿಯು ಎಷ್ಟು ಹಣವನ್ನು ಯಾವ ಯಾವ ಹಣಕಾಸು ಸಂಸ್ಥೆಗಳಲ್ಲಿ ಠೇವಣಿ ಇರಿಸಲಾಗಿದೆ ; (ವಿವರ ನೀಡುವುದು)

(ಈ) ಮಂಡಳಿ ವತಿಯಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಯಾವ ಯಾವ ಯೋಜನೆಯಡಿಯಲ್ಲಿ ಕಾಮಗಾರಿಗಳು ನಡೆಯುತ್ತಿದೆ ; ಕಾಮಗಾರಿಗೆ ಮಂಜೂರಾದ ಅನುದಾನ ಎಷ್ಟು ; ಬಿಡುಗಡೆಯಾಗಿರುವ ಹಣ ಹಾಗೂ ಬಾಕಿ ಇರುವ ಹಣ ಎಷ್ಟು ? (ವಿವರ ನೀಡುವುದು)

## ವಸತಿ ಯೋಜನೆಯಡಿ ಮನೆಗಳನ್ನು ನಿರ್ಮಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬ (೨೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ರವರೆಗೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಿವಿಧ ವಸತಿ ಯೋಜನೆಯಡಿ ಎಷ್ಟು ಮನೆಗಳನ್ನು ನಿರ್ಮಿಸುವ ಗುರಿ ಹೊಂದಲಾಗಿತ್ತು ; ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ ; ಫಲಾನುಭವಿಗಳಿಗೆ ಹಂಚಿಕೆ ಮಾಡಿರುವ ಮನೆಗಳೆಷ್ಟು ; (ವಿವರ ನೀಡುವುದು)

(ಆ) ಕೇಂದ್ರ ಮತ್ತು ರಾಜ್ಯ ಸರ್ಕಾರ ವಿವಿಧ ವಸತಿ ಯೋಜನೆಯಡಿ ಪ್ರತಿ ಮನೆ ನಿರ್ಮಾಣಕ್ಕೆ ನೀಡಿರುವ ಸಹಾಯಧನ ಎಷ್ಟು ; (ಯೋಜನೆವಾರು ವಿವರ ನೀಡುವುದು)

(ಇ) ಮನೆಗಳನ್ನು ನಿರ್ಮಿಸಿರುವ ಗುತ್ತಿಗೆದಾರರಿಗೆ ಸಂದಾಯ ಮಾಡಲು ಬಾಕಿ ಇರುವ ಮೊತ್ತ ಎಷ್ಟು ; ಕಳೆದ ೩ ವರ್ಷದಿಂದ ಗುತ್ತಿಗೆದಾರರಿಗೆ ಎಷ್ಟು ಬಾಕಿ ಹಣ ಬಿಡುಗಡೆ ಮಾಡಲಾಗಿದೆ ಹಾಗೂ ಬಾಕಿ ಇರುವ ಹಣವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ?

## ಮಳೆ ಸುರಿದ ಕಾರಣ ತೋಟಗಾರಿಕೆ ಬೆಳೆಗಳ ನಾಶವಾದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೭ (೨೦೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅತೀ ಹೆಚ್ಚು ಮಳೆ ಸುರಿದ ಕಾರಣದಿಂದ ಈ ಸಾಲಿನಲ್ಲಿ ಅಧಿಕ ಪ್ರಮಾಣದಲ್ಲಿ ತೋಟಗಾರಿಕೆ ಬೆಳೆಗಳು ನಾಶವಾಗಿದ್ದು, ಬೆಳೆಗಾರರು ಆರ್ಥಿಕವಾಗಿ ಸಂಕಷ್ಟಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಅತೀ ಹೆಚ್ಚಿನ ಪ್ರಮಾಣದಲ್ಲಿ ಬೆಳೆ ಹಾನಿಯಾಗಿದ್ದು, ಈ ಬಗ್ಗೆ ಸರ್ಕಾರ ಸರ್ವೆ ಮಾಡಿದೆಯೇ ; ಬೆಳೆಗಾರರಿಗೆ ಸೂಕ್ತ ಪರಿಹಾರ ಒದಗಿಸಲಾಗಿದೆಯೇ ; (ವಿವರ ನೀಡುವುದು)

(ಇ) ತೋಟಗಾರಿಕಾ ಬೆಳೆ ನಾಶವಾಗಿರುವ ಎಷ್ಟು ರೈತರಿಗೆ ಪರಿಹಾರ ಧನ ನೀಡಲಾಗಿದೆ ; ಹಾಳಾಗಿರುವ ತೋಟಗಳ ಬಗ್ಗೆ ಸರ್ಕಾರದ ಮುಂದಿರುವ ಯೋಜನೆಗಳಾವುವು ? (ವಿವರ ನೀಡುವುದು)

# ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗೆ ಒದಗಿಸಿರುವ ಅನುದಾನದ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೮ (೧೭೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಿಗೆ ವಿವಿಧ ಯೋಜನೆಗಳಡಿಯಲ್ಲಿ ಒದಗಿಸಿರುವ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಹಾಗೆಯೇ ಬೆಂಗಳೂರು ನಗರ ಜಿಲ್ಲೆಗೆ ಸೇರಿದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಿಗೆ ವಿವಿಧ ಯೋಜನೆಗಳಡಿಯಲ್ಲಿ ಒದಗಿಸಿರುವ ಅನುದಾನವೆಷ್ಟು ; (ವಿವರ ನೀಡುವುದು)

(ಇ) ೨೦೨೫–೨೬ ಮತ್ತು ೨೦೨೬–೨೭ನೇ ಸಾಲಿನಲ್ಲಿ ಬೆಂಗಳೂರು ನಗರ ಜಿಲ್ಲೆಗೆ ಸೇರಿದ ಮಾದನಾಯಕನಹಳ್ಳಿ ನಗರ ಸಭೆಗೆ ವಿವಿಧ ಯೋಜನೆಗಳಡಿಯಲ್ಲಿ ಒದಗಿಸಿರುವ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳ ವಿವರ ನೀಡುವುದು ?

# ಕೊಡಗು ಜಿಲ್ಲೆಯ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗೆ ಬಿಡುಗಡೆಯಾಗಿರುವ ಅನುದಾನದ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೯ (೧೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕೊಡಗು ಜಿಲ್ಲೆಯ ನಗರಸಭೆಗಳು, ಪುರಸಭೆಗಳು ಹಾಗೂ ಪಟ್ಟಣ ಪಂಚಾಯಿತಿಗಳಿಗೆ ಸರ್ಕಾರ ಬಿಡುಗಡೆ ಮಾಡಿದ ಅನುದಾನದ ಸಂಸ್ಥೆವಾರು ವಿವರವನ್ನು ಒದಗಿಸುವುದು ;

(ಆ) ಕೊಡಗು ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ ; ಅವುಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಮಡಿಕೇರಿ, ವಿರಾಜಪೇಟೆ, ಸೋಮವಾರಪೇಟೆ ನಗರ ಪ್ರದೇಶಗಳಲ್ಲಿ ಹಾಳಾಗಿರುವ ರಸ್ತೆಗಳನ್ನು ಅಭಿವೃದ್ಧಿಪಡಿಸಲು ವಿಶೇಷ ಅನುದಾನ ನೀಡುವ ಉದ್ದೇಶ ಸರ್ಕಾರಕ್ಕಿದೆಯೇ ;

(ಈ) ಘನ ತ್ಯಾಜ್ಯ ನಿರ್ವಹಣೆಗೆ (Solid Waste Mangement) ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ನೀಡಲಾದ ಅನುದಾನ ಮತ್ತು ಅದರ ಬಳಕೆಯ ಸಂಪೂರ್ಣ ವಿವರವನ್ನು ಒದಗಿಸುವುದು ?

## ವಿವಿಧ ಯೋಜನೆಗಳಡಿ ಫಲಾನುಭವಿಗಳು ಪಡೆದ ಪ್ರಯೋಜನಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೦ (೧೬೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಿವಿಧ ಯೋಜನೆಗಳಡಿ ಎಷ್ಟು ಫಲಾನುಭವಿಗಳು ಪ್ರಯೋಜನ ಪಡೆದಿದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳ ಸಂಖ್ಯೆ ಹಾಗೂ ಅವುಗಳ ಭರ್ತಿಯ ಸ್ಥಿತಿ ಯಾವ ಹಂತದಲ್ಲಿದೆ ಮತ್ತು ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ನೀಡಲಾದ ವಿದ್ಯಾರ್ಥಿ ವೇತನಗಳ ಸಂಖ್ಯೆ ಹಾಗೂ ವೆಚ್ಚದ ಸಂಪೂರ್ಣ ವಿವರ ನೀಡುವುದು ;

(ಇ) ಜಿಲ್ಲೆಯಲ್ಲಿ ಹೊಸ ಅಲ್ಪಸಂಖ್ಯಾತರ ವಿದ್ಯಾರ್ಥಿ ವಸತಿ ನಿಲಯ ಅಥವಾ ಕೌಶಲ್ಯಾಭಿವೃದ್ಧಿ ಕೇಂದ್ರ ಆರಂಭಿಸುವ ಕುರಿತು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

(ಈ) ೨೦೨೬-೨೭ನೇ ಸಾಲಿನಲ್ಲಿ ಜಿಲ್ಲೆಯ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಮೀಸಲಾದ ಅನುದಾನ ಎಷ್ಟು ; ಅದರಲ್ಲಿ ಇದುವರೆಗೆ ವೆಚ್ಚವಾದ ಮೊತ್ತ ಎಷ್ಟು ?

## ಕೊಡಗು ಜಿಲ್ಲೆಯಲ್ಲಿ ವಸತಿ ಯೋಜನೆಯಡಿ ಮಂಜೂರಾದ ಮನೆಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

೧೮೧ (೧೬೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಸರ್ಕಾರದ ವಸತಿ ಯೋಜನೆಗಳಡಿ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಜೂರಾದ ಮನೆಗಳಲ್ಲಿ ಎಷ್ಟು ಪೂರ್ಣಗೊಂಡಿವೆ ಮತ್ತು ಎಷ್ಟು ಕಾಮಗಾರಿ ಅಪೂರ್ಣ ಹಂತದಲ್ಲಿವೆ ;

(ಇ) ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ/ನಗರ) ಹಾಗೂ ರಾಜ್ಯ ವಸತಿ ಯೋಜನೆಗಳಡಿ ಬಾಕಿ ಉಳಿದ ಅರ್ಜಿಗಳ ಸಂಖ್ಯೆ ಎಷ್ಟು ;

(ಈ) ಕೊಡಗು ಜಿಲ್ಲೆಯ ನಿರಾಶ್ರಿತರು ಮತ್ತು ಭೂ ರಹಿತ ಕುಟುಂಬಗಳಿಗೆ ಮನೆ ನಿರ್ಮಾಣಕ್ಕಾಗಿ ಸರ್ಕಾರ ಯಾವ ವಿಶೇಷ ಯೋಜನೆಗಳನ್ನು ಜಾರಿಗೊಳಿಸಿದೆ ;

(ಉ) ೨೦೧೮ರ ಪ್ರವಾಹ ಮತ್ತು ಭೂಕುಸಿತದಿಂದ ಮನೆ ಕಳೆದುಕೊಂಡ ಕುಟುಂಬಗಳಿಗೆ ಶಾಶ್ವತ ಮನೆಗಳನ್ನು ಒದಗಿಸಲಾಗಿದೆಯೇ ? (ಸಂಪೂರ್ಣ ವಿವರ ನೀಡುವುದು)

## ತೋಟಗಾರಿಕಾ ಬೆಳೆಗಳ ಅಭಿವೃದ್ಧಿಗೆ ಬಿಡುಗಡೆಯಾಗಿರುವ ಅನುದಾನದ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೨ (೧೭೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಕಾಫಿ, ಕಾಳುಮೆಣಸು, ಏಲಕ್ಕಿ, ಕಿತ್ತಳೆ ಮತ್ತು ಇತರ ತೋಟಗಾರಿಕಾ ಬೆಳೆಗಳ ಅಭಿವೃದ್ಧಿಗೆ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಾಡುಪ್ರಾಣಿಗಳ ಹಾವಳಿಯಿಂದ ತೋಟಗಾರಿಕಾ ಬೆಳೆಗಳಿಗೆ ಉಂಟಾಗುತ್ತಿರುವ ನಷ್ಟಕ್ಕೆ ವಿಶೇಷ ಪರಿಹಾರ ಯೋಜನೆ ಜಾರಿಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಹವಾಮಾನ ಬದಲಾವಣೆಯಿಂದ ಕಾಫಿ, ಕಾಳುಮೆಣಸು ಮತ್ತು ಏಲಕ್ಕಿ ಉತ್ಪಾದನೆ ಕುಸಿಯುತ್ತಿರುವ ಹಿನ್ನೆಲೆಯಲ್ಲಿ ಕೊಡಗು ಜಿಲ್ಲೆಗೆ ವಿಶೇಷ ತೋಟಗಾರಿಕಾ ಪ್ಯಾಕೇಜ್ ಘೋಷಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

(ಈ) ಕೊಡಗು ಜಿಲ್ಲೆಯ ತೋಟಗಾರಿಕಾ ಉತ್ಪನ್ನಗಳ ಮೌಲ್ಯವರ್ಧನೆ ಮತ್ತು ರಫ್ತು ಉತ್ತೇಜನಕ್ಕಾಗಿ ವಿಶೇಷ ಯೋಜನೆ ರೂಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರೈತರ ಆತ್ಮಹತ್ಯೆ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೩ (೨೩೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಪ್ರಾಕೃತಿಕ ವಿಕೋಪ, ಬೆಳೆ ನಷ್ಟ, ಸಾಲದ ಹೊರೆ, ಬೆಳೆಗಳಿಗೆ ಸಮರ್ಪಕ ಬೆಲೆ ದೊರೆಯದಿರುವುದು, ಆರ್ಥಿಕ ಸಂಕಷ್ಟ ಹಾಗೂ ಇತರ ಕಾರಣಗಳಿಂದ ಹಲವಾರು ರೈತರು ಅತ್ಮಹತ್ಯೆಗೆ ಶರಣಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ೨೦೨೩–೨೪ನೇ ಸಾಲಿನ ನಂತರ ವರ್ಷವಾರು ಹಾಗೂ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವರ್ಷವಾರು ವಿವರವನ್ನು ನೀಡುವುದು)

(ಆ) ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ಸರ್ಕಾರದಿಂದ ನೀಡಲಾಗುವ ಪರಿಹಾರ ಧನದ ಮೊತ್ತ ಎಷ್ಟು ; ಕಳೆದ ಮೂರು

ವರ್ಷಗಳಲ್ಲಿ ಎಷ್ಟು ಕುಟುಂಬಗಳಿಗೆ ಪರಿಹಾರ ಮಂಜೂರಾಗಿದ್ದು, ಎಷ್ಟು ಪ್ರಕರಣಗಳಲ್ಲಿ ಪರಿಹಾರ ನೀಡಲು ಇನ್ನೂ ಬಾಕಿ ಉಳಿದಿವೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಪರಿಹಾರ ಧನ ವಿತರಣೆಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು ಹಾಗೂ ಅದನ್ನು ನಿವಾರಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಈ) ರೈತರ ಆತ್ಮಹತ್ಯೆಗಳನ್ನು ತಡೆಗಟ್ಟಲು ಮಾನಸಿಕ ಆರೋಗ್ಯ ಸಲಹೆ, ಬೆಳೆ ವಿಮೆ, ಬೆಳೆ ನಷ್ಟ ಪರಿಹಾರ, ಸುಲಭ ಸಾಲ ಸೌಲಭ್ಯ, ಬಡ್ಡಿ ಸಬ್ಸಿಡಿ, ಕನಿಷ್ಟ ಬೆಂಬಲ ಬೆಲೆ, ಕೃಷಿ ಸಲಹಾ ಸೇವೆಗಳು ಹಾಗೂ ಇತರ ಕಲ್ಯಾಣ ಕಾರ್ಯಕ್ರಮಗಳ ಮೂಲಕ ಸರ್ಕಾರ ಯಾವ ವಿಶೇಷ ಯೋಜನೆಗಳನ್ನು ಜಾರಿಗೊಳಿಸಿದೆ ;

(ಉ) ರೈತರ ಆತ್ಮಹತ್ಯೆ ಹೆಚ್ಚು ಸಂಭವಿಸುತ್ತಿರುವ ಜಿಲ್ಲೆಗಳು ಹಾಗೂ ತಾಲ್ಲೂಕುಗಳನ್ನು ಗುರುತಿಸಿ, ಅಲ್ಲಿ ವಿಶೇಷ ಗಮನ ನೀಡುವ ಕಾರ್ಯಯೋಜನೆ ರೂಪಿಸಲು ಸರ್ಕಾರ ಉದ್ದೇಶಿಸಿರುವುದೇ ; ಇದ್ದಲ್ಲಿ, ಅದರ ವಿವರವನ್ನು ನೀಡುವುದು ?

## ರಾಜ್ಯದಲ್ಲಿ ಕರಿಮೆಣಸು ಬೆಳೆಯಲು ವಿಶೇಷ ಯೋಜನೆಗಳನ್ನು ರೂಪಿಸುವ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೪೪ (೨೩೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕರಿಮೆಣಸು (ಪೆಪ್ಪರ್) ಬೆಳೆಯುವ ಪ್ರದೇಶಗಳು ಯಾವುವು ; ರಾಜ್ಯದಲ್ಲಿ ಒಟ್ಟು ಎಷ್ಟು ಹೆಕ್ಟೇರ್ ಪ್ರದೇಶಗಳಲ್ಲಿ ಕರಿಮೆಣಸು ಬೆಳೆಯಲಾಗುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕರಿಮೆಣಸು ಬೆಳೆ ರೈತರಿಗೆ ಉತ್ತಮ ಲಾಭದಾಯಕ ಬೆಳೆಯಾಗಿದ್ದು ಇದನ್ನು ಪ್ರತೋತ್ಸಾಹಿಸುವ ಸಲುವಾಗಿ ಸರ್ಕಾರ ಏನೇನು ಕ್ರಮಗಳನ್ನು ಕೈಗೊಂಡಿದೆ ; ಸದರಿ ಬೆಳೆಯನ್ನು ಬೆಳೆಯಲು ರೈತರಿಗೆ ಏನೇನು ಸೌಲಭ್ಯಗಳನ್ನು ನೀಡಲಾಗುತ್ತಿದೆ ; ಪ್ರತಿ ಗಿಡಕ್ಕೆ ರೈತರಿಗೆ ಎಷ್ಟು ಪ್ರೋತ್ಸಾಹ ಧನವನ್ನು ಪ್ರಸ್ತುತ ನೀಡಲಾಗುತ್ತಿದೆ ; ಈ ನಿಟ್ಟಿನಲ್ಲಿ ೨೦೨೬–೨೭ನೇ ಸಾಲಿನಲ್ಲಿ ಎಷ್ಟು ಅನುದಾನವನ್ನು ಮೀಸಲಿಡಲಾಗಿದೆ ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಅಂದಾಜು ೩೦೦೦ ಹೆಕ್ಟೇರ್‌ಗೂ ಅಧಿಕ ಜಾಗದಲ್ಲಿ ಕರಿಮೆಣಸು ಬೆಳೆಯಲಾಗುತ್ತಿದ್ದು ಕಳೆದ ೩ ವರ್ಷಗಳಲ್ಲಿ ಸದರಿ ಜಿಲ್ಲೆಗಳ ರೈತರಿಗೆ ಎಷ್ಟು ಪ್ರೋತ್ಸಾಹ ಧನ ನೀಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಕಾಸರಗೋಡು ಸಿ.ಪಿ.ಸಿ.ಆರ್,ಐ, ಸಂಶೋಧನಾ ಕೇಂದ್ರದಲ್ಲಿ ಅಭಿವೃದ್ಧಿ ಪಡಿಸಿರುವ ಕರಿಮೆಣಸಿನ ವಿಶೇಷ ತಳಿಗಳನ್ನು (ಚಂದ್ರ, ಕುಂಭಕ್ಕಲ್, ಕಸಿ) ರಾಜ್ಯದ ರೈತರಿಗೆ ನೀಡಲಾಗಿದೆಯೇ ; ನೀಡಿದ್ದರೆ ಎಷ್ಟು ರೈತರಿಗೆ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಅಡಿಕೆ, ಕಾಫೀ, ತೆಂಗು ಬೆಳೆಗಳಲ್ಲಿ ಮಿಶ್ರ ಬೆಳೆಯಾಗಿ ಹೆಚ್ಚಾಗಿ ಕರಿಮೆಣಸು ಬೆಳೆಯಲು ರೈತರನ್ನು ಪ್ರೋತ್ಸಾಹಿಸುವ ಸಲುವಾಗಿ ಸರ್ಕಾರ ವಿಶೇಷ ಯೋಜನೆಗಳನ್ನು ರೂಪಿಸಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿ 'ಹಲಸು ಅಭಿವೃದ್ಧಿ ಮಂಡಳಿ' ಸ್ಥಾಪಿಸುವ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೫ (೨೩೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಲಸು ಬೆಳೆಯನ್ನು ಯಾವೆಲ್ಲ ಪ್ರದೇಶಗಳಲ್ಲಿ ಬೆಳೆಯಲಾಗುತ್ತಿದೆ ; ಹಲಸು ಬೆಳೆಯುವ ಒಟ್ಟು ವಿಸ್ತೀರ್ಣ ಎಷ್ಟು ; ಒಟ್ಟು ಉತ್ಪಾದನೆ ಎಷ್ಟು ; ಬೆಳೆಗಾರರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಹಲಸು ಬೆಳೆಗೆ ಉತ್ತೇಜನ ನೀಡುವ ಉದ್ದೇಶದಿಂದ ತೋಟಗಾರಿಕೆ ಇಲಾಖೆಯಿಂದ ಪ್ರಸ್ತುತ ಜಾರಿಯಲ್ಲಿರುವ ಯೋಜನೆಗಳು, ಸಹಾಯಧನಗಳು ಹಾಗೂ ಪ್ರೋತ್ಸಾಹಧನಗಳ ವಿವರ ನೀಡುವುದು ;

(ಇ) ಹಲಸು ಆಧಾರಿತ ಮೌಲ್ಯವರ್ಧಿತ ಉತ್ಪನ್ನಗಳ ತಯಾರಿಕೆ, ಸಂಸ್ಕರಣೆ, ಮಾರುಕಟ್ಟೆ ವ್ಯವಸ್ಥೆ ಹಾಗೂ ರಫ್ತು ಉತ್ತೇಜನಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಕರಾವಳಿ ಭಾಗದಲ್ಲಿ ಆಯೋಜಿಸಲಾಗುತ್ತಿರುವ ಹಲಸು ಮೇಳಗಳಿಗೆ ಸರ್ಕಾರದಿಂದ ಯಾವುದೇ ಆರ್ಥಿಕ ಅಥವಾ ತಾಂತ್ರಿಕ ನೆರವು ನೀಡಲಾಗುತ್ತಿದೆಯೇ ; ಇದ್ದಲ್ಲಿ, ವಿವರ ನೀಡುವುದು ;

(ಉ) ಹಲಸು ಬೆಳೆಯ ಆರ್ಥಿಕ ಮಹತ್ವವನ್ನು ಪರಿಗಣಿಸಿ, ವಿಶೇಷ 'ಹಲಸು ಆಭಿವೃದ್ಧಿ ಯೋಜನೆ' ರೂಪಿಸಿ ಬೆಳೆಗಾರರಿಗೆ ಪ್ರೋತ್ಸಾಹಧನ, ಸಂಸ್ಕರಣಾ ಘಟಕಗಳ ಸ್ಥಾಪನೆಗೆ ನೆರವು ಮಾರುಕಟ್ಟೆ ಸೌಲಭ್ಯ ಹಾಗೂ ಬ್ರಾಂಡಿಂಗ್ ವ್ಯವಸ್ಥೆ ಕಲ್ಪಿಸುವ ಬಗ್ಗೆ ಏನಾದರೂ ಯೋಜನೆಗಳನ್ನು ಸರ್ಕಾರ ರೂಪಿಸಿದೆಯೇ ;

(ಊ) ಕರಾವಳಿ ಭಾಗದ ಹಲಸನ್ನು ವಿಶೇಷ ಕೃಷಿ–ತೋಟಗಾರಿಕಾ ಉತ್ಪನ್ನವಾಗಿ ಗುರುತಿಸಿ, ರೈತರ ಆದಾಯ ಹೆಚ್ಚಿಸುವ ನಿಟ್ಟಿನಲ್ಲಿ ಪ್ರತ್ಯೇಕ ಅನುದಾನ ಹಾಗೂ ರಾಜ್ಯಮಟ್ಟದ 'ಹಲಸು ಅಭಿವೃದ್ಧಿ ಮಂಡಳಿ' ಸ್ಥಾಪಿಸಲು ಸರ್ಕಾರ ಕ್ರಮ ವಹಿಸುವುದೇ ?

## ಮೀನುಗಾರರ ಸುರಕ್ಷತೆ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೬ (೨೩೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮೀನುಗಾರರ ಸುರಕ್ಷತೆಗೆ ಸಂಬಂಧಿಸಿದಂತೆ ನೀಡುವ ಲೈಫ್ ಜಾಕೆಟ್‌ಗಳನ್ನು ವಿತರಿಸಲಾಗುತ್ತಿದೆಯೇ ;

(ಆ) ವಿತರಿಸುತ್ತಿದ್ದರೆ, ಕಳೆದ ೩ ವರ್ಷಗಳಲ್ಲಿ ಎಷ್ಟು ಮೀನುಗಾರರಿಗೆ ವಿತರಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು);

(ಇ) ಪುಸ್ತುತ ೨೦೨೬–೨೭ನೇ ಸಾಲಿನಲ್ಲಿ ಎಷ್ಟು ಅನುದಾನವನ್ನು ಮೀನುಗಾರರ ಲೈಫ್ ಜಾಕೆಟ್‌ಗಳಿಗೆ ಮೀಸಲಿಡಲಾಗಿದೆ ; ಪ್ರಸ್ತುತ ಒಂದು ಲೈಫ್ ಜಾಕೆಟ್‌ನ ಮಾರುಕಟ್ಟೆ ಬೆಲೆ ಎಷ್ಟು ; ಲೈಫ್ ಜಾಕೆಟ್‌ಗಳನ್ನು ಎಷ್ಟು ಮೀನುಗಾರರಿಗೆ ವಿತರಿಸಲಾಗಿದೆ ; ಇಲ್ಲವಾದಲ್ಲಿ ಯಾವಾಗ ವಿತರಿಸಲಾಗುವುದು ; ಇನ್ನೂ ಕೂಡ ಎಷ್ಟು ಮೀನುಗಾರರಿಗೆ ಲೈಫ್ ಜಾಕೆಟ್ ವಿತರಿಸಲು ಬಾಕಿ ಇದೆ ; ಲೈಫ್ ಜಾಕೆಟ್‌ನ ಬಾಳಿಕೆ ಅವಧಿ ಎಷ್ಟು ;

(ಈ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಕರಾವಳಿ ಭಾಗಗಳಲ್ಲಿ ಎಷ್ಟು ಮೀನುಗಾರರು ಅವಘಡಗಳಿಂದ ಸಾವನ್ನಪ್ಪಿದ್ದಾರೆ ;

(ಜಿಲ್ಲಾವಾರು ವಿವರ ನೀಡುವುದು) ; ಅವಘಡಗಳಿಂದ ಸಾವನ್ನಪ್ಪಿದ ಮೀನುಗಾರರ ಕುಟುಂಬಕ್ಕೆ ಎಷ್ಟು ಪರಿಹಾರ ಧನವನ್ನು ನೀಡಲಾಗಿದೆ ;

(ಉ) ರಾಜ್ಯದಲ್ಲಿ ಕರಾವಳಿ ಮೀನುಗಾರರ ಸುರಕ್ಷತೆಯ ದೃಷ್ಟಿಯಿಂದ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ? (ವಿವರ ಒದಗಿಸುವುದು)

## ಕೃಷಿ ಇಲಾಖೆಯ ಯೋಜನೆಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೭ (೨೮೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಭಾಗ್ಯ ಯೋಜನೆ ಅಡಿಯಲ್ಲಿ ಒಳಪಡುವ ಕಾಮಗಾರಿಗಳು ಯಾವುವು ; ಅವುಗಳ ಪಟ್ಟಿಯನ್ನು ಒದಗಿಸುವುದು ; ಕೃಷಿ ಭಾಗ್ಯ ಯೋಜನೆ ಅಡಿಯಲ್ಲಿ ಹಾಕಿಕೊಂಡಿರುವ ಭೌತಿಕ ಹಾಗೂ ಆರ್ಥಿಕ ಗುರಿಗಳೆಷ್ಟು ; (ಕಾಮಗಾರಿವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಆ) ಇತ್ತೀಚೆಗೆ ಕೃಷಿ ಹೊಂಡದಲ್ಲಿ ಬಿದ್ದು ಸಾವನ್ನಪ್ಪುತ್ತಿರುವ ಮಕ್ಕಳ ಸಂಖ್ಯೆ ಜಾಸ್ತಿ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಇ) ಕೃಷಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು; ಅವುಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು; (ಖಾಲಿ ಹುದ್ದೆಗಳ ಮಾಹಿತಿಯನ್ನು ತಾಲ್ಲೂಕುವಾರು ಮತ್ತು ಹುದ್ದೆವಾರು ನೀಡುವುದು)

(ಈ) ಖಾಲಿ ಹುದ್ದೆಗಳಿಂದ ಇಲಾಖೆಗೆ ಆಗುತ್ತಿರುವ ತೊಂದರೆಗೆ ಸರ್ಕಾರ ಪರ್ಯಾಯ ವ್ಯವಸ್ಥೆಯನ್ನು ಮಾಡಿದೆಯೇ ? (ಸಂಪೂರ್ಣ ಮಾಹಿತಿಯನ್ನು ನೀಡುವುದು)

## ವಸತಿ ಯೋಜನೆಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೮ (೨೯೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ವಸತಿ ಇಲಾಖೆಯ ವಿವಿಧ ವಸತಿ ಯೋಜನೆ ಅಡಿಯಲ್ಲಿ ಮಂಜೂರಾದ ಮನೆಗಳೆಷ್ಟು ; ( ಸಂಪೂರ್ಣ ಮಾಹಿತಿಯನ್ನು ವಿಧಾನಸಭಾವಾರು ನೀಡುವುದು)

(ಆ) ವಿವಿಧ ವಸತಿ ಯೋಜನೆ ಅಡಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಇರುವ ಮಾನದಂಡಗಳು ಯಾವುವು ; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಇ) ಸದರಿ ಯೋಜನೆಯಡಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಹಣ ತೆಗೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು ? (ಪ್ರಕರಣವಾರು ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

## ಸಹಕಾರ ಇಲಾಖೆಯ ಯೋಜನೆಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೯ (೨೯೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ಇಲಾಖೆಯಲ್ಲಿ ರೈತರಿಗಾಗಿ ಇರುವ ವಿವಿಧ ಸಾಲದ ಯೋಜನೆಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ಸಹಕಾರ ಇಲಾಖೆಯಡಿ ಬರುವ ಬ್ಯಾಂಕುಗಳಲ್ಲಿ ಮತ್ತು ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳಲ್ಲಿ ಇಲ್ಲಿಯವರೆಗೆ ಸಾಲದ ಯೋಜನೆಯಡಿಯಲ್ಲಿ ರೈತರಿಗೆ ಎಷ್ಟು ಮೊತ್ತದ ಸಾಲವನ್ನು ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ಮತ್ತು ಖಾಲಿ ಇರುವ ಸಂಖ್ಯೆ ಎಷ್ಟು ;

(ಈ) ಖಾಲಿ ಇರುವ ಸಿಬ್ಬಂದಿಗಳ ಕೊರತೆಯಿಂದ ರೈತರಿಗೆ ಮತ್ತು ಸಾರ್ವಜನಿಕರಿಗೆ ಪದೇ ಪದೇ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ತುಂಬಿಕೊಳ್ಳಲು ಸರ್ಕಾರದ ಮುಂದಿನ ಕ್ರಮಗಳೇನು ಮತ್ತು ಯಾವ ಕಾಲಮಿತಿಯೊಳಗೆ ಖಾಲಿ ಇರುವ ಹುದ್ದೆಗಳಿಗೆ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಹಾಪ್‌ಕಾಮ್ಸ್ ಮಳಿಗೆ ಹಾಗೂ ಸಿಬ್ಬಂದಿಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೦ (೨೮೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಹಾಪ್‌ಕಾಮ್ಸ್ ಮಳಿಗೆಗಳ ಸಂಖ್ಯೆ ಎಷ್ಟು; ಪ್ರಸ್ತುತ ಎಷ್ಟು ಮಳಿಗೆಗಳು ವಹಿವಾಟು ನಡೆಸುತ್ತಿವೆ ; ಎಷ್ಟು ಮಳಿಗೆಗಳನ್ನು ಮುಚ್ಚಲಾಗಿದೆ ; ಮುಚ್ಚಿದ್ದಲ್ಲಿ, ಇದಕ್ಕೆ ಕಾರಣಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹಾಪ್‌ಕಾಮ್ಸ್ ಮಳಿಗೆಗಳಲ್ಲಿ ಯಾವ ಯಾವ ಪದಾರ್ಥಗಳನ್ನು ಮಾರಾಟಮಾಡಬೇಕೆಂಬ ನಿಯಮವಿದೆಯೆ ; ಇದ್ದಲ್ಲಿ, ಪದಾರ್ಥಗಳ ಸಮೇತ ಪೂರ್ಣ ಮಾಹಿತಿ ನೀಡುವುದು ;

(ಇ) ಪ್ರಸ್ತುತ ಎಷ್ಟು ಸಿಬ್ಬಂದಿಗಳು ಹಾಪ್‌ಕಾಮ್ಸ್ ಮಳಿಗೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ; ಖಾಲಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಸಿಬ್ಬಂದಿಯ ಕೊರತೆಯಿಂದ ಮಳಿಗೆಗಳಲ್ಲಿ ಕೆಲಸ ಕಾರ್ಯಕ್ಕೆ ತೊಂದರೆಯಾಗುತ್ತಿಲ್ಲವೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಪಶುಸಂಗೋಪನೆ ಹಾಗೂ ಮೀನುಗಾರಿಕೆಯ ಯೋಜನೆ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೧ (೨೮೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶುಸಂಗೋಪನೆ ಹಾಗೂ ಮೀನುಗಾರಿಕೆ ಇಲಾಖೆಯಿಂದ ರೈತರಿಗಾಗಿ ಒದಗಿಸಿರುವ ವಿವಿಧ ಯೋಜನೆಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ಪಶುಸಂಗೋಪನೆ ಹಾಗೂ ಮೀನುಗಾರಿಕೆ ಇಲಾಖೆಯಡಿ ಇಲ್ಲಿಯವರೆಗೆ ವಿವಿಧ ಯೋಜನೆಯಡಿಯಲ್ಲಿ ರೈತರಿಗೆ ಎಷ್ಟು ಮೊತ್ತದ ಅನುದಾನವನ್ನು ನೀಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ರಾಜ್ಯದ ಪಶುಸಂಗೋಪನೆ ಹಾಗೂ ಮೀನುಗಾರಿಕೆ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ಮತ್ತು ಖಾಲಿ ಇರುವ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಖಾಲಿ ಇರುವ ಸಿಬ್ಬಂದಿಗಳ ಕೊರತೆಯಿಂದ ರೈತರಿಗೆ ಮತ್ತು ಸಾರ್ವಜನಿಕರಿಗೆ ಪದೇ ಪದೇ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ತುಂಬಿಕೊಳ್ಳಲು ಸರ್ಕಾರದ ಮುಂದಿನ ಕ್ರಮಗಳೇನು ಮತ್ತು ಯಾವ ಕಾಲಮಿತಿಯೊಳಗೆ ಖಾಲಿ ಇರುವ ಜಾಗದಲ್ಲಿ ಸಿಬ್ಬಂದಿಗಳ ನೇಮಕ ಮಾಡಿಕೊಳ್ಳಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಕೃಷಿ ಅಧಿಕಾರಿ ಹಾಗೂ ಸಹಾಯಕ ಕೃಷಿ ಅಧಿಕಾರಿ ಮತ್ತು ಇತರ ಕೃಷಿ ಸಂಬಂಧಿತ ಹುದ್ದೆಗಳ ನೇಮಕಾತಿ ನಿಯಮಗಳು, ಅರ್ಹತಾ ಮಾನದಂಡಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೨ (೨೦೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಅಧಿಕಾರಿ ಹಾಗೂ ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳ ನೇಮಕಾತಿಗೆ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳು ಯಾವುವು ; ಅವುಗಳನ್ನು ಕೊನೆಯದಾಗಿ ಯಾವಾಗ ಪರಿಷ್ಕರಸಲಾಗಿದೆ ; ಕೃಷಿ ಶಿಕ್ಷಣದಲ್ಲಿನ ಬದಲಾವಣೆ, ICAR, UGC,AICTE ಹಾಗೂ ಕೃಷಿ ವಿಶ್ವವಿದ್ಯಾಲಯಗಳ ಶಿಫಾರಸ್ಸುಗಳನ್ನು ಪರಿಗಣಿಸಿ ಯಾವುದೇ ಕೃಷಿ ಸಂಬಂಧಿತ ಹುದ್ದೆಗಳ ನೇಮಕಾತಿ ಕುರಿತಂತೆ ವಿಶೇಷತಜ್ಞರಿಂದ ವರದಿ ಪಡೆಯಲಾಗಿದೆಯೇ ;

(ಆ) ಈ ಹುದ್ದೆಗಳಿಗೆ ಬಿ.ಎಸ್.ಸಿ (B,Sc) ಕೃಷಿ ಮತ್ತು ತೋಟಗಾರಿಕೆ, ಬಿ.ಟೆಕ್ ಕೃಷಿ ತಾಂತ್ರಿಕತೆ, ಬಿ.ಇ Biotechnology, ಬಿ.ಇ ಆಹಾರ ತಾಂತ್ರಿಕತೆ ಹಾಗೂ ಇತರೆ ಪದವಿಗಳನ್ನು ಅರ್ಹವೆಂದು ಪರಿಗಣಿಸಿರುವ ಬಗ್ಗೆ ವೈಜ್ಞಾನಿಕ, ತಾಂತ್ರಿಕ ಮತ್ತು ಕಾನೂನು ಆಧಾರಗಳೇನು ; ಪ್ರತಿಯೊಂದು ವಿದ್ಯಾರ್ಹತೆಯನ್ನು ಕೃಷಿ ಇಲಾಖೆಯ ಹುದ್ದೆಯ ಕರ್ತವ್ಯಗಳೊಂದಿಗೆ ಹೊಂದಾಣಿಕೆ ಮಾಡಲಾಗಿದೆಯೇ ;

(ಇ) ಕೃಷಿ ವಿಸ್ತರಣಾ ಸೇವೆ, ಮಣ್ಣು ಪರೀಕ್ಷೆ, ಬೆಳೆ ಸಂರಕ್ಷಣೆ, ರಸಗೊಬ್ಬರ ನಿರ್ವಹಣೆ, ಕೀಟ ಮತ್ತು ರೋಗ ನಿರ್ವಹಣೆ, ರೈತರ ಸಲಹಾ ಸೇವೆಗಳಿಗೆ ICAR ನಿಯಮಾವಳಿಯಂತೆ ಈ ಮೇಲಿನ ಕೃಷಿ ಪದವೀಧರರು ಸೇವೆ ಸಲ್ಲಿಸಲು ಅರ್ಹತೆ ಹೊಂದಿದ್ದಾರೆಯೇ ;

(ಈ) KEA ಅಧಿಸೂಚನೆ ಹೊರಡಿಸುವ ಮೊದಲು ಕೃಷಿ ಇಲಾಖೆ, ಕೃಷಿ ವಿಶ್ವವಿದ್ಯಾಲಯಗಳು, ಕರ್ನಾಟಕ ಲೋಕಸೇವಾ ಆಯೋಗ, ಕಾನೂನು ಇಲಾಖೆ ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಗಳೊಂದಿಗೆ ಕಡ್ಡಾಯ ಸಮಾಲೋಚನೆ ನಡೆಸಲಾಗಿತ್ತೇ ; ಇಲ್ಲದಿದ್ದರೆ, ಅದಕ್ಕೆ ಕಾರಣವೇನು ;

(ಉ) ಭವಿಷ್ಯದಲ್ಲಿ ಕೃಷಿ ಇಲಾಖೆಯಲ್ಲಿ ನೇಮಕಾತಿ ವಿವಾದಗಳನ್ನು ತಪ್ಪಿಸಲು ಸಮರ್ಪಕವಾಗಿ C&R Rules ಪರಿಷ್ಕರಣೆ ಮಾಡುವ ಬಗ್ಗೆ ಸರ್ಕಾರ ಯಾವಾಗ ನಿರ್ಧಾರ ಕೈಗೊಳ್ಳುವುದು ?

## ಮಂಗಳೂರು ಹಳೆ ಬಂದರಿನ ಅಳಿವೆ ಬಾಗಿಲಿನ ಕ್ಯಾಪಿಟಲ್ ಡ್ರೆಜ್ಜಿಂಗ್ ಯೋಜನೆ ವಿಳಂಬ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೩ (೨೦೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ಸಾಗರಮಾಲ ಯೋಜನೆಯಡಿ ಮಂಗಳೂರು ಹಳೆ ಬಂದರಿನ ಧಕ್ಕೆಯಿಂದ ಅಳಿವೆ ಬಾಗಿಲುವರೆಗೆ ಸುಮಾರು ೪.೧ ಕಿಮೀ. ಉದ್ದಕ್ಕೆ ೭ಮೀಟರ್ ಆಳದವರೆಗೆ ಕ್ಯಾಪಿಟಲ್ ಡ್ರೆಜ್ಜಿಂಗ್ ಕಾಮಗಾರಿಗೆ ನೀಡಲಾಗಿದ್ದ ಆಡಳಿತಾತ್ಮಕ ಹಾಗೂ ತಾಂತ್ರಿಕ ಅನುಮೊದನೆಯನ್ನು ಹಿಂಪಡೆಯಲು ಕಾರಣಗಳೇನು ; ಇದುವರೆಗೆ ಕರೆದ ಒಂಭತ್ತು ಟೆಂಡರ್‌ಗಳ ವಿವರ, ಟೆಂಡರ್ ವಿಫಲವಾದ ಕಾರಣಗಳು ತಾಂತ್ರಿಕವಾಗಿ ಅನರ್ಹಗೊಂಡ ಬಿಡ್‌ಗಳ ವಿವರಗಳನ್ನು ಒದಗಿಸುವುದು ;

(ಆ) ಈ ಯೋಜನೆಯ ಅಂದಾಜು ವೆಚ್ಚ, ಪರಿಷ್ಕೃತ ವೆಚ್ಚ, ಕೇಂದ್ರ–ರಾಜ್ಯ ಅನುದಾನದ ಪಾಲು. ಟೆಂಡರ್ ಷರತ್ತುಗಳು, ಅರ್ಹ ಗುತ್ತಿಗೆದಾರರ ಕೊರತೆ ಹಾಗೂ ಬಿಡ್‌ದಾರರ ಅಭಾವದ ಕುರಿತು ಸರ್ಕಾರ ತಾಂತ್ರಿಕ ಅಥವಾ ನೀತಿ ಪರಿಶೀಲನೆ ನಡೆಸಿರುವ ಬಗ್ಗೆ ಮಾಹಿತಿ ಒದಗಿಸುವುದು ;

(ಇ) ಡ್ರೆಜ್ಜಿಂಗ್ ಕಾಮಗಾರಿ ವಿಳಂಬದಿಂದ ಮೀನುಗಾರಿಕಾ ದೋಣಿಗಳ ಸಂಚಾರ, ಮೀನುಗಾರರ ಸುರಕ್ಷತೆ, ಹಳೆ ಬಂದರಿನ ಕಾರ್ಯಕ್ಷಮತೆ, ಸಮುದ್ರ ವ್ಯಾಪಾರ ಹಾಗೂ ಸ್ಥಳೀಯ ಆರ್ಥಿಕತೆಗೆ ಉಂಟಾದ ಪರಿಣಾಮದ ಕುರಿತ ಅಧ್ಯಯನ ನಡೆಸಿರುವುದರ ವರದಿಯ ಮಾಹಿತಿ ಒದಗಿಸುವುದು ;

(ಈ) ಯೋಜನೆಯನ್ನು ಪುನಃ ಮಂಜೂರು ಮಾಡಿಸಲು ಕೇಂದ್ರ ಸರ್ಕಾರಕ್ಕೆ ಹೊಸ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ; ಸಲ್ಲಿಸಿದ್ದರೆ, ಅದರ ಪ್ರಸ್ತುತ ಸ್ಥಿತಿ, ಡ್ರೆಜ್ಜಿಂಗ್ ಕಾಮಗಾರಿ ಆರಂಭಿಸುವ ಕಾಲಬದ್ಧ ಕಾರ್ಯಯೋಜನೆ, ಶಾಶ್ವತ ನಿರ್ವಹಣಾ ಡ್ರೆಜ್ಜಿಂಗ್ (Maintenance Dredging) ನೀತಿ ಹಾಗೂ ಭವಿಷ್ಯದಲ್ಲಿ ಇಂತಹ ವಿಳಂಬ ಮರುಕಳಿಸದಂತೆ ಕೈಗೊಂಡಿರುವ ಕ್ರಮಗಳೇನು ?

## ಪೌರಾಡಳಿತ ಸಂಸ್ಥೆಗಳಲ್ಲಿ ತ್ಯಾಜ್ಯ ವಿಂಗಡಣೆ, ಸಂಗ್ರಹಣೆ ಸಂಸ್ಕರಣೆ ಹಾಗೂ ಘನ ತ್ಯಾಜ್ಯ ನಿರ್ವಹಣೆಯ ಅನುಷ್ಠಾನ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೪ (೨೧೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ, ಪೌರಾಡಳಿತ ಸಂಸ್ಥೆಗಳಲ್ಲಿ ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–೨೦೧೬ರ ಅನ್ವಯ ಮೂಲದಲ್ಲೇ ತ್ಯಾಜ್ಯ ವಿಂಗಡಣೆ (Source Segregation) ಕಡ್ಡಾಯವಾಗಿ ಜಾರಿಯಲ್ಲಿದೆಯೇ ; ಇದ್ದರೆ, ಸ್ಥಳೀಯ ಸಂಸ್ಥೆವಾರು ವಿವರ ಒದಗಿಸವುದು ;

(ಆ) ಸ್ಥಳೀಯ ಸಂಸ್ಥೆಗಳಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಎಲ್ಲಾ ಪೌರಾಡಳಿತ ನಗರ ತೇವ, ಒಣ, ಗೃಹ ಅಪಾಯಕಾರಿ, ಸ್ಯಾನಿಟರಿ, ಇ–ತ್ಯಾಜ್ಯ ಹಾಗೂ ನಿರ್ಮಾಣ–ಧ್ವಂಸ (C&D) ತ್ಯಾಜ್ಯಗಳನ್ನು ಪ್ರತ್ಯೇಕವಾಗಿ ಸಂಗ್ರಹಣೆ, ಸಾಗಣೆ, ಸಂಸ್ಕರಣೆ ಮತ್ತು ವಿಲೇವಾರಿ ಮಾಡಲು ಅಗತ್ಯ ಮೂಲಸೌಕರ್ಯ, ಸಂಸ್ಕರಣಾ ಘಟಕಗಳು ಹಾಗೂ ವೈಜ್ಞಾನಿಕ ವ್ಯವಸ್ಥೆ ಲಭ್ಯವಿದೆಯೇ: ಇಲ್ಲದಿದ್ದಲ್ಲಿ, ಪ್ರಸ್ತುತ ಯಾವ ರೀತಿಯಲ್ಲಿ ತ್ಯಾಜ್ಯ ವಿಲೇವಾರಿ ಮಾಡಲಾಗುತ್ತಿದೆ ;

(ಇ) ಕಳೆದ ಮೂರು ವರ್ಷಗಳಲ್ಲಿ ತ್ಯಾಜ್ಯ ವಿಂಗಡಣೆ ನಿಯಮ ಉಲ್ಲಂಘಿಸಿದ ಮನೆಗಳು, ಬಹುಮಹಡಿ ಕಟ್ಟಡಗಳು, ವಾಣಿಜ್ಯ ಸಂಸ್ಥೆಗಳು ಹಾಗೂ ಸಂಸ್ಥೆಗಳ ವಿರುದ್ಧ ಜಿಲ್ಲಾವಾರು ಎಷ್ಟು ಪ್ರಕರಣಗಳನ್ನು ದಾಖಲಿಸಿ, ಎಷ್ಟು ದಂಡ ವಿಧಿಸಲಾಗಿದೆ ;

ಎಷ್ಟು ಪೌರಾಡಳಿತ ನಗರ ಸ್ಥಳೀಯ ಸಂಸ್ಥೆಗಳು ಸ್ವಚ್ಛ ಸರ್ವೇಕ್ಷಣೆ ಹಾಗೂ ರಾಜ್ಯ ಕಾರ್ಯಕ್ಷಮತಾ ಮಾನದಂಡಗಳನ್ನು ಪೂರೈಸಿವೆ ;

(ಈ) ರಾಜ್ಯದಲ್ಲಿ ಶೇ.೧೦೦ ಮೂಲಮಟ್ಟದ ತ್ಯಾಜ್ಯ ವಿಂಗಡಣೆ ಸಾಧಿಸಲು ಡಿಜಿಟಲ್ ಮೇಲ್ವಿಚಾರಣೆ, GPS ಆಧಾರಿತ ತ್ಯಾಜ್ಯ ಸಂಗ್ರಹಣೆ, ಸಾರ್ವಜನಿಕ ಜಾಗೃತಿ, ನಾಗರಿಕರ ಪಾಲ್ಗೊಳ್ಳುವಿಕೆ, ದಂಡಾತ್ಮಕ ಕ್ರಮಗಳು ಹಾಗೂ ಕಾರ್ಯಕ್ಷಮತೆ ಆಧಾರಿತ ಮೌಲ್ಯಮಾಪನ ವ್ಯವಸ್ಥೆಯನ್ನು ಜಾರಿಗೊಳಿಸಲು ಸರ್ಕಾರ ರೂಪಿಸಿರುವ ಕಾಲಬದ್ಧ ಕಾರ್ಯಯೋಜನೆಗಳೇನು ? (ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಮೀನುಗಾರಿಕೆ ಕಾಲೇಜುಗಳ ಮೂಲಭೂತ ಸೌಲಭ್ಯಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೫ (೨೦೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಮೀನುಗಾರಿಕೆ ಕಾಲೇಜುಗಳು ಯಾವುವು ; ಕಳೆದ ವರ್ಷಗಳಲ್ಲಿ ರಾಜ್ಯ ಸರ್ಕಾರವು ಈ ಕಾಲೇಜುಗಳಿಗೆ ವರ್ಷವಾರು ಎಷ್ಟು ಅನುದಾನವನ್ನು ಬಿಡುಗಡೆ ಮಾಡಿದೆ ; ಅನುದಾನವನ್ನು ಯಾವ ಯಾವ ಮೂಲಸೌಕರ್ಯ ಅಭಿವೃದ್ಧಿ, ಶೈಕ್ಷಣಿಕ, ಸಂಶೋಧನಾ ಹಾಗೂ ವಿದ್ಯಾರ್ಥಿ ಕಲ್ಯಾಣ ಕಾರ್ಯಕ್ರಮಗಳಿಗೆ ಬಳಸಲಾಗಿದೆ ;

(ಆ) ಮಂಗಳೂರು ಮೀನುಗಾರಿಕೆ ಕಾಲೇಜಿನಲ್ಲಿ ಪ್ರಸ್ತುತ ಲಭ್ಯವಿರುವ ಮೂಲಭೂತ ಸೌಲಭ್ಯಗಳು ಯಾವುವು; ಕಾಲೇಜಿನಲ್ಲಿ ಮಂಜೂರಾದ ಮತ್ತು ಕಾರ್ಯನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ

ಹುದ್ದೆಗಳ ಸಂಖ್ಯೆ, ಭರ್ತಿಯಾದ ಮತ್ತು ಖಾಲಿ ಇರುವ ಹುದ್ದೆಗಳ ವಿವರ ನೀಡುವುದು ; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ಅವುಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ;

(ಇ) ಮಂಗಳೂರು ಮೀನುಗಾರಿಕೆ ಕಾಲೇಜಿನಲ್ಲಿ ಘೋಷಿಸಲಾದ Centre of Excellence ಸ್ಥಾಪನೆ ಯಾವ ಹಂತದಲ್ಲಿದೆ; ಇದುವರೆಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ ಹಾಗೂ ಕಾಮಗಾರಿ ಯಾವಾಗ ಪೂರ್ಣಗೊಳ್ಳುವುದು ;

(ಈ) ಕಾಲೇಜಿನಲ್ಲಿ ಹೊಸ ಶೈಕ್ಷಣಿಕ ಕಟ್ಟಡಗಳು, ಆಧುನಿಕ ಪ್ರಯೋಗಾಲಯಗಳು, ವಿದ್ಯಾರ್ಥಿ ವಸತಿ ನಿಲಯಗಳು ಹಾಗೂ ಸಂಶೋಧನಾ ಸೌಭ್ಯಗಳ ಅಭಿವೃದ್ಧಿಗೆ ಸರ್ಕಾರ ಹೊಸ ಯೋಜನೆಗಳನ್ನು ರೂಪಿಸಿರುವುದೇ ; ರೂಪಿಸಿದ್ದರೆ, ಅದರ ವಿವರವೇನು ;

(ಉ) ರಾಜ್ಯದ ಕರಾವಳಿ ಭಾಗದ ಮೀನುಗಾರಿಕೆ ಕ್ಷೇತ್ರದ ಅಗತ್ಯಕ್ಕೆ ಅನುಗುಣವಾಗಿ ಹೊಸ ಮೀನುಗಾರಿಕೆ ಕಾಲೇಜುಗಳು ಅಥವಾ ಪ್ರಾದೇಶಿಕ ಕ್ಯಾಂಪಸ್‌ಗಳನ್ನು ಸ್ಥಾಪಿಸುವ ಕುರಿತು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದರೆ ಅದರ ಪ್ರಸ್ತುತ ಸ್ಥಿತಿಗತಿಯ ವಿವರಗಳೇನು ?

## ಮೈಸೂರು ಜಿಲ್ಲೆಯಲ್ಲಿ ಖಾದಿ ಮತ್ತು ಗ್ರಾಮೋದ್ಯೋಗ ಸಂಸ್ಥೆಗಳ ಪ್ರಗತಿ, ಅನುದಾನ ಮತ್ತು ಕುಶಲಕರ್ಮಿಗಳ ಅಭಿವೃದ್ಧಿ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೬ (೨೨೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಮೈಸೂರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾದಿ ಮತ್ತು ಗ್ರಾಮೋದ್ಯೋಗ ಸಂಸ್ಥೆಗಳ ಕಾರ್ಯಕ್ಷಮತೆ ಹಾಗೂ ಕಾರ್ಯಸಾಧ್ಯತೆಯನ್ನು (ಉತ್ಪಾದನೆ, ಮಾರಾಟ ಮತ್ತು ಉದ್ಯೋಗ ಸೃಷ್ಟಿ) ಸರ್ಕಾರ ಪರಿಶೀಲಿಸಿದೆಯೇ ; (ಜಿಲ್ಲೆಯ ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಮೈಸೂರು ಜಿಲ್ಲೆಯಲ್ಲಿ ಪ್ರಸ್ತುತ ಸಕ್ರಿಯವಾಗಿರುವ ಖಾದಿ ಸಂಸ್ಥೆಗಳು, ನೋಂದಾಯಿತ ನೂಲುಗಾರರು, ನೇಕಾರರು ಮತ್ತು ಗ್ರಾಮೋದ್ಯೋಗ ಕುಶಲಕರ್ಮಿಗಳ ಸಂಖ್ಯೆ ಎಷ್ಟು ಹಾಗೂ ಅವರಿಗೆ ಒದಗಿಸಲಾಗಿರುವ ಸೌರ ಚರಕ ಸುಧಾರಿತ ಮಗ್ಗಗಳು ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರಗಳ (CFC) ಮೂಲಸೌಕರ್ಯಗಳ ಮಾಹಿತಿ ಒದಗಿಸುವುದು ;

(ಇ) ಕಳೆದ ಮೂರು ವರ್ಷಗಳಲ್ಲಿ ಮೈಸೂರು ಜಿಲ್ಲೆಯಲ್ಲಿ ಖಾದಿ ಅಭಿವೃದ್ಧಿ ಮಾರುಕಟ್ಟೆ ವಿಸ್ತರಣೆ ಮತ್ತು (ಮೈಸೂರು ದಸರಾ ಸೇರಿದಂತೆ) ನಗರ ಚಿಲ್ಲರೆ ವ್ಯಾಪಾರದ ಪ್ರದರ್ಶನಗಳಿಗೆ ಹಂಚಿಕೆಯಾದ, ಬಿಡುಗಡೆಯಾದ ಮತ್ತು ಬಳಸಲಾದ ಯೋಜನಾವಾರು ಅನುದಾನವೆಷ್ಟು ; (ವಿವರ ಒದಗಿಸುವುದು)

(ಈ) ಮೈಸೂರು ಜಿಲ್ಲೆಯ ಖಾದಿ ಕುಶಲಕರ್ಮಿಗಳ ಆದಾಯ ಹೆಚ್ಚಿಸಲು ಉತ್ಪನ್ನಗಳನ್ನು ಇ–ಕಾಮರ್ಸ್ ವೇದಿಕೆಗಳಿಗೆ ಜೋಡಿಸಲು, 'ಖಾದಿ ಮಾರ್ಕ್' ಬ್ರಾಂಡಿಂಗ್ ವಿಸ್ತರಿಸಲು ಮತ್ತು ಪ್ರವಾಸಿಗರನ್ನು ಆಕರ್ಷಿಸುವ ಚಿಲ್ಲರೆ ಮಾರಾಟ ಮಳಿಗೆಗಳನ್ನು ಸ್ಥಾಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಮೈಸೂರು ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆಗಳ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೭ (೨೨೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆಯಲ್ಲಿ ಪ್ರಮುಖ ತೋಟಗಾರಿಕಾ ಬೆಳೆಗಳ (ಬೆಳೆ ಮಾವು, ತೆಂಗು, ಶುಂಠಿ ಹೂವು ಮತ್ತು ತರಕಾರಿ) ಉತ್ಪಾದನಾ ಸಾಮರ್ಥ್ಯ ಮತ್ತು ಪ್ರದೇಶ ವಿಸ್ತರಣೆಯ ಸಾಧ್ಯತೆಗಳನ್ನು ಸರ್ಕಾರ ನಿರ್ಣಯಿಸಿದೆಯೇ ;

(ಆ) ಹಾಗಿದ್ದಲ್ಲಿ, ಮೈಸೂರು ಜಿಲ್ಲೆಗೆ ಸಂಬಂಧಿಸಿದಂತೆ, ಮೌಲ್ಯಮಾಪನದ ಪ್ರಮುಖ ವಿವರಗಳನ್ನು ಒದಗಿಸುವುದು ; ನಡೆಸಿರುವ ಸಮೀಕ್ಷೆ ಅಥವಾ ಮೌಲ್ಯಮಾಪನದ ಪ್ರಮುಖ ವಿವರಗಳನ್ನು ಒದಗಿಸುವುದು ;

(ಇ) ಕಳೆದ ಮೂರು ವರ್ಷಗಳಲ್ಲಿ (೨೦೨೩–೨೪, ೨೦೨೪–೨೫ ಮತ್ತು ೨೦೨೫–೨೬) ಸಮಗ್ರ ತೋಟಗಾರಿಕೆ ಅಭಿವೃದ್ಧಿ ಮಿಷನ್ (Mission for Integrated Development of Horticulture-MIDH) ಹಾಗೂ ರಾಜ್ಯದ ಇತರ ತೋಟಗಾರಿಕಾ ಯೋಜನೆಗಳ ಅಡಿಯಲ್ಲಿ ಮೈಸೂರು ಜಿಲ್ಲೆಗೆ ಹಂಚಿಕೆಯಾದ ಬಿಡುಗಡೆಯಾದ ಮತ್ತು ಬಳಸಲ್ಪಟ್ಟ ಅನುದಾನವೆಷ್ಟು ; (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

(ಈ) ಮೈಸೂರು ಜಿಲ್ಲೆಯ ತೋಟಗಾರಿಕಾ ಬೆಳಗಾರರಿಗೆ (ವಿಶೇಷವಾಗಿ ನಂಜನಗೂಡು ರಸಬಾಳೆ, ಶುಂಠಿ, ಮಾವು ಮತ್ತು ತರಕಾರಿ ಬೆಳೆಗಳು) ಮಾರುಕಟ್ಟೆಯಲ್ಲಿ ಬೆಲೆ ಕುಸಿತ ಉಂಟಾದಾಗ ಸೂಕ್ತ

ಮತ್ತು ಲಾಭದಾಯಕ ಬೆಲೆ (Remunerative Prices) ಸಿಗುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ವಸತಿ ಯೋಜನೆ

**ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೮ (೨೨೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಪ್ರಧಾನ ಮಂತ್ರಿ ಅವಾಸ್ ಯೋಜನೆ–ನಗರ (PMAY-U) ಮತ್ತು ನೂತನ ಪಿಎಂಎವೈ–ಯು ೨.೦ ಅಡಿಯಲ್ಲಿ ಎಲ್ಲರಿಗೂ ವಸತಿ ಯೋಜನೆಯ ಪ್ರಸ್ತುತ ಪ್ರಗತಿ ಯಾವ ಹಂತದಲ್ಲಿದೆ ; (ವಿವರ ಒದಗಿಸುವುದು)

(ಆ) ಮೈಸೂರು ಹಾಗೂ ಮಹಾನಗರ ಪಾಲಿಕೆ ಜಿಲ್ಲೆಯ ನಗರಸಭೆಗಳು/ ಪುರಸಭೆಗಳು ಚಾಮರಾಜನಗರ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ (ULBs) ವ್ಯಾಪ್ತಿಯಲ್ಲಿ ಈ ಯೋಜನೆಗಳ ಅಡಿಯಲ್ಲಿ ಪ್ರಗತಿಯಲ್ಲಿರುವ ಮಂಜೂರಾದ ಮತ್ತು ಪೂರ್ಣಗೊಂಡ ಕಾಮಗಾರಿಗಳ ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು ;

(ಇ) ಫಲಾನುಭವಿಗಳಿಗೆ ಅಧಿಕೃತವಾಗಿ ಹಸ್ತಾಂತರಿಸಲಾದ ಮನೆಗಳ ಸಂಖ್ಯೆ ಎಷ್ಟು ; (ನಗರ ಸ್ಥಳೀಯ ಸಂಸ್ಥೆಗಳು ಹಾಗೂ ತಾಲ್ಲೂಕುವಾರು ಸಂಪೂರ್ಣ ಅಂಕಿ–ಅಂಶಗಳನ್ನು ಒದಗಿಸುವುದು)

(ಈ) ಮುಂದಿನ ಮೂರು ವರ್ಷಗಳ ಅವಧಿಗೆ (೨೦೨೬–೨೭ ರಿಂದ ೨೦೨೮–೨೯) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ

PMAY-U 2.0 ಅಡಿಯಲ್ಲಿ ಹೊಸದಾಗಿ ವಸತಿ ಘಟಕಗಳ ಮಂಜೂರಾತಿ ಮತ್ತು ಪೂರ್ಣಗೊಳಿಸುವಿಕೆಗೆ ಸರ್ಕಾರ ನಿಗದಿಪಡಿಸಿಕೊಂಡಿರುವ ಭೌತಿಕ (Physical) ಮತ್ತು ಆರ್ಥಿಕ (Financial) ಗುರಿಗಳೇನು ?

## ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಕೃಷಿ ಯೋಜನೆಗಳ ಅನುಷ್ಠಾನ

**ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೯ (೨೨೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಭಾರತೀಯ ಕೃಷಿ ಸಂಶೋಧನಾ ಮಂಡಳಿ(ICAR) ಹಾಗೂ ಕೃಷಿ ವಿಜ್ಞಾನ ಕೇಂದ್ರಗಳ (KVK) ಮೂಲಕ ಜಾರಿಗೆ ತರಲಾಗುತ್ತಿರುವ ಪೌಷ್ಠಿಕ-ಸೂಕ್ಷ್ಮ ಕೃಷಿ-ಸಂಪನ್ಮೂಲಗಳು ಮತ್ತು ನಾವಿನ್ಯತೆಗಳು (Nutri-Sensitive Agricultural Resources and Innovations- NARI) ಯೋಜನೆಯನ್ನು ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಅನಷ್ಠಾನಗೊಳಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಗ್ರಾಮೀಣ ಮತ್ತು ಗಿರಿಜನ (ಬುಡಕಟ್ಟು) (Tribal) ಪ್ರದೇಶಗಳಲ್ಲಿ, ವಿಶೇಷವಾಗಿ ಮಹಿಳೆಯರು ಮತ್ತು ಮಕ್ಕಳಲ್ಲಿ ಕಂಡುಬರುವ ಅಪೌಷ್ಠಿಕತೆ ಹಾಗೂ ರಕ್ತಹೀನತೆಯನ್ನು (Anemia) ನೀಗಿಸಲು NARI ಯೋಜನೆಯಡಿ ಹಮ್ಮಿಕೊಳ್ಳಲಾಗಿರುವ ಪ್ರಮುಖ ಉದ್ದೇಶಗಳು ಹಾಗೂ ಕಾರ್ಯವಿಧಾನಗಳೇನು ;

(ಇ) ದೇಶಾದ್ಯಂತ ಮಾದರಿಯಾಗಿ ಆಯ್ಕೆ ಮಾಡಲಾದ "ಪೌಷ್ಠಿಕ-ಸ್ಮಾರ್ಟ್ ಗ್ರಾಮಗಳಲ್ಲಿ" (Nutri-Smart Villages) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಿಂದ ಆಯ್ಕೆಯಾಗಿರುವ ಗ್ರಾಮಗಳ ಸಂಖ್ಯೆ ಮತ್ತು ಅವುಗಳ ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು ;

(ಈ) ಈ ಗ್ರಾಮಗಳಲ್ಲಿ ಯೋಜನೆ ಅನುಷ್ಠಾನಕ್ಕಾಗಿ ಮಹಿಳಾ ರೈತರಿಗೆ ನೀಡಲಾಗಿರುವ ತರಬೇತಿ ಪೌಷ್ಠಿಕ ತೋಟಗಳ ಸ್ಥಾಪನೆ ಮತ್ತು ಪ್ರಾತ್ಯಕ್ಷಿಕೆಗಳ (Demos) ಪ್ರಸ್ತುತ ಸ್ಥಿತಿಗತಿ ಯಾವ ಹಂತದಲ್ಲಿದೆ ?

## ಮಂಡ್ಯ ಕೃಷಿ ವಿಜ್ಞಾನಗಳ ವಿವಿ-ಅಧ್ಯಾಪಕರ ಮತ್ತು ಬೋಧಕೇತರ ನೌಕರರ ಹುದ್ದೆ ಭರ್ತಿ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೨೦೦ (೨೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯಗೆ ವಿವಿಧ ವಿಷಯಗಳಲ್ಲಿ ಮಂಜೂರಾದ, ಭರ್ತಿಯಾದ ಮತ್ತು ಖಾಲಿ ಇರುವ ಅಧ್ಯಾಪಕರ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ವಿವಿಧ ವಿಷಯಗಳಲ್ಲಿ ಖಾಲಿಯಿರುವ ಅಧ್ಯಾಪಕರ ಮತ್ತು ಬೋಧಕೇತರ ಸಿಬ್ಬಂದಿಗಳ ನೇಮಕಾತಿಗೆ ಕ್ರಮ ವಹಿಸಲಾಗಿದೆಯೇ ; ಇದ್ದಲ್ಲಿ, ಎಷ್ಟು ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ಆರಂಭಿಸಲಾಗಿರುತ್ತದೆ ; (ಸಂಪೂರ್ಣ ವಿವರ ನೀಡುವುದು)

(ಇ) ವಿಶ್ವವಿದ್ಯಾಲಯದಲ್ಲಿ ಯಾವ ಯಾವ ವಿಷಯಗಳಲ್ಲಿ ಸ್ನಾತಕೋತ್ತರ ಮತ್ತು ಪಿ.ಹೆಚ್.ಡಿ ಕಲಿಯಲು/ ಸಂಶೋಧನೆ ಕೈಗೊಳ್ಳಲು ಅವಕಾಶ ನೀಡಲಾಗಿದೆ ? (ವಿವರವಾದ ಮಾಹಿತಿ ನೀಡುವುದು)

## ತೋಟಗಾರಿಕೆ–ಹವಾಮಾನ ಆಧಾರಿತ ಬೆಳೆ ವಿಮಾ ಕ್ಲೇಮುಗಳ ಇತ್ಯರ್ಥ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೨೦೧ (೨೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕೆ ಬೆಳೆಗಳಿಗೆ ಸಂಬಂಧಿಸಿದಂತೆ ಹವಾಮಾನ ಆಧಾರಿತ ಬೆಳೆ ವಿಮಾ ಕ್ಲೇಮುಗಳನ್ನು ಕೆಲವು ಜಿಲ್ಲೆಗಳಲ್ಲಿ ಇತ್ಯರ್ಥಪಡಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅದಕ್ಕೆ ಕಾರಣಗಳೇನು ;

(ಆ) ವಿಮಾ ಕ್ಲೇಮುಗಳಿಗೆ ಸಂಬಂಧಿಸಿದಂತೆ ಜಿಲ್ಲಾವಾರು ಇತ್ಯರ್ಥಪಡಿಸಿರುವ ಹಾಗೂ ಇತ್ಯರ್ಥಪಡಿಸಲು ಬಾಕಿಯಿರುವ ಮೊತ್ತ ಎಷ್ಟು ; ಜಿಲ್ಲೆ, ನೋಂದಾಯಿಸಿದ ರೈತರ ಸಂಖ್ಯೆ, ಅರ್ಹ ರೈತರ ಅರ್ಜಿಗಳ ಸಂಖ್ಯೆ, ಲೆಕ್ಕ ಹಾಕಿರುವ ವಿಮಾ ಪರಿಹಾರ ಮೊತ್ತ, ಇತ್ಯರ್ಥಪಡಿಸಲಾದ ಅರ್ಜಿಗಳ ಸಂಖ್ಯೆ, ಪಾವತಿಸಿದ ಮೊತ್ತ, ಬಾಕಿಯಿರುವ ಅರ್ಜಿಗಳ ಸಂಖ್ಯೆ, ಪಾವತಿಗೆ ಬಾಕಿಯಿರುವ ವಿಮಾ ಮೊತ್ತದ ಸಂಪೂರ್ಣ ಮಾಹಿತಿ ನೀಡುವುದು ;

(ಇ) ವಿಮಾ ಪರಿಹಾರವನ್ನು ಯಾವ ರೀತಿ ಲೆಕ್ಕ ಹಾಕಲಾಗುತ್ತದೆ ಹಾಗೂ ಬಾಕಿಯಿರುವ ವಿಮಾ ಕ್ಲೇಮುಗಳನ್ನು ಯಾವ ಕಾಲಮಿತಿಯೊಳಗೆ ಇತ್ಯರ್ಥಪಡಿಸಲು ಕ್ರಮವಹಿಸಲಾಗುವುದು ; (ವಿವರ ನೀಡುವುದು)

(ಈ) ತೋಟಗಾರಿಕೆ ಬೆಳೆ ವಿಮಾ ನೋಂದಣಿಯ ಕಡೇ ದಿನಾಂಕವನ್ನು ವಿಸ್ತರಿಸುವ ಕುರಿತು ಸರ್ಕಾರದ ಕ್ರಮವೇನು ?

## ಮಂಡ್ಯ ನಗರಸಭೆ ಮತ್ತು ಗ್ರಾಮ ಪಂಚಾಯಿತಿಗಳ ಗಡಿ ಗುರುತಿಸುವಿಕೆಯಲ್ಲಿ ಸ್ಪಷ್ಟತೆ ಇಲ್ಲದಿರುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೨೦೨ (೨೪೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗೆಜೆಟೆಡ್ ನೋಟಿಫಿಕೇಷನ್ ಪ್ರಕಾರ, ಮಂಡ್ಯ ನಗರಸಭೆ ಹಾಗೂ ನಗರಸಭೆಗೆ ಹೊಂದಿಕೊಂಡತ್ತಿರುವ ಗ್ರಾಮ ಪಂಚಾಯಿತಿಗಳ ಗಡಿಯನ್ನು ಜಂಟಿ ಸರ್ವೆ ಮೂಲಕ ಗುರುತಿಸಲು ರಚಿಸಿದ್ದ 'ಪರಿಶೀಲನಾ ಸಮಿತಿ' (ತಂಡ) ಗಡಿಗಳನ್ನು ಗುರುತಿಸಿ ವರದಿ ಸಲ್ಲಿಸಿದೆಯೇ ;

(ಆ) 'ಪರಿಶೀಲನಾ ತಂಡ' ವಾಸ್ತವವಾಗಿ ಯಾವ ಅವಧಿಯೊಳಗೆ ವರದಿ ಸಲ್ಲಿಸಬೇಕಿತ್ತು ; ವರದಿ ಸಲ್ಲಿಸದೇ ಇರುವುದಕ್ಕೆ ಕಾರಣಗಳೇನು ; ಯಾವ ಅವಧಿಯೊಳಗೆ ಗಡಿ ಗುರುತಿಸುವ ಕೆಲಸವನ್ನು ಪೂರ್ಣಗೊಳಿಸಲಾಗುವುದು ; (ಸಂಪೂರ್ಣ ವಿವರ ನೀಡುವುದು)

(ಇ) ಮಂಡ್ಯ ನಗರಸಭೆಗೆ ಸೇರಿದೆ ಎನ್ನಲಾದ ಎಷ್ಟು ಸ್ವತ್ತುಗಳು (ಆಸ್ತಿಗಳು) ಗ್ರಾಮ ಪಂಚಾಯಿತಿಗಳಲ್ಲಿ ಖಾತೆ ಆಗಿವೆ ; (ಗ್ರಾಮ ಪಂಚಾಯಿತಿವಾರು ಮಾಹಿತಿ ನೀಡುವುದು)

(ಈ) ಹಾಗೆಯೇ ಗ್ರಾಮ ಪಂಚಾಯಿತಿಗಳಿಗೆ ಸೇರಿದೆ ಎನ್ನಲಾದ ಪಿಇಎಸ್ ಬಡಾವಣೆ, ಚಾಮುಂಡೇಶ್ವರಿ ನಗರ, ಕುವೆಂಪು ನಗರ ಸೇರಿದಂತೆ

ಕೆಲವು ಪ್ರದೇಶಗಳಲ್ಲಿನ ಸ್ವತ್ತುಗಳನ್ನು ನಗರಸಭೆಯಲ್ಲಿ ಖಾತೆ ಮಾಡಿರುವ ಬಗ್ಗೆ ದೂರುಗಳಿವೆ. ಇಂತಹ ಎಷ್ಟು ಸ್ವತ್ತುಗಳನ್ನು ನಗರಸಭೆಯಲ್ಲಿ ಖಾತೆ ಮಾಡಲಾಗಿರುತ್ತದೆ ; (ಗ್ರಾಮ ಪಂಚಾಯಿತಿವಾರು ಮಾಹಿತಿ ನೀಡುವುದು)

(ಉ) ಮಂಡ್ಯ ನಗರಸಭೆಯ ಗಡಿಗೆ ಸಂಬಂಧಿಸಿದ ಹಿಂದಿನ ಹಾಗೂ ಪರಿಷ್ಕೃತ ಸರ್ಕಾರದ ಗೆಜೆಟೆಡ್ ನೋಟಿಫಿಕೇಶನ್‌ಗಳನ್ನು ಒದಗಿಸುವುದು ?

## ವಸತಿ ಬಡಾವಣೆ ಅಭಿವೃದ್ಧಿ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೨೦೩ (೨೫೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಗೃಹ ಮಂಡಳಿಯಿಂದ ವಸತಿ ಯೋಜನೆಗಾಗಿ ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು ಬೆಳ್ಳೂರು ಹೋಬಳಿ ಹಾಲಾಳು–ಇರುಬನಹಳ್ಳಿ ಗ್ರಾಮಗಳಲ್ಲಿ ಎಷ್ಟು ಎಕರೆ ಪ್ರದೇಶದಲ್ಲಿ ಭೂಮಿಯನ್ನು ಸ್ವಾಧೀನಕ್ಕೆ ಪಡೆದು ನಿವೇಶನಗಳನ್ನಾಗಿ ಅಭಿವೃದ್ಧಿಪಡಿಸಲಾಗುತ್ತಿದೆ ; ಈ ಯೋಜನೆಯ ಅಂದಾಜು ವೆಚ್ಚ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಈ ಯೋಜನೆಗೆ ಭೂಮಾಲೀಕರು ಎಷ್ಟು ಎಕರೆ ಭೂಮಿ ಬಿಟ್ಟುಕೊಟ್ಟಿದ್ದಾರೆ ; ಭೂಮಿ ಬಿಟ್ಟುಕೊಟ್ಟ ವಿಸ್ತೀರ್ಣ, ಭೂಮಾಲೀಕರ ಸಂಖ್ಯೆ ಹಾಗೂ ಸರ್ವೆ ನಂಬರ್ ಕುರಿತು ಗ್ರಾಮವಾರು ಮಾಹಿತಿ ನೀಡುವುದು ;

(ಇ) ಭೂಸ್ವಾಧೀನಪಡಿಸಲಾದ ಜಮೀನಿಗೆ ಪ್ರತಿ ಎಕರೆಗೆ ಪಾವತಿಸಲಾದ ಪರಿಹಾರ ಮೊತ್ತ ಎಷ್ಟು ; ಭೂ ಪರಿಹಾರಕ್ಕೆ ಒಪ್ಪದ ರೈತರು

ನ್ಯಾಯಾಲಯಗಳಲ್ಲಿ ದಾವೆ ಹೂಡಿರುವ ಪ್ರಕರಣಗಳಿವೆಯೇ ; (ವಿವರವಾದ ಮಾಹಿತಿ ನೀಡುವುದು)

(ಈ) ಈ ಯೋಜನೆಗೆ ಭೂಮಿ ನೀಡಿದ ಹಾಗೂ ಭೂಪರಿಹಾರ ಪಡೆಯದ ಭೂಮಾಲೀಕರಿಗೆ ಯಾವ ರೀತಿ ಅನುಕೂಲ ಕಲ್ಪಿಸಲಾಗಿದೆ ; ಹಾಗೂ, ಅಭಿವೃದ್ಧಿಪಡಿಸಿದ ನಿವೇಶನಗಳನ್ನು ಪಡೆಯಲು ಇಚ್ಚಿಸಿ ಒಪ್ಪಿಗೆ ಪತ್ರ ನೀಡಿರುವ ಭೂಮಾಲೀಕರ ಸಂಖ್ಯೆ ಎಷ್ಟು ;

(ಉ) ಸದರಿ ಬಡಾವಣೆಯಲ್ಲಿ ಅಭಿವೃದ್ಧಿಪಡಿಸಿರುವ ವಿವಿಧ ವರ್ಗಗಳ ನಿವೇಶನಗಳ ಸಂಖ್ಯೆ ಹಾಗೂ ಅವುಗಳ ಪ್ರತಿ ನಿವೇಶನದ ವಿಸ್ತೀರ್ಣ ಎಷ್ಟು ; ಕಲ್ಪಿಸಲಾಗುತ್ತಿರುವ ಮೂಲಸೌಲಭ್ಯಗಳಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಊ) ಸಾರ್ವಜನಿಕರಿಗೆ ಸದರಿ ವಸತಿ ಬಡಾವಣೆಯಲ್ಲಿ ನಿವೇಶನ ಆಯ್ಕೆಗೆ ಯಾವಾಗ ಅವಕಾಶ ಕಲ್ಪಿಸಲಾಗುವುದು ?

## ಬೀದರ್ ಜಿಲ್ಲೆಯಲ್ಲಿನ ಕಬ್ಬು ಬೆಳೆ ವಿಸ್ತೀರ್ಣ, ಸುಧಾರಿತ ತಳಿಗಳು, ರೋಗ ನಿಯಂತ್ರಣ, ಡಿಜಿಟಲ್ ತೂಕ ಮಾಪನ ಹಾಗೂ ಹನಿ ನೀರಾವರಿ ಸಬ್ಸಿಡಿ ಕುರಿತು

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೪ (೨೯೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಕಬ್ಬು ಬೆಳೆದಿರುವ ಒಟ್ಟು ವಿಸ್ತೀರ್ಣ ಎಷ್ಟು ;

(ಆ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಕಬ್ಬು ಬೆಳೆ ವಿಸ್ತೀರ್ಣದಲ್ಲಿ ಏರಿಕೆ ಅಥವಾ ಇಳಿಕೆ ಕಂಡಿದೆಯೇ ; (ತಾಲ್ಲೂಕುವಾರು ಹಾಗೂ ವರ್ಷವಾರು ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯ ರೈತರಿಗೆ ಕೃಷಿ ಇಲಾಖೆ, ಕಬ್ಬು ಅಭಿವೃದ್ಧಿ ಇಲಾಖೆ ಹಾಗೂ ಸಕ್ಕರೆ ಕಾರ್ಖಾನೆಗಳ ಮೂಲಕ ಹೆಚ್ಚಿನ ಇಳುವರಿ ನೀಡುವ ಸುಧಾರಿತ ಕಬ್ಬಿನ ತಳಿಗಳನ್ನು ವಿತರಿಸಲಾಗಿದೆಯೇ ; ಇದ್ದಲ್ಲಿ, ಪ್ರಮುಖ ತಳಿಗಳ ಹೆಸರು, ವಿತರಿಸಿದ ಪ್ರಮಾಣ, ಫಲಾನುಭವಿಗಳ ಸಂಖ್ಯೆ ಹಾಗೂ ತಾಲ್ಲೂಕುವಾರು ವಿವರ ನೀಡುವುದು ;

(ಈ) ಕಳೆದ ಮೂರು ವರ್ಷಗಳಲ್ಲಿ ಕಬ್ಬಿನ ಉತ್ಪಾದಕತೆ ಹೆಚ್ಚಿಸಲು ಹಾಗೂ ಕೆಂಪು ಕೊಳೆ (Red Rot), ಕಡಿಗೆ ರೋಗ (Smut) ಬಾಡುವಿಕೆ (Wilt) ಸೇರಿದಂತೆ ವಿವಿಧ ರೋಗಗಳ ನಿಯಂತ್ರಣ ಕುರಿತು ಕೃಷಿ ವಿಜ್ಞಾನ ಕೇಂದ್ರ (KVK) ಹಾಗೂ ಕೃಷಿ ಇಲಾಖೆಯ ವತಿಯಿಂದ ಎಷ್ಟು ತರಬೇತಿ ಶಿಬಿರಗಳು ಕ್ಷೇತ್ರ ಪ್ರದರ್ಶನಗಳು ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; (ಭಾಗವಹಿಸಿದ ರೈತರ ಸಂಖ್ಯೆಯ ತಾಲ್ಲೂಕುವಾರು ವಿವರ ನೀಡುವುದು)

(ಉ) ಬೀದರ್ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕೃತ ಕಬ್ಬು ತೂಕಮಾಪನ ಕೇಂದ್ರಗಳ (Weighbridges) ಸಂಖ್ಯೆ ಎಷ್ಟು ; ತೂಕದಲ್ಲಿ ಪಾರದರ್ಶಕತೆ ಕಾಪಾಡಲು ಡಿಜಿಟಲ್ ತೂಕ ಯಂತ್ರ, ಸಿಸಿಟಿವಿ, ಆನ್‌ಲೈನ್ ಡೇಟಾ ಮಾನಿಟರಿಂಗ್ ಹಾಗೂ ರೈತರಿಗೆ ಡಿಜಿಟಲ್ ರಸೀದಿ ವ್ಯವಸ್ಥೆಯನ್ನು ಅಳವಡಿಸಲಾಗಿದೆಯೇ ; ಇಲ್ಲದಿದ್ದಲ್ಲಿ,

ಸರ್ಕಾರ ಇದನ್ನು ಕಡ್ಡಾಯಗೊಳಿಸಲು ಕೈಗೊಂಡಿರುವ ಕ್ರಮಗಳೇನು ; ಕಬ್ಬು ಬೆಳೆಗಾಗಿ ನೀರಾವರಿ (Drip Irrigation) ಅಳವಡಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ನೀಡಲಾಗುತ್ತಿರುವ ಸಬ್ಸಿಡಿಯ ಪ್ರಮಾಣ ಎಷ್ಟು ;

(ಊ) ಕಳೆದು ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಎಷ್ಟು ರೈತರು ಈ ಯೋಜನೆಯ ಪ್ರಯೋಜನ ಪಡೆದಿದ್ದಾರೆ ; ಎಷ್ಟು ಅನುದಾನ ಬಿಡುಗಡೆಯಾಗಿದೆ ಹಾಗೂ ಎಷ್ಟು ಅರ್ಜಿಗಳು ಇನ್ನೂ ಬಾಕಿ ಉಳಿದಿವೆ ? (ತಾಲ್ಲೂಕುವಾರು ವಿವರ ನೀಡುವುದು)

## ರಾಜ್ಯದಲ್ಲಿ ಪ್ರತ್ಯೇಕ 'ಜೈನ ಅಭಿವೃದ್ಧಿ ನಿಗಮ' ಸ್ಥಾಪಿಸುವ ಕುರಿತು

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೫ (೨೯೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಲ್ಪಸಂಖ್ಯಾತ ಜೈನ ಸಮುದಾಯದ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ, ಧಾರ್ಮಿಕ ಹಾಗೂ ಉದ್ಯಮಶೀಲತೆಯ ಅಭಿವೃದ್ಧಿಗಾಗಿ ಪ್ರತ್ಯೇಕ 'ಜೈನ ಅಭಿವೃದ್ಧಿ ನಿಗಮ' ಸ್ಥಾಪಿಸುವ ಕುರಿತು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದಲ್ಲಿ, ಅದರ ಪ್ರಸ್ತುತ ಸ್ಥಿತಿ ಯಾವ ಹಂತದಲ್ಲಿದೆ ;

(ಆ) ಕಳೆದ ಮೂರು ವರ್ಷಗಳಲ್ಲಿ ಜೈನ ಸಮುದಾಯುದ ಜನಪ್ರತಿನಿಧಿಗಳು, ಧಾರ್ಮಿಕ ಮುಖಂಡರು, ವಿವಿಧ ಜೈನ ಸಂಘ–ಸಂಸ್ಥೆಗಳು ಹಾಗೂ ಸಾರ್ವಜನಿಕರಿಂದ ಪ್ರತ್ಯೇಕ ಜೈನ ಅಭಿವೃದ್ಧಿ ನಿಗಮ ಸ್ಥಾಪಿಸುವ ಕುರಿತು ಸರ್ಕಾರಕ್ಕೆ ಎಷ್ಟು ಮನವಿಗಳು ಸಲ್ಲಿಕೆಯಾಗಿವೆ ; ಅವುಗಳ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಪ್ರತ್ಯೇಕ ಜೈನ ಅಭಿವೃದ್ಧಿ ನಿಗಮ ಸ್ಥಾಪನೆಗೆ ಸಂಬಂಧಿಸಿದಂತೆ ಹಣಕಾಸು ಇಲಾಖೆ, ಕಾನೂನು ಇಲಾಖೆ ಹಾಗೂ ಆಡಳಿತಾತ್ಮಕ ಇಲಾಖೆಗಳ ಅಭಿಪ್ರಾಯ ಅಥವಾ ಅನುಮೋದನೆ ಪಡೆಯಲಾಗಿದೆಯೇ ; ಇಲ್ಲದಿದ್ದಲ್ಲಿ, ಈ ಪ್ರಸ್ತಾವನೆ ಯಾವ ಹಂತದಲ್ಲಿದೆ ಹಾಗೂ ಅನುಮೋದನೆ ಪಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಕಳೆದ ಮೂರು ವರ್ಷಗಳಲ್ಲಿ ಪ್ರಸ್ತುತ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (KMDC) ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ವಿವಿಧ ಯೋಜನೆಗಳಡಿ ಜೈನ ಸಮುದಾಯಕ್ಕೆ ಎಷ್ಟು ಅನುದಾನ ಹಂಚಿಕೆಯಾಗಿದೆ ; ಎಷ್ಟು ಫಲಾನುಭವಿಗಳು ಪ್ರಯೋಜನ ಪಡೆದಿದ್ದಾರೆ ; (ಯೋಜನಾವಾರು ಹಾಗೂ ವರ್ಷವಾರು ವಿವರ ನೀಡುವುದು)

(ಉ) ಜೈನ ಸಮುದಾಯದ ಬಹುಕಾಲದ ಬೇಡಿಕೆಯನ್ನು ಪರಿಗಣಿಸಿ, ಪ್ರತ್ಯೇಕ 'ಜೈನ ಅಭಿವೃದ್ಧಿ ನಿಗಮ' ಸ್ಥಾಪಿಸಿ, ಮುಂಬರುವ ರಾಜ್ಯ ಆಯವ್ಯಯದಲ್ಲಿ (Budget) ಅಗತ್ಯ ಅನುದಾನವನ್ನು ಮೀಸಲಿಟ್ಟು ನಿಗಮವನ್ನು ಕಾರ್ಯಾರಂಭಗೊಳಿಸಲು ಸರ್ಕಾರ ನಿರ್ದಿಷ್ಟ ಕಾಲಮಿತಿಯನ್ನು ನಿಗದಿಪಡಿಸಿಕೊಂಡಿದೆಯೇ ; ಇಲ್ಲವಾದಲ್ಲಿ ಕಾರಣಗಳೇನು ?

## ಬೀದರ್ ಜಿಲ್ಲೆ ಹುಮ್ನಾಬಾದ್ ತಾಲ್ಲೂಕು ಘಾಟಬೋರಳ ಗ್ರಾಮದಲ್ಲಿ ರೈತ ಸಂಪರ್ಕ ಕೇಂದ್ರವನ್ನು ಸ್ಥಾಪಿಸುವ ಕುರಿತು

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೬ (೨೯೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಹುಮ್ನಾಬಾದ್ ತಾಲ್ಲೂಕಿನ ಘಾಟಬೋರಳ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರೈತರಿಗೆ ಕೃಷಿ ಇಲಾಖೆಯ ಸೇವೆಗಳು, ಬಿತ್ತನೆ ಬೀಜ, ರಸಗೊಬ್ಬರ, ಕೃಷಿ ಯಂತ್ರೋಪಕರಣಗಳು ಹಾಗೂ ವಿವಿಧ ಯೋಜನೆಗಳು ಸೌಲಭ್ಯಗಳನ್ನು ಸ್ಥಳೀಯ ಮಟ್ಟದಲ್ಲೇ ಒದಗಿಸುವ ಉದ್ದೇಶದಿಂದ ನೂತನ ರೈತ ಸಂಪರ್ಕ ಕೇಂದ್ರ (RSK) ಸ್ಥಾಪಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ ; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಆ) ೩೭೧(ಜೆ) ವಿಶೇಷ ಅಭಿವೃದ್ಧಿ ಪ್ರದೇಶ ಹಾಗೂ ಗಡಿಭಾಗದ ಅತಿ ಹಿಂದುಳಿದ ಪ್ರದೇಶವಾಗಿರುವ ಘಾಟಬೋರಳ ಮತ್ತು ಸುತ್ತಮುತ್ತಲಿನ ಗ್ರಾಮಗಳ ಸಾವಿರಾರು ರೈತರಿಗೆ ಅನುಕೂಲವಾಗುವಂತೆ ರೈತ ಸಂಪರ್ಕ ಕೇಂದ್ರ ಸ್ಥಾಪಿಸುವ ಕುರಿತು ಕೃಷಿ ಇಲಾಖೆ ಕೈಗೊಂಡಿರುವ ಆಡಳಿತಾತ್ಮಕ ಕ್ರಮಗಳು ಯಾವ ಹಂತದಲ್ಲಿವೆ ; ಈ ಕುರಿತು ಸ್ಥಳ ಪರಿಶೀಲನೆ ಅಥವಾ ಕಾರ್ಯಸಾಧ್ಯತಾ ವರದಿ (Feasibility Report) ಸಿದ್ಧಪಡಿಸಲಾಗಿದೆಯೇ ;

(ಇ) ನೂತನ ರೈತ ಸಂಪರ್ಕ ಕೇಂದ್ರ ಸ್ಥಾಪನೆಗಾಗಿ ಅಗತ್ಯವಿರುವ ಸರ್ಕಾರಿ ಜಮೀನು ಗುರುತಿಸುವಿಕೆ, ಕಟ್ಟಡ ನಿರ್ಮಾಣ, ಕೃಷಿ ಅಧಿಕಾರಿ ಹಾಗೂ ಸಿಬ್ಬಂದಿ ಹುದ್ದೆಗಳ ಮಂಜೂರಾತಿ, ಅಗತ್ಯ ಮೂಲಸೌಕರ್ಯ ಕಲ್ಪಿಸುವುದು ಹಾಗೂ ೨೦೨೬-೨೭ನೇ ಸಾಲಿನ ರಾಜ್ಯ ಬಜೆಟ್ ಅಥವಾ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (KKRDB) ಅನುದಾನದಡಿ ಹಣ ಮೀಸಲಿಡುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಘಾಟಬೋರಳ ಹಾಗೂ ಸುತ್ತಮುತ್ತಲಿನ ಗ್ರಾಮಗಳ ರೈತರು ಕೃಷಿ ಇಲಾಖೆಯ ಸೇವೆಗಳಿಗಾಗಿ ಸುಮಾರು ೨೫-೩೦ ಕಿ.ಮೀ. ದೂರದ ಹುಮನಾಬಾದ್‌ಗೆ ತೆರಳಬೇಕಾಗಿರುವುದರಿಂದ ಸಮಯ ಮತ್ತು ಹಣದ ನಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಮಸ್ಯೆಯನ್ನು ನಿವಾರಿಸಲು ಪ್ರಸಕ್ತ ಸಾಲಿನಲ್ಲಿಯೇ ತಾತ್ಕಾಲಿಕ ಕಟ್ಟಡದಲ್ಲಾದರೂ ರೈತ ಸಂಪರ್ಕ ಕೇಂದ್ರವನ್ನು ಆರಂಭಿಸಿ, ನಂತರ ಶಾಶ್ವತ ಕಟ್ಟಡ ನಿರ್ಮಿಸಲು ಸರ್ಕಾರ ನಿರ್ದಿಷ್ಟ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳುವುದೇ ; ಇಲ್ಲವಾದಲ್ಲಿ ಕಾರಣಗಳೇನು ?

## ಬೀದರ್ ಜಿಲ್ಲೆಯಲ್ಲಿನ ಸಾವಯವ ಕೃಷಿ ಉತ್ತೇಜನ ಕುರಿತು

**ಡಾ. ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦೭ (೯೯೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಒಂದು ವರ್ಷದಲ್ಲಿ ಬೀದರ್ ಜಿಲ್ಲೆಯ ಎಷ್ಟು ರೈತರ ಜಮೀನುಗಳ ಮಣ್ಣಿನ ಮಾದರಿಗಳನ್ನು ಪರೀಕ್ಷೆಗೊಳಪಡಿಸಲಾಗಿದೆ ; ಸಂಗ್ರಹಿಸಲಾದ ಮಣ್ಣಿನ ಮಾದರಿಗಳ ಒಟ್ಟು ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಣ್ಣು ಪರೀಕ್ಷೆಯ ನಂತರ ಎಷ್ಟು ರೈತರಿಗೆ ಮಣ್ಣಿನ ಆರೋಗ್ಯ ಕಾರ್ಡ್ (Soil Health Card) ವಿತರಿಸಲಾಗಿದೆ ; ಕಾರ್ಡ್‌ನ ಶಿಫಾರಸ್ಸುಗಳ ಆಧಾರದ ಮೇಲೆ ಸಮತೋಲಿತ ರಸಗೊಬ್ಬರ ಬಳಕೆ, ಪೋಷಕಾಂಶ ನಿರ್ವಹಣೆ ಹಾಗೂ ಮಣ್ಣಿನ ಫಲವತ್ತತೆ ಕಾಪಾಡುವ ಕುರಿತು ರೈತರಿಗೆ ತಾಂತ್ರಿಕ ಮಾರ್ಗದರ್ಶನ ಮತ್ತು ತರಬೇತಿ ನೀಡಲಾಗಿದೆಯೇ ; (ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಹಾಗೂ ಖಾಸಗಿ ಮಣ್ಣು ಪರೀಕ್ಷಾ ಪ್ರಯೋಗಾಲಯಗಳ (Soil Testing Laboratories) ಸಂಖ್ಯೆ ಎಷ್ಟು ; ದೂರದ ಗ್ರಾಮಗಳ ರೈತರಿಗೆ ಅನುಕೂಲವಾಗುವಂತೆ ಸಂಚಾರಿ ಮಣ್ಣು ಪರೀಕ್ಷಾ ಪ್ರಯೋಗಾಲಯ (Mobile Soil Testing Laboratory) ಸೇವೆ ಲಭ್ಯವಿದೆಯೇ ; ಇಲ್ಲದಿದ್ದಲ್ಲಿ, ಆರಂಭಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

(ಈ) ಕಳೆದ ಮೂರು ವರ್ಷಗಳಲ್ಲಿ ಅತಿಯಾದ ರಾಸಾಯನಿಕ ಗೊಬ್ಬರ ಬಳಕೆಯಿಂದ ಮಣ್ಣಿನ ಫಲವತ್ತತೆ ಕುಸಿಯುತ್ತಿರುವ ಹಿನ್ನೆಲೆಯಲ್ಲಿ ಸಮತೋಲಿತ ಗೊಬ್ಬರ ಬಳಕೆ, ಸಾವಯವ ಗೊಬ್ಬರ ಬಳಕೆ ಹಾಗೂ ಮಣ್ಣಿನ ಗುಣಮಟ್ಟ ಸಂರಕ್ಷಣೆ ಕುರಿತು ಕೃಷಿ ಇಲಾಖೆ ಮತ್ತು ಕೃಷಿ ವಿಜ್ಞಾನ ಕೇಂದ್ರಗಳ ಮೂಲಕ ಎಷ್ಟು ಜಾಗೃತಿ ಕಾರ್ಯಕ್ರಮಗಳು, ತರಬೇತಿ ಶಿಬಿರಗಳು ಹಾಗೂ ಕ್ಷೇತ್ರ ಪ್ರದರ್ಶನಗಳನ್ನು ಆಯೋಜಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಬೀದರ್ ಜಿಲ್ಲೆಯಲ್ಲಿ ಸಾವಯವ ಕೃಷಿ (Organic Farming) ಹಾಗೂ ನೈಸರ್ಗಿಕ ಕೃಷಿ (Natural Farming) ಉತ್ತೇಜಿಸಲು ಸರ್ಕಾರದಿಂದ ಯಾವ ವಿಶೇಷ ಯೋಜನೆಗಳು ಜಾರಿಯಲ್ಲಿವೆ; "ಸಾವಯವ ಗ್ರಾಮ" ಅಥವಾ "ನೈಸರ್ಗಿಕ ಕೃಷಿ ಗ್ರಾಮ" ಯೋಜನೆಯಡಿ ಎಷ್ಟು ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ ; ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾದ ಅನುದಾನ, ಫಲಾನುಭವಿಗಳ ಸಂಖ್ಯೆ ಹಾಗೂ ತಾಲ್ಲೂಕುವಾರು ವಿವರ ನೀಡುವುದು ?

# Municipal Trust Property Management System ಅನುಷ್ಠಾನದ ಕುರಿತು

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೮ (೧೭೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಭೂಮಿ, ಮೋಜಿನಿ ಮತ್ತು ಸಕಾಲದಂತಹ ಸೇವೆಗಳನ್ನು ಸಂಯೋಜಿಸುವ ಮೂಲಕ ಕರ್ನಾಟಕ ಪುರಸಭೆ ಕಾಯ್ದೆಯಡಿಯಲ್ಲಿ ಬರುವ ಎಲ್ಲಾ ಸಾರ್ವಜನಿಕ ಆಸ್ತಿಗಳಿಗೆ ಒಂದೇ ಮೂಲವಾಗಲು ನ್ಯಾಯಾಲಯದ ಆದೇಶದಂತೆ Municipal Trust Property Management System ಸ್ಥಾಪಿಸಲು ಸೂಚಿಸಿದ್ದು, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಇದೇ ನ್ಯಾಯಾಲಯದ ಆದೇಶದಂತೆ ಪ್ರತಿಯೊಂದು ಸಾರ್ವಜನಿಕ ಆಸ್ತಿಗಳಿಗೆ Trust Property Identification Number (TPIN) ನೀಡಲು ತಿಳಿಸಲಾಗಿದೆ ; ಈ ಆದೇಶದಂತೆ ಕಳೆದ ಮೂರು ತಿಂಗಳಲ್ಲಿ ಎಷ್ಟು ಟಿ.ಪಿ.ಐ.ಎನ್. ಗಳನ್ನು ನೀಡಲಾಗಿದೆ ;

(ಇ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಆಸ್ತಿಗಳಿಗೆ ಸಂಬಂಧಿಸಿದಂತೆ ಪೌರಾಡಳಿತ ಇಲಾಖೆ (ನಗರ ಸ್ಥಳೀಯ ಸಂಸ್ಥೆಗಳು) ವಿರುದ್ದ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಈ ಪ್ರಕರಣಗಳ ಪ್ರಸ್ತುತ ಹಂತವೇನು ಮತ್ತು ಎಷ್ಟು ಪ್ರಕರಣಗಳಲ್ಲಿ ಪೌರಾಡಳಿತ ಇಲಾಖೆಯ ಪರವಾಗಿ ಆದೇಶ ಹೊರಡಿಸಲಾಗಿದೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

# ವಸತಿ ಇಲಾಖೆಯ ಯೋಜನೆಗಳ ಕುರಿತು

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೯ (೧೭೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳಡಿ (ರಾಜೀವ್ ಗಾಂಧಿ ವಸತಿ, ಬಸವ ವಸತಿ, ಪ್ರಧಾನ ಮಂತ್ರಿ ಆವಾಸ್ ಯೋಜನೆ ಸೇರಿದಂತೆ) ಎಷ್ಟು ಮನೆಗಳು ಮಂಜೂರಾಗಿವೆ, ನಿರ್ಮಾಣಗೊಂಡಿವೆ ಹಾಗೂ ಎಷ್ಟು ಫಲಾನುಭವಿಗಳಿಗೆ ಹಂಚಿಕೆ ಮಾಡಲಾಗಿದೆ ; (ಮಾಹಿತಿ ಒದಗಿಸುವುದು)

(ಆ) ವಸತಿ ನಿರ್ಮಾಣ ಕಾಮಗಾರಿಗಳ ವಿಳಂಬಕ್ಕೆ ಕಾರಣವಾದ ಗುತ್ತಿಗೆದಾರರು ಮತ್ತು ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ; (ಮಾಹಿತಿ ಒದಗಿಸುವುದು)

(ಇ) ಬೆಂಗಳೂರು ಸೇರಿದಂತೆ ಪ್ರಮುಖ ನಗರಗಳಲ್ಲಿ ಆರ್ಥಿಕವಾಗಿ ದುರ್ಬಲ ವರ್ಗಗಳಿಗೆ (EWS) ಕೈಗೆಟುಕುವ ಮನೆಗಳನ್ನು ನಿರ್ಮಿಸಲು ಸರ್ಕಾರದ ವಿಶೇಷ ಯೋಜನೆ ಏನು ; ಗೃಹ ನಿರ್ಮಾಣ ಮಂಡಳಿ ಮತ್ತು ಇತರ ವಸತಿ ಸಂಸ್ಥೆಗಳ ಖಾಲಿ ನಿವೇಶನಗಳು ಹಾಗೂ ಮನೆಗಳ ಸಂಖ್ಯೆ ಎಷ್ಟು ; ಅವುಗಳನ್ನು ಯಾವ ಕಾಲಮಿತಿಯೊಳಗೆ ಹಂಚಿಕೆ ಮಾಡಲಾಗುವುದು ;

(ಈ) ವಸತಿ ಯೋಜನೆಗಳಲ್ಲಿ ಭ್ರಷ್ಟಾಚಾರ, ನಕಲಿ ಫಲಾನುಭವಿಗಳು ಮತ್ತು ಮಧ್ಯವರ್ತಿಗಳ ಹಾವಳಿಯನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ೨೦೩೫ ರೊಳಗೆ ಕರ್ನಾಟಕದ ಪ್ರತಿಯೊಂದು ಬಡ ಮತ್ತು ಅರ್ಹ ಕುಟುಂಬಕ್ಕೂ ಸುರಕ್ಷಿತ, ಕೈಗೆಟುಕುವ ಮತ್ತು ಗುಣಮಟ್ಟದ ವಸತಿ ಒದಗಿಸಲು ಸರ್ಕಾರದ ಸಮಗ್ರ ಕಾರ್ಯತಂತ್ರವೇನು ?

## ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡುವ ಟೆಂಡರ್‌ನಲ್ಲಿ ನಡೆದಿರುವ ಹಗರಣಗಳ ಕುರಿತು

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೦ (೧೭೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೫-೨೬ನೇ ಸಾಲಿನಲ್ಲಿ ನೀಟ್, ಕೆಸಿಇಟಿ, ಸಿಎಲ್‌ಎಟಿ ಮತ್ತು ನಾಗರಿಕ ಸೇವಾ ಪರೀಕ್ಷೆಗಳಿಗೆ ಅಲ್ಪಸಂಖ್ಯಾತ ವಸತಿ ಕಾಲೇಜಿನ ಎಷ್ಟು ವಿದ್ಯಾರ್ಥಿಗಳಿಗೆ ತರಬೇತಿಯನ್ನು ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಪರೀಕ್ಷೆಗಳಿಗೆ ಆಫ್‌ಲೈನ್ ತರಬೇತಿ ನೀಡಲು ಸರ್ಕಾರ ಇಲಾಖೆ ವತಿಯಿಂದ ಹೊರಡಿಸಲಾದ ಟೆಂಡರ್‌ನಲ್ಲಿ ಅಕ್ರಮಗಳು ನಡೆದಿವೆ ಎಂಬ ಆರೋಪಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಟೆಂಡರ್‌ನಲ್ಲಿ ಮಾನದಂಡಗಳನ್ನು ಉಲ್ಲಂಘಿಸಿ ಮತ್ತು ಹಲವಾರು ಅವಶ್ಯಕ ಷರತ್ತುಗಳನ್ನು Exclude (ಹೊರತುಪಡಿಸಿ) ಮಾಡಿ ಟೆಂಡರ್ ಹೊರಡಿಸಲಾಗಿದೆ ಎಂದು ತಿಳಿಸಿರುವ ಮಾಹಿತಿ ನಿಜವೇ ;

(ಈ) ಹಾಗಿದ್ದಲ್ಲಿ, ಈ ಹಗರಣದಲ್ಲಿ ಭಾಗಿಯಾಗಿರುವ ಅಧಿಕಾರಿ/ ಸಿಬ್ಬಂದಿಗಳ ವಿರುದ್ಧ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ಎಂಬುದರ ಬಗ್ಗೆ ಮಾಹಿತಿ ಒದಗಿಸುವುದು ?

# ರಾಜ್ಯದ ರೈತರಿಗೆ ಸಹಾಯಧನ ಮತ್ತು ಪರಿಹಾರದ ಬಗ್ಗೆ

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೧ (೧೭೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರ ಉತ್ಪಾದನಾ ವೆಚ್ಚ ನಿರಂತರವಾಗಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ರಸಗೊಬ್ಬರ, ಬೀಜ, ಕೀಟನಾಶಕ ಹಾಗೂ ಕೃಷಿ ಯಂತ್ರೋಪಕರಣಗಳಿಗೆ ಹೆಚ್ಚುವರಿ ಸಹಾಯಧನ ನೀಡುವ ಕುರಿತು ಸರ್ಕಾರದ ಕ್ರಮವೇನು ;

(ಆ) ಕಳೆದ ಮೂರು ವರ್ಷಗಳಲ್ಲಿ ಅತಿವೃಷ್ಟಿ, ಅನಾವೃಷ್ಟಿ ಹಾಗೂ ಪ್ರಕೃತಿ ವಿಕೋಪದಿಂದ ಬೆಳೆ ನಷ್ಟ ಅನುಭವಿಸಿದ ರೈತರಿಗೆ ಜಿಲ್ಲಾವಾರು ಎಷ್ಟು ಪರಿಹಾರ ಮಂಜೂರಾಗಿದೆ ; ಇನ್ನೂ ಬಾಕಿ ಉಳಿದಿರುವ ಪರಿಹಾರವನ್ನು ಯಾವ ಕಾಲಮಿತಿಯೊಳಗೆ ವಿತರಿಸಲಾಗುವುದು ;

(ಇ) ಬೆಳೆ ವಿಮೆ ಯೋಜನೆಯಡಿ ಎಷ್ಟು ರೈತರಿಗೆ ವಿಮೆ ಪರಿಹಾರ ದೊರೆತಿದೆ; ಎಷ್ಟು ಅರ್ಜಿಗಳು ಬಾಕಿ ಇವೆ ಮತ್ತು ವಿಳಂಬಕ್ಕೆ ಕಾರಣವೇನು ; (ಮಾಹಿತಿ ಒದಗಿಸುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ನಕಲಿ ಬೀಜ, ನಕಲಿ ರಸಗೊಬ್ಬರ ಮತ್ತು ನಕಲಿ ಕೀಟನಾಶಕ ಮಾರಾಟ ತಡೆಗಟ್ಟಲು ಎಷ್ಟು ದಾಳಿ ನಡೆಸಲಾಗಿದೆ ; ಎಷ್ಟು ಪರವಾನಗಿಗಳನ್ನು ರದ್ದುಪಡಿಸಲಾಗಿದೆ ?

## ಜವಳಿ ಕ್ಷೇತ್ರದಲ್ಲಿ ಕೈಗೊಂಡಿರುವ ಕ್ರಮದ ಬಗ್ಗೆ

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೨ (೧೭೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕೈಮಗ್ಗ, ವಿದ್ಯುತ್ ಮಗ್ಗ (Powerloom) ಹಾಗೂ ಜವಳಿ ಕೈಗಾರಿಕೆಯಲ್ಲಿ ನೇರ ಮತ್ತು ಪರೋಕ್ಷವಾಗಿ ಎಷ್ಟು ಜನರು ಉದ್ಯೋಗದಲ್ಲಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಜವಳಿ ಇಲಾಖೆಯ ವಿವಿಧ ಯೋಜನೆಗಳಡಿ ಎಷ್ಟು ನೇಕಾರರು ಹಾಗೂ ಜವಳಿ ಕಾರ್ಮಿಕರು ಸಹಾಯಧನ ಪಡೆದಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದ ಸರ್ಕಾರಿ ಇಲಾಖೆಗಳು, ಶಾಲೆಗಳು ಹಾಗೂ ಆಸ್ಪತ್ರೆಗಳಿಗೆ ಅಗತ್ಯವಿರುವ ಸಮವಸ್ತ್ರ, ಹಾಸಿಗೆ, ಬಟ್ಟೆಗಳನ್ನು ಕರ್ನಾಟಕದ ಕೈಮಗ್ಗ ಮತ್ತು ಜವಳಿ ಘಟಕಗಳಿಂದಲೇ ಖರೀದಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಕಳೆದ ಮೂರು ವರ್ಷಗಳಲ್ಲಿ ಜವಳಿ ಕ್ಷೇತ್ರದಲ್ಲಿ ಯುವಕರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಎಷ್ಟು ತರಬೇತಿ ಕೇಂದ್ರಗಳನ್ನು ಆರಂಭಿಸಲಾಗಿದೆ ; ಎಷ್ಟು ಯುವಕರು ಉದ್ಯೋಗ ಪಡೆದಿದ್ದಾರೆ ; ಜವಳಿ ಉತ್ಪನ್ನಗಳ ರಫ್ತು ಹೆಚ್ಚಿಸಲು ಹಾಗೂ ಕರ್ನಾಟಕದ ಉತ್ಪನ್ನಗಳಿಗೆ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಾರುಕಟ್ಟೆ ಕಲ್ಪಿಸಲು ಸರ್ಕಾರದ ಕಾರ್ಯಯೋಜನೆಗಳೇನು ;

(ಉ) ವಿಜಯಪುರ, ಬಳ್ಳಾರಿ, ಬೆಳಗಾವಿ, ದಾವಣಗೆರೆ, ಗದಗ, ರಾಯಚೂರು ಸೇರಿದಂತೆ ಜವಳಿ ಮತ್ತು ನೇಕಾರಿಕೆ ಕೇಂದ್ರಗಳ

ಅಭಿವೃದ್ಧಿಗೆ ವಿಶೇಷ ಪ್ಯಾಕೇಜ್ ನೀಡುವ ಬಗ್ಗೆ ಸರ್ಕಾರದ ನಿರ್ಧಾರವೇನು ; ನೇಕಾರರ ಮಕ್ಕಳಿಗೆ ಶಿಕ್ಷಣ, ವಿದ್ಯಾರ್ಥಿವೇತನ ಮತ್ತು ವೃತ್ತಿಪರ ತರಬೇತಿ ನೀಡಲು ಸರ್ಕಾರ ಜಾರಿಗೊಳಿಸಿರುವ ಯೋಜನೆಗಳ ವಿವರ ಒದಗಿಸುವುದು ?

## ಧಾರವಾಡ ಮತ್ತು ಬೆಳಗಾವಿ ನಡುವಿನ ರೈಲ್ವೆ ಮಾರ್ಗದ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೨೧೩ (೨೧೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ ಮತ್ತು ಬೆಳಗಾವಿ ನಡುವಿನ ನೇರ ರೈಲ್ವೆ ಮಾರ್ಗ ನಿರ್ಮಾಣ ಯೋಜನೆ ಯಾವ ಹಂತದಲ್ಲಿದೆ ; ಈ ಯೋಜನೆಗೆ ಸಂಬಂಧಿಸಿದಂತೆ ಇಲ್ಲಿಯವರೆಗೆ ಆಗಿರುವ ಪ್ರಗತಿ ಏನು ; (ವಿವರ ನೀಡುವುದು)

(ಆ) ಈ ಯೋಜನೆಗಾಗಿ ಒಟ್ಟು ಎಷ್ಟು ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಬೇಕಾಗಿದೆ ; ಇದರಲ್ಲಿ ಎಷ್ಟು ಎಕರೆ ಭೂಮಿಯನ್ನು ಈಗಾಗಲೇ ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗಿದೆ ಮತ್ತು ಬಾಕಿ ಉಳಿದಿರುವ ಭೂಸ್ವಾಧೀನ ಪ್ರಕ್ರಿಯೆ ಯಾವಾಗ ಪೂರ್ಣಗೊಳ್ಳಲಿದೆ ;

(ಇ) ಈ ಯೋಜನೆಗೆ ರಾಜ್ಯ ಸರ್ಕಾರದ ಪಾಲಿನ ಒಟ್ಟು ಅನುದಾನ ಎಷ್ಟು ; ಇಲ್ಲಿಯವರೆಗೆ ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಮತ್ತು ಬಳಕೆಯಾದ ಮೊತ್ತ ಎಷ್ಟು ;

(ಈ) ಈ ರೈಲ್ವೆ ಮಾರ್ಗವು ಅರಣ್ಯ ಪ್ರದೇಶದ ಮೂಲಕ ಹಾದುಹೋಗುತ್ತದೆಯೇ ; ಹಾಗಿದ್ದಲ್ಲಿ, ಅರಣ್ಯ ಮತ್ತು ಪರಿಸರ ಇಲಾಖೆಯಿಂದ ಅಗತ್ಯವಿರುವ ಅನುಮತಿಗಳನ್ನು ಪಡೆಯಲಾಗಿದೆಯೇ ; ವಿಳಂಬವಾಗಿದ್ದರೆ, ಅದಕ್ಕೆ ಕಾರಣಗಳೇನು ;

(ಉ) ಈ ಪ್ರಮುಖ ರೈಲ್ವೆ ಯೋಜನೆಯನ್ನು ಸಂಪೂರ್ಣವಾಗಿ ಪೂರ್ಣಗೊಳಿಸಿ ಸರ್ಕಾರ ಯಾವ ಕಾಲಮಿತಿಯೊಳಗೆ ಸಾರ್ವಜನಿಕರ ಸಂಚಾರಕ್ಕೆ ಮುಕ್ತಾಯಗೊಳಿಸಲು ಕ್ರಮಕೈಗೊಳ್ಳುವುದು ?

## ಕೃಷಿ ಇಲಾಖೆಯಲ್ಲಿನ ಕೃಷಿ ಅಧಿಕಾರಿ (AO) ಮತ್ತು AAO ಹುದ್ದೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೨೧೪ (೨೧೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಇಲಾಖೆಯಲ್ಲಿ ಕೃಷಿ ಅಧಿಕಾರಿ (AO) ಮತ್ತು ಸಹಾಯಕ ಕೃಷಿ ಅಧಿಕಾರಿ (AAO) ಹುದ್ದೆಗಳ ನೇಮಕಾತಿ ಪ್ರಕ್ರಿಯೆಯಲ್ಲಿ ಮೂಲ ಕೃಷಿ ಪದವೀಧರರನ್ನು ಹೊರತುಪಡಿಸಿ. ಇತರ ತಾಂತ್ರಿಕ ಇಂಜಿನಿಯರಿಂಗ್ (ಉದಾಹರಣೆಗೆ: ರೈ–ಟೆಕ್, ಬಯೋಟೆಕ್ನಾಲಜಿ ಇತ್ಯಾದಿ) ಅಭ್ಯರ್ಥಿಗಳಿಗೆ ಅವಕಾಶ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಅವೈಜ್ಞಾನಿಕ ವೃಂದ ಮತ್ತು ನೇಮಕಾತಿ (C&R) ನಿಯಮಗಳಿಂದ ಮೂಲ ಕೃಷಿ ಪದವೀಧರರಿಗೆ ಉದ್ಯೋಗಾವಕಾಶದಲ್ಲಿ ಆಗುತ್ತಿರುವ ಅನ್ಯಾಯವನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯದಲ್ಲಿ ಸರ್ಕಾರಿ ಕೃಷಿ ವಿಶ್ವವಿದ್ಯಾಲಯಗಳಿದ್ದರೂ, ಖಾಸಗಿ ಕೃಷಿ ಕಾಲೇಜುಗಳ ಸ್ಥಾಪನೆಗೆ ಮತ್ತು ಕೃಷಿ ಶಿಕ್ಷಣದ ಖಾಸಗೀಕರಣಕ್ಕೆ ಸರ್ಕಾರ ಮುಕ್ತ ಅನುಮತಿ ನೀಡುತ್ತಿದೆಯೇ ; ಇದರಿಂದಾಗಿ ಕೃಷಿ ಶಿಕ್ಷಣದ ಗುಣಮಟ್ಟ ಕುಸಿಯುತ್ತಿರುವುದು ಮತ್ತು ಕೃಷಿ ಶಿಕ್ಷಣವು ಉದ್ಯಮವಾಗಿ ಮಾರ್ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕೃಷಿ ಶಿಕ್ಷಣವನ್ನು ರಕ್ಷಿಸಲು ಮತ್ತು ಖಾಸಗಿ ಕಾಲೇಜುಗಳ ಹಾವಳಿಯನ್ನು ತಡೆಗಟ್ಟಲು ಸರ್ಕಾರ ಯಾವುದೇ ಕಟ್ಟುನಿಟ್ಟಿನ ನಿಯಮಾವಳಿ ಅಥವಾ ನೀತಿಯನ್ನು ರೂಪಿಸಿದೆಯೇ ; ಇಲ್ಲದಿದ್ದಲ್ಲಿ, ರಾಜ್ಯದ ಸರ್ಕಾರಿ ಕೃಷಿ ವಿವಿಗಳ ವಿದ್ಯಾರ್ಥಿಗಳ ಹಿತರಕ್ಷಣೆಗಾಗಿ ಖಾಸಗಿ ಕೃಷಿ ಕಾಲೇಜುಗಳಿಗೆ ನೀಡಿರುವ ಅನುಮತಿಯನ್ನು ರದ್ದುಪಡಿಸುವ ಆಲೋಚನೆ ಸರ್ಕಾರದ ಮುಂದಿದೆಯೇ ;

(ಈ) ಕಳೆದ ಮೂರು ವರ್ಷಗಳಲ್ಲಿ ಕೃಷಿ ಇಲಾಖೆಯಲ್ಲಿ ಖಾಲಿ ಇರುವ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ಮತ್ತು ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಕೃಷಿ ಪದವೀಧರರ ನಿರುದ್ಯೋಗ ಸಮಸ್ಯೆಯನ್ನು ನಿವಾರಿಸಲು ಪ್ರತಿ ವರ್ಷ ನಿಯಮಿತವಾಗಿ ನೇಮಕಾತಿ ಪ್ರಕ್ರಿಯೆ ನಡೆಸಲು ಸರ್ಕಾರ ಕಾಲಮಿತಿ ಯೋಜನೆಯನ್ನು ಹೊಂದಿದೆಯೇ ?

## ತೋಟಗಾರಿಕೆ ಇಲಾಖೆಯಿಂದ ರೈತರಿಗೆ ನೀಡುತ್ತಿರುವ ಯಂತ್ರೋಪಕರಣಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೫ (೨೭೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ತೋಟಗಾರಿಕೆ ಇಲಾಖೆಯಲ್ಲಿ ರೈತರಿಗೆ ಯಾವ ಯಾವ ರೀತಿಯ ಅನುಕೂಲಗಳನ್ನು ಮಾಡಿಕೊಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಇಲಾಖೆಯಿಂದ ತೋಟಗಾರಿಕೆ ಬೆಳೆಗಳಿಗೆ ಎಷ್ಟು ಪ್ರಮಾಣದ ಔಷಧಿಗಳನ್ನು ಮತ್ತು ಗೊಬ್ಬರಗಳನ್ನು ಉಚಿತವಾಗಿ ನೀಡಲಾಗಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ತೋಟಗಾರಿಕೆ ಇಲಾಖೆಯಿಂದ ರೈತರಿಗೆ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಯಂತ್ರೋಪಕರಣಗಳನ್ನು ಸಬ್ಸಿಡಿಯ ಮೂಲಕ ನೀಡಲಾಗಿದೆ ; (ಪ್ರತಿ ಯಂತ್ರೋಪಕರಣಗಳ ವಿವರಣೆ ಮತ್ತು ಸಬ್ಸಿಡಿಯ ಸಂಪೂರ್ಣ ಮಾಹಿತಿ ಜಾತಿವಾರು ನೀಡುವುದು) ;

(ಈ) ಯಂತ್ರೋಪಕರಣಗಳನ್ನು ಪಡೆದುಕೊಳ್ಳಲು ಸರ್ಕಾರವೇ ಕಂಪನಿಗಳನ್ನು ನಿಗದಿಪಡಿಸುತ್ತದೆಯೇ ಅಥವಾ ರೈತರಿಗೆ ಯಾವ ಕಂಪನಿಯ ಯಂತ್ರಗಳು ಬೇಕೆನಿಸುತ್ತದೆಯೋ, ಆ ಯಂತ್ರಗಳನ್ನು ಪಡೆದುಕೊಳ್ಳಬಹುದೇ ?

## ರಾಜ್ಯದಲ್ಲಿ ಬಂದಿರುವ ಭೀಕರ ಬರಗಾಲದಿಂದ ಕೃಷಿ ಚಟುವಟಿಕೆಗೆ ತೊಂದರೆಯಾಗಿರುವ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೬ (೨೭೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದಿಂದ ಬರಗಾಲದ ಸಮೀಕ್ಷೆ ಮಾಡಿಸಲಾಗಿದೆಯೇ ; ಮಾಡಿಸಿದ್ದರೆ, ಸಂಪೂರ್ಣ ವಿವರ ಒದಗಿಸುವುದು ;

(ಆ) ಸರ್ಕಾರ ಬರಗಾಲಕ್ಕೆ ತುತ್ತಾದ ಬೆಳೆಗಳಿಗೆ ಯಾವ ರೀತಿಯ ಪರಿಹಾರ ಘೋಷಣೆ ಮಾಡಿದೆ ;

(ಇ) ಕೃಷಿ ಇಲಾಖೆಯಿಂದ ರೈತರಿಗೆ ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ಯಂತ್ರಗಳನ್ನು ಸಬ್ಸಿಡಿಯಾಗಿ ನೀಡಿದೆ ; (ಜಾತಿವಾರು ಎಷ್ಟು ಶೇಕಡಾ ಸಬ್ಸಿಡಿಯನ್ನು ನೀಡಲಾಗಿದೆ ವಿವರಣೆ ನೀಡುವುದು)

(ಈ) ಯಂತ್ರಗಳನ್ನು ಸರ್ಕಾರ ನಿಗದಿಪಡಿಸಿದ ಕಂಪನಿಗಳಲ್ಲಿಯೇ ತೆಗೆದುಕೊಳ್ಳಬೇಕಾ ಅಥವಾ ರೈತರಿಗೆ ಯಾವ ಕಂಪನಿ ಯಂತ್ರಗಳು ಬೇಕೋ ಅದನ್ನು ತೆಗೆದುಕೊಳ್ಳಬಹುದೇ ;

(ಉ) ಸರ್ಕಾರದ ವತಿಯಿಂದ ಸಬ್ಸಿಡಿ ನೀಡುತ್ತಿರುವ ಯಂತ್ರಗಳ ಕಂಪನಿಗಳ ಮತ್ತು ಸಬ್ಸಿಡಿ ಹಣದ ಬಗ್ಗೆ ಮಾಹಿತಿ ನೀಡುವುದು ?

## ಸ್ಕೂಲ್ ಕಿಟ್‌ಗಳ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೭ (೧೮೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ವಸತಿ ಶಾಲೆಗಳಲ್ಲಿ ಕಲಿಯುತ್ತಿರುವ ಮಕ್ಕಳ ಸಂಖ್ಯೆ ಹಾಗೂ ಅದರಲ್ಲಿ ಹೆಣ್ಣು ಮಕ್ಕಳು ಮತ್ತು ಗಂಡು ಮಕ್ಕಳ ಸಂಖ್ಯೆ ಎಷ್ಟು ; ಯಾವ ಯಾವ ಜಾತಿ ಧರ್ಮದ ಅಲ್ಪಸಂಖ್ಯಾತರು ಈ ಶಾಲೆಗಳಲ್ಲಿ ಓದುತ್ತಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಯಾವ ಯಾವ ಉಚಿತ ಸೌಲಭ್ಯಗಳನ್ನು ನೀಡಲಾಗುತ್ತಿದೆ ; ಪುಸ್ತಕ, ಬ್ಯಾಗು, ಶೂ ಸೇರಿದಂತೆ ಇಲಾಖೆಯನ್ನು ಹೊರತು ಪಡಿಸಿ ಬೇರೆ ಯಾವ ಇಲಾಖೆಯುವರು ಸ್ಕೂಲ್ ಕಿಟ್‌ಗಳನ್ನು ಒದಗಿಸುತ್ತಿದ್ದಾರೆ ; (ಮಾಹಿತಿ ಒದಗಿಸುವುದು)

(ಇ) ವಸತಿ ಶಾಲೆಗಳಲ್ಲಿರುವ ಕಾರ್ಮಿಕರ ಮಕ್ಕಳ ಸಂಖ್ಯೆ ಎಷ್ಟು; ಹಾಗೂ ಶಾಲೆಗಳಲ್ಲಿರುವ ಕಾರ್ಮಿಕರ ಮಕ್ಕಳಿಗೆ ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯಿಂದ ನೀಡಲಾಗುವ ಸ್ಕೂಲ್ ಕಿಟ್ ಗಳನ್ನು ಎಷ್ಟು ಮಕ್ಕಳಿಗೆ ವಿತರಿಸಲಾಗಿದೆ ? (ಶಾಲಾವಾರು, ಜಿಲ್ಲಾವಾರು ಮಾಹಿತಿ ನೀಡುವುದು)

## ಯಾರ್ಚ್ ಯಾರ್ಡ್‌ಗಳಿಂದ ಮೀನುಗಾರಿಕೆ ನಷ್ಟವಾಗುವ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೮ (೧೮೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯ ಮಲ್ಪೆ ಕಡಲ ತೀರದಲ್ಲಿ ಐಷಾರಾಮಿ ದೋಣಿಗಳ ನಿಲುಗಡೆಗಾಗಿ ಯಾರ್ಚ್ ಯಾರ್ಡಗಳನ್ನು ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ;

(ಆ) ಐಷಾರಾಮಿ ದೋಣಿಗಳ ನಿಲುಗಡೆಗೆ ಅವಕಾಶ ಮಾಡಿಕೊಡುತ್ತಿರುವುದರಿಂದ ಈ ಪರಿಸರದಿಂದ ಮೀನುಗಾರಿಕೆಗೆ ತೊಂದರೆಯಾಗುತ್ತಿರುವ ಕುರಿತು ಸರ್ಕಾರದ ನಿಲುವೇನು ;

(ಇ) ಐಷಾರಾಮಿ ದೋಣಿಗಳ ನಿಲುಗಡೆ ನಿರ್ಲ್ದಾಣದಿಂದ ಸರ್ಕಾರಕ್ಕೆ ಆಗುತ್ತಿರುವ ಲಾಭವೇನು ; ಇದರಿಂದ ಸೃಷ್ಟಿಯಾಗುವ ಉದ್ಯೋಗಾವಕಾಶಗಳ ಸಂಖ್ಯೆ ಎಷ್ಟು ;

(ಈ) ಮೀನುಗಾರಿಕೆಯನ್ನೇ ಕುಲ ಕಸಬು ಮಾಡಿಕೊಂಡಿರುವ ಎಷ್ಟು ಬೆಸ್ತರು ನಿರುದ್ಯೋಗಿಗಳಾಗುತ್ತಾರೆ ; ಈ ಕುರಿತು ಸರ್ಕಾರದ ನಿಲುವೇನು ?

## ಮದರಸ ಶಿಕ್ಷಣ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೯ (೧೮೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊರದೇಶ ಮತ್ತು ಬೇರೆ ರಾಜ್ಯಗಳಿಂದ ಮಕ್ಕಳು ಗುಂಪು ಗುಂಪಾಗಿ ಕರ್ನಾಟಕ ರಾಜ್ಯದಲ್ಲಿ ಬಂದು ಮದರಸ ಶಿಕ್ಷಣ ಪಡೆಯುತ್ತಿರುವ ಬಗ್ಗೆ ಸರ್ಕಾರದ ನಿಲುವೇನು ; ರಾಜ್ಯದ ಮದರಸಗಳಲ್ಲಿ ಅತಿ ಉನ್ನತ ಮಟ್ಟದ ಶಿಕ್ಷಣ ನೀಡಲಾಗುತ್ತಿದೆಯೇ ಅಥವಾ ಮೂಲಭೂತವಾದ ಶಿಕ್ಷಣವು ರಾಜ್ಯದಲ್ಲಿ ಮಾತ್ರವೇ ದೊರೆಯುತ್ತಿದೆಯೇ ;

(ಆ) ದೇಶದ ಹಲವಾರು ಭಯೋತ್ಪಾದನಾ ಕೃತ್ಯಗಳಲ್ಲಿ ಭಾಗಿಯಾದವರು ಮತ್ತು ಐಸಿಎಸ್, ತಾಲಿಬಾನ್ ನಂತಹಾ ಉಗ್ರ ಸಂಘಟನೆಗಳಲ್ಲಿ ಭಾಗಿಯಾಗುತ್ತಿರುವವರು ಮದರಸ ಶಿಕ್ಷಣ ಪಡೆದವರು ಎಂಬುದರ ಕುರಿತು ಸರ್ಕಾರದ ನಿಲುವೇನು ; ರಾಜ್ಯದಲ್ಲಿ ಮದರಸ ಶಿಕ್ಷಣವನ್ನು ನಿರ್ಬಂಧಿಸುವ ಕುರಿತು ಸರ್ಕಾರದ ನಿಲುವೇನು ;

(ಇ) ಮದರಸ ಶಿಕ್ಷಣ ಸಂಸ್ಥೆಗಳಿಂದ ಸರ್ಕಾರಕ್ಕೆ ಬರುವ ಆದಾಯವೆಷ್ಟು; ಮದರಸ ಶಿಕ್ಷಣದಲ್ಲಿ ಸಣ್ಣ ಸಣ್ಣ ಮಕ್ಕಳಿಗೆ ತಮ್ಮ ದೇವರನ್ನು ಪೂಜಿಸುವವರನ್ನು ಕೊಲ್ಲು ಎಂಬುದಾಗಿ ಪಾಠ ಮಾಡುವ ಸಮಯದಲ್ಲಿ ಆ ರೀತಿಯಾಗಿ ಅವರಿಗೆ ವೇತನ ನೀಡುತ್ತಿರುವ ರಾಜ್ಯದ ತೆರಿಗೆದಾರರನ್ನು ಕೊಲ್ಲು ಎಂದಂತಾಗುದಿಲ್ಲವೇ ; ಈ ಕುರಿತು ಸರ್ಕಾರದ ನಿಲುವೇನು ?

## ಕೃಷಿ ಸಿಂಚಾಯಿ ಯೋಜನೆ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೦ (೧೮೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯನ್ನು ರಾಜ್ಯದಲ್ಲಿ ಜಾರಿಗೊಳಿಸಲಾಗಿದೆಯೇ ; ಈ ಯೋಜನೆಯ ಜಾರಿಗೆ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ದೊರೆತ ಅನುದಾನ ಎಷ್ಟು ; ಇದರಲ್ಲಿ ಎಷ್ಟು ಅನುದಾನ ಬಳಕೆ ಮಾಡಲಾಗಿದೆ ;

(ಆ) ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯನ್ನು ಯಾವ ಯಾವ ಜಿಲ್ಲೆಗಳಲ್ಲಿ ಜಾರಿಗೊಳಿಸಲಾಗಿದೆ, ಇದರಿಂದ ಎಷ್ಟು ಎಕರೆ ಕೃಷಿ ಭೂಮಿಗೆ ನೀರುಣಿಸಲಾಗಿದೆ ; ಎಷ್ಟು ರೈತರಿಗೆ ಅನುಕೂಲವಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ನೀರಾವರಿಗೆ ಒಳಪಟ್ಟ ಕೃಷಿ ಜಮೀನು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಕೃಷಿ ಉತ್ಪನ್ನಗಳಿಗೆ ಉತ್ತಮ ಬೆಂಬಲ ಬೆಲೆ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಕೃಷಿ ಸಮೀಕ್ಷೆ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೧ (೧೮೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರ್ಕಾರ ಕೃಷಿ ಸಮೀಕ್ಷೆ ನಡೆಸಲಾಗಿದೆಯೇ; ಇಲ್ಲವಾದಲ್ಲಿ, ಕೃಷಿ ಸಮೀಕ್ಷೆ ನಡೆಸಲು ಯಾವ ಕ್ರಮ ಕೈಗೊಳ್ಳಲಾಗಿದೆ ; ಕೃಷಿ ನೀತಿ ಕುರಿತು ಸರ್ಕಾರದ ನಿಲುವೇನು ;

(ಆ) ರಾಜ್ಯದ ರೈತರ ಪಹಣಿಗಳಲ್ಲಿ ಬೆಳೆ ಮಾಹಿತಿ ದಾಖಲು ಮಾಡದಿರಲು ಕಾರಣಗಳೇನು ; ರಾಜ್ಯದ ಕೃಷಿ ವ್ಯವಸ್ಥೆಯನ್ನು ತಿಳಿಯಲು ರೈತರ ಪಹಣಿಗಳಲ್ಲಿ ಬೆಳೆ ಮಾಹಿತಿ ನಮೂದು ಮಾಡುವುದು ಕಡ್ಡಾಯಗೊಳಿಸಲಾಗಿದೆಯೇ ; ರೈತರ ಪಹಣಿಗಳಲ್ಲಿ ಕೃಷಿ ಮಾಹಿತಿ ನಮೂದು ಮಾಡದಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ರೈತರ ಪಹಣಿಗಳಲ್ಲಿ ಬೆಳೆ ಮಾಹಿತಿಯನ್ನು ನಮೂದು ಮಾಡಲಾಗಿದೆ ; ರಾಜ್ಯದ ರೈತರು ಎಷ್ಟು ಎಕರೆ ಪ್ರದೇಶಗಳಲ್ಲಿ ಯಾವ ಬೆಳೆ ಬೆಳೆದಿರುತ್ತಾರೆ ಎಂಬುದರ ಕುರಿತು ಜಿಲ್ಲಾವಾರು ಮಾಹಿತಿ ನೀಡುವುದು ; ಭೂಮಿ ತಂತ್ರಾಂಶದಲ್ಲಿ ರೈತರ ಬೆಳೆಯು ಕುರಿತು ಪಹಣಿಗಳಲ್ಲಿ ದಾಖಲೆಗಳನ್ನು ನಮೂದು ಮಾಡಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ರೈತರ ಜಮೀನುಗಳಿಗೆ ಭೇಟಿ ನೀಡದೆ ಕಛೇರಿಯಲ್ಲಿ ಕುಳಿತು ಗ್ರಾಮ ಲೆಕ್ಕಾಧಿಕಾರಿಗಳು ಬೆಳೆ ಹಾನಿ ಕುರಿತು ಸರ್ಕಾರಕ್ಕೆ ವರದಿ

ಸಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಛೇರಿಯಲ್ಲಿ ಕುಳಿತು ಬೆಳೆ ಹಾನಿ ವರದಿ ಸಲ್ಲಿಸಿರುವ ಗ್ರಾಮ ಲೆಕ್ಕಾಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಕಬ್ಬನ್ ಪಾರ್ಕ್ ಉದ್ಯಾನವನದಲ್ಲಿ ರಜಾ ದಿನಗಳಂದೂ ವಾಹನಗಳ ಪ್ರವೇಶಕ್ಕೆ ನಿರ್ಬಂಧ ವಿಧಿಸಿರುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೨೨೨ (೨೧೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಬ್ಬನ್ ಪಾರ್ಕ್ ಉದ್ಯಾನವನದಲ್ಲಿ ರಜಾ ದಿನಗಳಂದೂ ವಾಹನಗಳ ಪ್ರವೇಶಕ್ಕೆ ನಿರ್ಬಂಧ ವಿಧಿಸಿರುವುದಕ್ಕೆ ಪ್ರಮುಖ ಕಾರಣಗಳೇನು ; (ಮಾಹಿತಿ ನೀಡುವುದು)

(ಆ) ಕಬ್ಬನ್ ಪಾರ್ಕ್ ಉದ್ಯಾನವನ ಭಾಗದಲ್ಲಿ ರಜಾ ದಿನಗಳಲ್ಲಿ ವಾಹನಗಳ ಸಂಚಾರಕ್ಕೆ ಸಂಬಂಧಿಸಿದಂತೆ ವಿಧಿಸಲಾಗುತ್ತಿರುವ ನಿಯಮಗಳು ಹಾಗೂ ನಿರ್ಬಂಧಗಳಿಂದ ಸಾರ್ವಜನಿಕರಿಗೆ ಉಂಟಾಗುತ್ತಿರುವ ತೊಂದರೆಗಳ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಬ್ಬನ್ ಪಾರ್ಕ್ ಸುತ್ತಮುತ್ತ ರಜಾ ದಿನಗಳಲ್ಲಿ ಉಂಟಾಗುವ ವಾಹನ ದಟ್ಟಣೆ ಮತ್ತು ಪಾರ್ಕಿಂಗ್ ಸಮಸ್ಯೆ ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಈ) ಹಿರಿಯ ನಾಗರಿಕರು, ಅಂಗವಿಕಲರು, ಮಕ್ಕಳು ಹಾಗೂ ತುರ್ತು ಸೇವೆಯ (ಆಂಬುಲೆನ್ಸ್) ಅಗತ್ಯವಿರುವವರಿಗೆ ಕಬ್ಬಣ್ ಪಾರ್ಕ್ ಒಳಗೆ ರಜಾ ದಿನಗಳಲ್ಲಿ ವಾಹನ ಪ್ರವೇಶಕ್ಕೆ ಯಾವುದೇ ವಿಶೇಷ ವ್ಯವಸ್ಥೆ ಕಲ್ಪಿಸಲಾಗಿದೆಯೇ ?

## ಕರ್ನಾಟಕ ಗೃಹ ಮಂಡಳಿ ಮತ್ತು ಕೊಳಚೆ ನಿರ್ಮೂಲನಾ ಮಂಡಳಿಗೆ ಮೀಸಲಿರಿಸಿದ ಅನುದಾನ ಬಗ್ಗೆ

**ಶ್ರೀ ರಘು ಆರ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೩ (೨೪೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕರ್ನಾಟಕ ಗೃಹ ಮತ್ತು ಕೊಳಚೆ ನಿರ್ಮೂಲನಾ ಮಂಡಳಿ ವತಿಯಿಂದ ಎಷ್ಟು ವಸತಿ ಮನೆಗಳನ್ನು ನಿರ್ಮಾಣ ಮಾಡಲಾಗಿದೆ ; (ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ಫಲಾನುಭವಿಗಳಿಗೆ ವಸತಿ ಮನೆಗಳನ್ನು ಗುರುತಿಸಿ ಹಂಚಿಕೆ ಮಾಡಲಾಗಿದೆ ; ಇದಕ್ಕೆ ಮೂಲಭೂತ ಸವಲತ್ತುಗಳನ್ನು ಒದಗಿಸಲಾಗಿದೆಯೇ ;

(ಇ) ಕಳೆದ ಮೂರು ವರ್ಷಗಳಲ್ಲಿ ಸದರಿ ಮಂಡಳಿಗಳ ವತಿಯಿಂದ ಇದಕ್ಕೆ ಮೀಸಲಿರಿಸಿದ ಅನುದಾನ ಹಾಗೂ ಖರ್ಚಾಗಿರುವ ಅನುದಾನವೆಷ್ಟು ? (ಮಾಹಿತಿ ನೀಡುವುದು)

## ಸಹಕಾರ ಇಲಾಖೆಯಲ್ಲಿ ಹಿಂದುಳಿದ ವರ್ಗಗಳ ಪ್ರತಿನಿಧಿಗಳಿಗಿರುವ ಸವಲತ್ತುಗಳ ಕುರಿತು

**ಶ್ರೀ ರಘು ಆರ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೪ (೨೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ಇಲಾಖೆಯಲ್ಲಿ ಸಹಕಾರ ಸಂಘಗಳು ಹಾಗೂ ಸಹಕಾರಿ ಬ್ಯಾಂಕುಗಳಲ್ಲಿ ಹಿಂದುಳಿದ ವರ್ಗಗಳ ಪ್ರತಿನಿಧಿಗಳಿಗೆ ಮೀಸಲಾತಿ ಒದಗಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಹಿಂದುಳಿದ ವರ್ಗಗಳ ಪ್ರತಿನಿಧಿಗಳನ್ನು ಆಯ್ಕೆ ಮಾಡಲು ಸರ್ಕಾರ ಕೈಗೊಂಡಿರುವ ಮಾನದಂಡಗಳೇನು ? (ಮಾಹಿತಿ ನೀಡುವುದು)

## ಕೃಷಿ ಕ್ಷೇತ್ರದಲ್ಲಿ ಯುವಕರನ್ನು ಆಕರ್ಷಿಸುವ ಸವಲತ್ತುಗಳ ಕುರಿತು

**ಶ್ರೀ ರಘು ಆರ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೫ (೨೪೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಕ್ಷೇತ್ರದಲ್ಲಿ ಯುವಕರನ್ನು ಆಕರ್ಷಿಸುವ ಸಲುವಾಗಿ ಯಾವ ಯಾವ ಯೋಜನೆಗಳನ್ನು ಸರ್ಕಾರ ಕೈಗೊಂಡಿದೆ ; (ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ರೈತರಿಗೆ ಬೆಂಬಲ ಬೆಲೆ ನೀಡಲಾಗಿದೆಯೇ ; ಯಾವ ಯಾವ ಬೆಳೆಗಳಿಗೆ ಬೆಂಬಲ ಬೆಲೆ ಘೋಷಿಸಲಾಗಿದೆ ; (ಮಾಹಿತಿ ನೀಡುವುದು)

(ಇ) ಎಷ್ಟು ರೈತರಿಗೆ ಬೆಂಬಲ ಬೆಲೆ ಪಾವತಿಸಲಾಗಿದೆ ; ಎಷ್ಟು ಎಕರೆಗಳಿಗೆ ಇದುವರೆಗೂ ಯಾವ ಯಾವ ಬೆಳೆಗೆ ಬೆಂಬಲ ಬೆಲೆ ಪಾವತಿಸಲಾಗಿದೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಮೈಸೂರು ಸಿಲ್ಕ್ ಸೀರೆ ಮಾರಾಟದ ಬಗ್ಗೆ

**ಶ್ರೀ ರಘು ಆರ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೬ (೨೪೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಸಿಲ್ಕ್ ಹೆಸರಿನಲ್ಲಿ ಪ್ರವಾಸೋದ್ಯಮ ಸ್ಥಳಗಳಲ್ಲಿ ನಕಲಿ ಸಿಲ್ಕ್ ಸೀರೆಗಳನ್ನು ಮಾರಾಟ ಮಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ಮಾಹಿತಿ ನೀಡುವುದು)

(ಆ) ಬಂದಿದ್ದಲ್ಲಿ, ನಕಲಿ ಸಿಲ್ಕ್ ಸೀರೆಗಳನ್ನು ಮಾರಾಟ ಮಾಡುತ್ತಿರುವವರ ವಿರುದ್ಧ ಕಾನೂನಾತ್ಮಕವಾಗಿ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಇ) ರೇಷ್ಮೆ ಉತ್ಪನ್ನಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ; (ಮಾಹಿತಿ ನೀಡುವುದು)

(ಈ) ಮೈಸೂರು ಸಿಲ್ಕ್ ಸೀರೆ ಉತ್ಪಾದನೆಗಳಿಗೆ ಬೇಡಿಕೆ ಎಷ್ಟು ಇದೆ ; ಸದರಿ ಮೈಸೂರು ಸಿಲ್ಕ್ ಸೀರೆಗಳನ್ನು ಬೇಡಿಕೆಯುಷ್ಟು ಉತ್ಪಾದಿಸಲಾಗುತ್ತಿದೆಯೇ ? (ಮಾಹಿತಿ ಒದಗಿಸುವುದು)

## ಕೃಷಿ ಪ್ರಾಯೋಗಿಕ ಪರೀಕ್ಷೆಯಲ್ಲಿ ನಡೆದಿರುವ ಲೋಪಗಳ ಬಗ್ಗೆ ತನಿಖೆ ನಡೆಸುವ ಕುರಿತು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೭ (೨೫೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃಷಿ ಪ್ರಾಯೋಗಿಕ ಪರೀಕ್ಷೆ ನಡೆದಿದ್ದು ಯಾವಾಗ ; ಒಟ್ಟು ಎಷ್ಟು ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು ; ಎಷ್ಟು ಕೇಂದ್ರಗಳಲ್ಲಿ ಪರೀಕ್ಷೆ ನಡೆದಿದೆ ;

(ಆ) ಕೃಷಿ ಪ್ರಾಯೋಗಿಕ ಪರೀಕ್ಷೆಯಲ್ಲಿ ಲೋಪಗಳು ನಡೆದಿರುವ ಕುರಿತು ದೂರುಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ದೂರುಗಳು ಬಂದಿವೆಯೇ ;

(ಇ) ಈ ವಿಚಾರದಲ್ಲಿ ಸರ್ಕಾರ ತನಿಖೆ ನಡೆಸಿದೆಯೇ ; ತನಿಖೆಯಲ್ಲಿ ಕಂಡುಬಂದಿರುವ ಅಂಶಗಳೇನು ;

(ಈ) ಪರೀಕ್ಷೆಯಲ್ಲಿ ಲೋಪಗಳು ನಡೆದಿರುವ ಕಾರಣ ಮರು ಪರೀಕ್ಷೆ ನಡೆಸುವ ಕುರಿತು ಸರ್ಕಾರದ ನಿಲುವೇನು ?

## ರೇರಾ ಕಾಯ್ದೆ ಪರಿಣಾಮಕಾರಿಯಾಗಿ ಜಾರಿಗೆ ತರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೮ (೨೫೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೇರಾ ಕಾಯ್ದೆ ರಾಜ್ಯದಲ್ಲಿ ಜಾರಿಗೆ ಬಂದಿದ್ದು ಯಾವಾಗ ; ಕಾಯ್ದೆಯ ಮೂಲ ಉದ್ದೇಶವೇನು ; ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ರೇರಾ ಕಾಯ್ದೆಯಡಿ ಈವರೆಗೆ ಎಷ್ಟು ದೂರುಗಳು ದಾಖಲಾಗಿವೆ ; ಎಷ್ಟು ದೂರುಗಳಿಗೆ ಪರಿಹಾರ ಒದಗಿಸಲಾಗಿದೆ ; ದೂರುಗಳ ಹಿನ್ನೆಲೆಯಲ್ಲಿ ಎಷ್ಟು ಬಿಲ್ಡರ್‌ಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ರೇರಾದಲ್ಲಿ ನೊಂದಣಿಯಾಗದ ವಸತಿ ಯೋಜನೆಗಳ ವಿರುದ್ಧ ಎಷ್ಟು ದೂರುಗಳು ಸಲ್ಲಿಕೆಯಾಗಿದೆ ; ದೂರುಗಳ ಕುರಿತು ತನಿಖೆ ಆಗಿದೆಯೇ ; ಎಷ್ಟು ದೂರುಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ ಕಾಯ್ದೆ ಉಲ್ಲಂಘಿಸುವ ಬಿಲ್ಡರ್‌ಗಳಿಗೆ ವಿಧಿಸಿರುವ ದಂಡದ ಮೊತ್ತ ಎಷ್ಟು ; ದಂಡದ ಮೊತ್ತದಲ್ಲಿ ವಸೂಲಿ ಮಾಡಿರುವ ಮತ್ತು ವಸೂಲಾಗಲು ಬಾಕಿ ಇರುವ ಮೊತ್ತ ಎಷ್ಟು ;

(ಉ) ಬಿಲ್ಡರ್‌ಗಳ ವಿರುದ್ಧ ಕ್ರಮ ಕೈಗೊಳ್ಳಲು ರೇರಾಗೆ ಸರ್ಕಾರ ಶಾಸನಾತ್ಮಕ ಅಧಿಕಾರ ನೀಡಿದೆಯೇ ; ಶಾಸನಾತ್ಮಕ ಅಧಿಕಾರ ನೀಡುವ ಕುರಿತು ಸರ್ಕಾರದ ನಿಲುವೇನು ?

## ಮಳೆ ಬಾರದ ಕಾರಣ ಸಂಕಷ್ಟದಲ್ಲಿರುವ ರೈತರಿಗೆ ಪರಿಹಾರ ನೀಡುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯ (೨೫೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಂಗಾರು ಹಾಗೂ ಹಿಂಗಾರಿನಲ್ಲಿ ಪ್ರತೀ ವರ್ಷ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಆಗುತ್ತಿತ್ತು ; ಈ ವರ್ಷ ಆಗಿರುವ ಬಿತ್ತನೆ ಪ್ರಮಾಣ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ವರ್ಷ ಮಳೆ ಆಗದ ಕಾರಣ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ; ಬೆಳೆ ಹಾನಿ ಮೌಲ್ಯ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಮಳೆ ಬಾರದೆ ಸಂಕಷ್ಟದಲ್ಲಿರುವ ಕೃಷಿಕರಿಗೆ ಸರ್ಕಾರ ನೀಡಿರುವ ಪರಿಹಾರಗಳೇನು ; ಬರ ನಿರ್ವಹಣೆಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಈ) ಬೆಳೆ ಹಾನಿಯಿಂದಾಗಿ ಈ ವರ್ಷ ಆಹಾರ ಉತ್ಪಾದನೆ ಎಷ್ಟು ಕುಸಿತ ಆಗಲಿದೆ; ಉತ್ಪಾದನೆ ಕುಸಿತದಿಂದಾಗುವ ಆಹಾರ ಕೊರತೆ ನೀಗಿಸಲು ಹಾಗೂ ಆಹಾರ ಪದಾರ್ಥಗಳ ಬೆಲೆ ಹೆಚ್ಚಳವನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರೈತರ ಕೃಷಿ ಸಾಲ ಮನ್ನಾ ಮಾಡುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೦ (೨೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷದಿಂದ ರಾಜ್ಯದಲ್ಲಿ ಸಹಕಾರಿ ಸಂಘಗಳು, ಅಫೆಕ್ಸ್ ಬ್ಯಾಂಕ್ ಮತ್ತು ರಾಷ್ಟ್ರೀಕೃತ ಬ್ಯಾಂಕ್‌ಗಳಿಂದ ಎಷ್ಟು ಜನ ರೈತರು ಬೆಳೆ ಸಾಲ ಪಡೆದಿದ್ದಾರೆ ; ಸಾಲದ ಒಟ್ಟು ಮೊತ್ತ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಜುಲೈ ೩೧, ೨೦೨೬ಕ್ಕೆ ಎಷ್ಟು ರೈತರು ಪ್ರಸಕ್ತ ವರ್ಷದ ಸಾಲ ಪೂರ್ಣ ಪ್ರಮಾಣದಲ್ಲಿ ಮರು ಸಂದಾಯ ಮಾಡಿದ್ದಾರೆ ; ಎಷ್ಟು ರೈತರು ಸಾಲ ಹಿಂದಿರುಗಿಸಲು ವಿಫಲರಾಗಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಬರಗಾಲ ಆವರಿಸಿರುವುದರಿಂದ ಸರ್ಕಾರ ರೈತರ ಸಾಲ ಮನ್ನಾ ಮಾಡಲು ಕ್ರಮ ಕೈಗೊಳ್ಳುವುದೇ ; ಈ ವಿಚಾರದಲ್ಲಿ ಸರ್ಕಾರದ ನಿಲುವೇನು ?

## ಕರ್ನಾಟಕದಲ್ಲಿ 'ಡಿಜಿಟಲ್ ಕೃಷಿ ಮಿಷನ್' ಅನುಷ್ಠಾನ

**ಶ್ರೀ ಶಿವಣ್ಣ ಬಿ.ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೧ (೧೯೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸಂಪುಟವು ಅನುಮೋದಿಸಿರುವ 'ಡಿಜಿಟಲ್ ಕೃಷಿ ಮಿಷನ್' (Digital Agriculture Mission) ಅಡಿಯಲ್ಲಿ ರಾಜ್ಯದಲ್ಲಿ ಜಾರಿಗೆ ತರಲಾದ ಯೋಜನೆಗಳು, ಪೈಲೆಟ್ ಯೋಜನೆಗಳು

ಮತ್ತು ಉಪಕ್ರಮಗಳ ಸಂಪೂರ್ಣ ವಿವರಗಳು ಹಾಗೂ ಅನುಷ್ಠಾನದ ಪ್ರಸ್ತುತ ಸ್ಥಿತಿ ಏನು ;

(ಆ) ಕಳೆದ ಮೂರು ವರ್ಷಗಳಿಂದ ಪ್ರಸ್ತುತದವರೆಗೆ ಈ ಮಿಷನ್ ಅಡಿಯಲ್ಲಿ ರಾಜ್ಯಕ್ಕೆ ಅಂಚಿಕೆಯಾದ, ಬಿಡುಗಡೆಯಾದ ಮತ್ತು ಬಳಸಲಾಗದ ಹಣಕಾಸಿನ ವರ್ಷವಾರು ವಿವರಗಳನ್ನು ಒದಗಿಸುವುದು ;

(ಇ) ರಾಜ್ಯದಲ್ಲಿ 'ಅಗ್ರಿ–ಸ್ಟ್ಯಾಕ್' (Agri Stack) ಅಡಿಯಲ್ಲಿ ರೈತರ ಡಿಜಿಟಲ್ ಗುರುತಿನ ಚೀಟಿ (Farmer- ID) ಸೃಷ್ಟಿ ಡಿಜಿಟಲ್ ಬೆಳೆ ಸಮೀಕ್ಷೆ (Digital Crop Survey) ಭೂ ದಾಖಲೆಗಳ ಡಿಜಿಟಲೀಕರಣ ಮತ್ತು AI ರಿಮೋಟ್ ಸೆನ್ಸಿಂಗ್ ತಂತ್ರಜ್ಞಾನಗಳ ಬಳಕೆಯಲ್ಲಿ ಸಾಧಿಸಲಾದ ಪ್ರಗತಿಯ ವಿವರಗಳೇನು ;

(ಈ) ಕೃಷಿ ಸಾಲ, ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ (PMFBY) ಅಡಿಯಲ್ಲಿ ವಿಮಾ ಪರಿಹಾರ ವಿತರಣೆ ಮತ್ತು ಬೆಲೆ ಆವಿಷ್ಕಾರವನ್ನು ಸುಲಭಗೊಳಿಸುವಲ್ಲಿ ಈ ಮಿಷನ್ ರಾಜ್ಯದ ಸಣ್ಣ ಮತ್ತು ಅತಿ ಸಣ್ಣ ರೈತರ ಮೇಲೆ ಬೀರಿದ ಪ್ರಭಾವವನ್ನು ಸರ್ಕಾರವು ಮೌಲ್ಯಮಾಪನ ಮಾಡಿದೆಯೇ ?

## ಬೆಂಗಳೂರು ಮತ್ತು ಸುತ್ತಮುತ್ತಲಿನ ನಗರಗಳ ನಡುವೆ ಪ್ರಾದೇಶಿಕ ಕ್ಷಿಪ್ರ ಸಾರಿಗೆ ವ್ಯವಸ್ಥೆ (RRTS) ಮಾದರಿಯ ಕಾರಿಡಾರ್ ಅಭಿವೃದ್ಧಿ ಕುರಿತು

**ಶ್ರೀ ಶಿವಣ್ಣ ಬಿ.ಎಸ್.(ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೨ (೧೯೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೆಹಲಿ ಎನ್‌ಸಿಆರ್ ಮಾದರಿಯಲ್ಲಿ ಬೆಂಗಳೂರನ್ನು ನೆರೆಯ ನಗರಗಳಾದ ತುಮಕೂರು, ಮೈಸೂರು, ಕೋಲಾರ ಮತ್ತು ಚಿಕ್ಕಬಳ್ಳಾಪುರಕ್ಕೆ ಸಂಪರ್ಕಿಸಲು ಪ್ರಾದೇಶಿಕ ಕ್ಷಿಪ್ರ ಸಾರಿಗೆ ವ್ಯವಸ್ಥೆ (RRTS) ಮಾದರಿಯ ಕಾರಿಡಾರ್‌ಗಳನ್ನು ಅಭಿವೃದ್ಧಿಪಡಿಸುವ ಪ್ರಾಸ್ತಾವನೆಯೂ ಸರ್ಕಾರದ ಮುಂದಿದೆಯೇ ;

(ಆ) ಬೆಂಗಳೂರು ಉಪನಗರ ರೈಲು ಯೋಜನೆಗೆ (BSRP) ಮತ್ತು ಈ ಉದ್ದೇಶಿತ ಕ್ಷಿಪ್ರ ಸಾರಿಗೆ ವ್ಯವಸ್ಥೆಗಳ ನಡುವೆ ಸಮನ್ವಯ ಸಾಧಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಈ ಯೋಜನೆಗಳ ಪ್ರಸ್ತುತ ಕಾರ್ಯಸಾಧ್ಯತ ವರದಿಯ (Feasibility Report) ಸ್ಥಿತಿ ಏನು ;

(ಇ) ಬೆಂಗಳೂರಿನ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು ಮತ್ತು ಉಪನಗರಗಳ ಆರ್ಥಿಕ ಬೆಳವಣಿಗೆಗೆ ಪೂರಕವಾಗಿರುವ ಇಂತಹ ಹೈ ಸ್ಪೀಡ್ ರೈಲು ಕಾರಿಡಾರ್‌ಗಳ ಅನುಷ್ಠಾನಕ್ಕೆ ಕೇಂದ್ರ ಸರ್ಕಾರದಿಂದ ಅಥವಾ ರಾಷ್ಟ್ರೀಯ ರಾಜಧಾನಿ ವಲಯ ಸಾರಿಗೆ ನಿಗಮದೊಂದಿಗೆ (NCRTC) ಸಮಾಲೋಚನೆ ನಡೆಸಲಾಗಿದೆಯೇ ;

(ಈ) ಮುಂದಿನ ಐದು ವರ್ಷಗಳಲ್ಲಿ ಈ ಯೋಜನೆಯ ಭೂಸ್ವಾಧೀನ ಮತ್ತು ಹಣಕಾಸು ಕ್ರೋಢಿಕರಣಕ್ಕಾಗಿ ಸರ್ಕಾರ ರೂಪಿಸಿರುವ ನೀಲ ನಕ್ಷೆ (Blueprint) ಏನು ? (ವಿವರ ನೀಡುವುದು)

## ರಾಜ್ಯದಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆ (ನಗರ) ೨.೦ ಅನುಷ್ಠಾನ

**ಶ್ರೀ ಶಿವಣ್ಣ ಬಿ.ಎಸ್.(ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೩ (೧೯೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆ– ನಗರ (PMAY-U) ಯೋಜನೆಯಡಿ ಜಿಲ್ಲಾವಾರು ಮಂಜೂರಾದ, ಪೂರ್ಣಗೊಂಡ ಮತ್ತು ಫಲಾನುಭವಿಗಳಿಗೆ ಹಸ್ತಾಂತರಿಸಲಾದ ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕೇಂದ್ರ ಸರ್ಕಾರವು ಇತ್ತೀಚೆಗೆ ಚಾಲನೆ ನೀಡಿರುವ PMAY-U ಯೋಜನೆ ೨.೦ ಯೋಜನೆಯಡಿ ರಾಜ್ಯಕ್ಕೆ ನಿಗದಿಪಡಿಸಲಾದ ಒಟ್ಟು ಗುರಿ ಎಷ್ಟು ; ಮತ್ತು ಮುಂದಿನ ಮೂರು ವರ್ಷಗಳಲ್ಲಿ ಜಿಲ್ಲಾವಾರು ಎಷ್ಟು ವಸತಿ ಘಟಕಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ ;

(ಇ) PMAY-U ಯೋಜನೆಯಡಿ ನಿರ್ಮಾಣ ಹಂತದಲ್ಲಿರುವ ಮನೆಗಳು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ವಿಳಂಬಕ್ಕೆ ಕಾರಣಗಳೇನು ಮತ್ತು ಸೆಪ್ಟೆಂಬರ್ ೨೦೨೬ರ ಕಾಲಮಿತಿಯೊಳಗೆ ಇವುಗಳನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) PMAY-U ೨.೦ ಅಡಿಯಲ್ಲಿ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ತರಲು ಮತ್ತು ನಗರ ಪ್ರದೇಶದ ಬಡವರಿಗೆ ಸಕಾಲದಲ್ಲಿ ಮನೆ ತಲುಪಿಸಲು ಸರ್ಕಾರ ರೂಪಿಸಿರುವ ಹೊಸ ಮಾರ್ಗಸೂಚಿಗಳು ಯಾವುವು ? (ವಿವರ ನೀಡುವುದು)

## ಮೃತ ಜಾನುವಾರುಗಳಿಗೆ ಸಿಗದ ಪರಿಹಾರ ಕುರಿತು

**ಶ್ರೀ ಶಿವಣ್ಣ ಬಿ.ಎಸ್.(ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೪ (೧೯೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲೆಗಳಲ್ಲಿ ಕಳೆದ ಒಂದುವರೆ ವರ್ಷದಿಂದ ಆಕಸ್ಮಿಕವಾಗಿ ಮೃತಪಟ್ಟ ೧೨೫೫ ರಾಸುಗಳ ಮಾಲೀಕರಿಗೆ ಸರ್ಕಾರದಿಂದ ಪರಿಹಾರಧನ ದೊರೆಯದೆ ರೈತರು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪಶುಪಾಲನಾ ಇಲಾಖೆಯ 'ಕಾಮಧೇನು' ಹಾಗೂ 'ಅನುಗ್ರಹ' ಯೋಜನೆಗಳಡಿ ಮೃತಪಟ್ಟ ಹಸು, ಎಮ್ಮೆ ಹಾಗೂ ಎತ್ತುಗಳಿಗೆ ನೀಡಬೇಕಾದ ರೂ.೧೫,೦೦೦ ಪರಿಹಾರಧನವು ೨೦೨೫ರ ಮೇ ತಿಂಗಳ ನಂತರ ಬಿಡುಗಡೆಯಾಗದಿರಲು ಕಾರಣಗಳೇನು ; (ಜಿಲ್ಲಾದ್ಯಂತ ಬಾಕಿ ಇರುವ ಒಟ್ಟು ಅರ್ಜಿಗಳು ಹಾಗೂ ಮೊತ್ತದ ವಿವರ ನೀಡುವುದು)

(ಇ) ಬಮೂಲ್ (BAMUL) ಒಕ್ಕೂಟಕ್ಕೆ ಹಾಲು ಪೂರೈಸುವ ಜಾನುವಾರುಗಳಿಗೆ ಮಾತ್ರ ವಿಮಾ ಸೌಲಭ್ಯ ದೊರೆಯುತ್ತಿದ್ದು, ಅದರಂತೆ ಉಳುಮೆ ಹಾಗೂ ಸಾರಿಗೆಗೆ ಬಳಸುವ ಎತ್ತುಗಳು ಮತ್ತು ಇತರೆ ರಾಸುಗಳು ವಿಮಾ ವ್ಯಾಪ್ತಿಯಿಂದ ಹೊರಗುಳಿದು ರೈತರಿಗೆ ಆರ್ಥಿಕ ನಷ್ಟವಾಗುತ್ತಿರುವುದು ನಿಜವೇ ;

(ಈ) ವಿಮಾ ಕಂಪನಿಗಳು ಜಾನುವಾರು ಮೃತಪಟ್ಟಾಗ ಯಾವ ಕಾಲಮಿತಿಯಲ್ಲಿ ಪರಿಹಾರ ಹಣ ನೀಡುವುದನ್ನು ಕಡ್ಡಾಯಗೊಳಿಸಲು ಮತ್ತು ಸರ್ಕಾರದಿಂದ ಬಾಕಿ ಇರುವ ಪರಿಹಾರ ಮೊತ್ತವನ್ನು ತಕ್ಷಣವೇ ಬಿಡುಗಡೆ ಮಾಡಲು ಹಾಗೂ ಎಲ್ಲಾ ರಾಸುಗಳಿಗೆ ಸಾರ್ವತ್ರಿಕ ವಿಮಾ ಸೌಲಭ್ಯ ವಿಸ್ತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

# ಪೌರಕಾರ್ಮಿಕರ ಮಕ್ಕಳಿಗೆ ಉಚಿತ ಶಿಕ್ಷಣ ಹಾಗೂ ಉದ್ಯೋಗದಲ್ಲಿ ಮೀಸಲಾತಿ ಒದಗಿಸುವ ಕುರಿತು

**ಶ್ರೀ ಶಿವಣ್ಣ ಬಿ.ಎಸ್.(ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೫ (೧೯೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರಾಭಿವೃದ್ಧಿ, ಪೌರಾಡಳಿತ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ (ಖಾಯಂ, ನೇರ ಪಾವತಿ ಹಾಗೂ ಗುತ್ತಿಗೆ/ಹೊರಗುತ್ತಿಗೆ) ಪೌರಕಾರ್ಮಿಕರ ಮಕ್ಕಳಿಗೆ ಉನ್ನತ, ತಾಂತ್ರಿಕ ಹಾಗೂ ವೃತ್ತಿಪರ ಶಿಕ್ಷಣ ಸೇರಿದಂತೆ ಉಚಿತ ಶಿಕ್ಷಣ ನೀಡುವ ಯಾವುದೇ ವಿಶೇಷ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ಪ್ರಸ್ತುತ ಪೌರಕಾರ್ಮಿಕರ ಮಕ್ಕಳ ಶೈಕ್ಷಣಿಕ ಏಳಿಗೆಗಾಗಿ (ವಿದ್ಯಾರ್ಥಿವೇತನ, ಉಚಿತ ವಸತಿ ನಿಲಯ, ಶೈಕ್ಷಣಿಕ ಧನಸಹಾಯ ಇತ್ಯಾದಿ) ಸರ್ಕಾರ ಜಾರಿಗೆ ತಂದಿರುವ ಚಾಲ್ತಿ ಯೋಜನೆಗಳಾವುವು ಮತ್ತು ಕಳೆದ ಮೂರು ವರ್ಷಗಳಲ್ಲಿ ಇದರಿಂದ ಫಲಾನುಭವಿಯಾದ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಪೌರಕಾರ್ಮಿಕರ ಮಕ್ಕಳಿಗೆ ಸರ್ಕಾರಿ ಉದ್ಯೋಗ ನೇಮಕಾತಿಗಳಲ್ಲಿ ಹಾಗೂ ಶೈಕ್ಷಣಿಕ ಪ್ರವೇಶಾತಿಗಳಲ್ಲಿ ಪ್ರತ್ಯೇಕ ಮೀಸಲಾತಿ ಅಥವಾ ವಿಶೇಷ ಆದ್ಯತೆ/ಸಡಿಲಿಕೆ ನೀಡುವ ಕುರಿತು ಸರ್ಕಾರದ ಹಂತದಲ್ಲಿ ಪರಿಶೀಲನೆ ನಡೆಸಲಾಗಿದೆಯೇ ;

(ಈ) ಹಾಗಿದ್ದಲ್ಲಿ, ಈ ಕುರಿತು ಸಚಿವ ಸಂಪುಟ ಅಥವಾ ಪೌರಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಏನಾದರೂ ನಿರ್ಧಾರ/ಮಾರ್ಗಸೂಚಿ ರೂಪಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಈ ಸಮುದಾಯದ

ಸಾಮಾಜಿಕ ಹಾಗೂ ಶೈಕ್ಷಣಿಕ ಅಭಿವೃದ್ಧಿಗಾಗಿ ಸರ್ಕಾರ ಕೈಗೊಳ್ಳಲಿರುವ ನೂತನ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಪ್ರತಿ ಗ್ರಾಮ ಪಂಚಾಯಿತಿಗೆ ೧೦೦ ಮನೆಗಳನ್ನು ಮಂಜೂರು ಮಾಡುವ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೬ (೨೦೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರತಿ ಗ್ರಾಮ ಪಂಚಾಯಿತಿಗೆ ಕನಿಷ್ಠ ೧೦೦ ಮನೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇದೆಯೇ ;

(ಆ) ಇದ್ದರೆ, ಯಾವ ಕಾಲಮಿತಿಯೊಳಗೆ ಮನೆಗಳನ್ನು ಮಂಜೂರು ಮಾಡಲಾಗುವುದು ;

(ಇ) ಕಳೆದ ಮೂರು (೩) ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳಡಿಯಲ್ಲಿ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಿಗೆ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ; (ಯೋಜನಾವಾರು ಮತ್ತು ಗ್ರಾಮ ಪಂಚಾಯತ್‌ವಾರು ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳ ವಿವಿಧ ವಸತಿ ಯೋಜನೆಗಳ ಮನೆಗಳ ಪ್ರಗತಿ ವಿವರಗಳನ್ನು ಗ್ರಾಮ ಪಂಚಾಯತ್‌ವಾರು ವಿವರ ನೀಡುವುದು ?

## ಗ್ರಾಮೀಣ ಭಾಗದಲ್ಲಿಯ ವಸತಿ ರಹಿತರ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೭ (೨೦೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಭಾಗದಲ್ಲಿ ಹಲವಾರು ಬಡ ಕುಟುಂಬಗಳು ವಸತಿ/ ನಿವೇಶನ ರಹಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಗ್ರಾಮೀಣ ವಸತಿ ರಹಿತರ ಸಮೀಕ್ಷೆಯನ್ನು ಮಾಡಲಾಗಿದೆಯೇ ; ಮಾಡಿದ್ದರೆ, ರಾಜ್ಯದಲ್ಲಿ ಎಷ್ಟು ಜನರು ವಸತಿ/ನಿವೇಶನ ರಹಿತರಾಗಿರುವುದು ಕಂಡುಬಂದಿದೆ ;

(ಇ) ಗ್ರಾಮೀಣ ನಿವೇಶನ ರಹಿತರ ಸಮೀಕ್ಷೆಯನ್ನು ಈ ಹಿಂದೆ ಯಾವಾಗ ಕೈಗೊಳ್ಳಲಾಗಿತ್ತು ; (ವಿವರ ನೀಡುವುದು)

(ಈ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳ ನಿವೇಶನ ರಹಿತರ ವಿವರಗಳನ್ನು ಗ್ರಾಮ ಪಂಚಾಯತ್‌ವಾರು ನೀಡುವುದು ;

(ಉ) ನಿವೇಶನ ರಹಿತರಿಗೆ ನಿವೇಶನಗಳನ್ನು ಒದಗಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇದೆಯೇ ? (ವಿವರ ನೀಡುವುದು)

## ಬುಲೆಟ್ ಟ್ರೈನ್ ಯೋಜನೆಗೆ ಭೂಸ್ವಾಧೀನ ಪ್ರಕ್ರಿಯೆ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೨೩೮ (೨೧೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚೆನ್ನೈ–ಬೆಂಗಳೂರು–ಮೈಸೂರು ನಡುವೆ ಉದ್ದೇಶಿಸಲಾದ ಒಟ್ಟು ೪೭೩ಕಿ.ಮೀ. ಉದ್ದದ ಹೈಸ್ಪೀಡ್ ರೈಲು (ಬುಲೆಟ್ ಟ್ರೈನ್)

ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ ; ಈ ಯೋಜನೆಯ ವಿಸ್ತೃತ ಯೋಜನಾ ವರದಿ (DPR) ಸಿದ್ಧವಾಗಿದ್ದರೂ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಇನ್ನೂ ಅಂತಿಮ ಅನುಮೋದನೆ ಸಿಗದಿರಲು ಕಾರಣಗಳೇನು ;

(ಆ) ರಾಷ್ಟ್ರೀಯ ಹೈಸ್ಪೀಡ್ ರೈಲು ನಿಗಮ (NHSRCL) ಈ ಯೋಜನೆಗಾಗಿ ಗುರುತಿಸಿರುವ ನಿಖರವಾದ ಮಾರ್ಗ (Alignment) ಯಾವುದು ಮತ್ತು ರಾಜ್ಯದ ವ್ಯಾಪ್ತಿಯಲ್ಲಿ (ಮೈಸೂರು. ಮಂಡ್ಯ, ರಾಮನಗರ, ಬೆಂಗಳೂರು ಮತ್ತು ಕೋಲಾರ ಜಿಲ್ಲೆಗಳಲ್ಲಿ) ಬರುವ ಪ್ರಮುಖ ರೈಲ್ವೆ ನಿಲ್ದಾಣಗಳು ಯಾವುವು ; (ಸಂಪೂರ್ಣ ವಿವರ ಒದಗಿಸುವುದು)

(ಇ) ಈ ಮಹತ್ವಾಕಾಂಕ್ಷಿ ಯೋಜನೆಗೆ ರಾಜ್ಯದ ವ್ಯಾಪ್ತಿಯಲ್ಲಿ ಅಗತ್ಯವಿರುವ ಒಟ್ಟು ಭೂಮಿಯ ವಿಸ್ತೀರ್ಣ ಎಷ್ಟು ; ಭೂಸ್ವಾಧೀನ ಪ್ರಕ್ರಿಯೆಯು ಪ್ರಸ್ತುತ ಯಾವ ಹಂತದಲ್ಲಿದೆ ಹಾಗೂ ಇದಕ್ಕಾಗಿ ತಗಲುವ ಅಂದಾಜು ವೆಚ್ಚದಲ್ಲಿ ರಾಜ್ಯ ಸರ್ಕಾರದ ಪಾಲು ಎಷ್ಟಿದೆ ;

(ಈ) ಈ ಯೋಜನೆಯನ್ನು ಆದಷ್ಟು ಶೀಘ್ರವಾಗಿ ಜಾರಿಗೊಳಿಸಲು ಕೇಂದ್ರ ಸರ್ಕಾರದೊಂದಿಗೆ (ರೈಲ್ವೆ ಸಚಿವಾಲಯ) ರಾಜ್ಯ ಸರ್ಕಾರ ನಡೆಸಿರುವ ಪತ್ರವ್ಯವಹಾರಗಳು ಮತ್ತು ಸಮಾಲೋಚನೆಗಳೇನು ; ಈ ಯೋಜನೆಗೆ ನಿಗಧಿತ ಅವಧಿಯೊಳಗೆ ಅನುಮೋದನೆ ಪಡೆದು ಕಾಮಗಾರಿ ಆರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕರ್ನಾಟಕ ರಾಜ್ಯ ಕೋ–ಆಪರೇಟಿವ್ ಸೊಸೈಟಿ ಮಹಾಮಂಡಲದ ಅಕ್ರಮದ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫ (೨೨೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಕೋ–ಆಪರೇಟಿವ್ ಸೊಸೈಟಿ ಮಹಾಮಂಡಲದಲ್ಲಿ ಅಕ್ರಮವಾಗಿ ಹಣ ವರ್ಗಾವಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ. ಎಷ್ಟು ಮೊತ್ತದ ಹಣ ಹಾಗೂ ಎಷ್ಟು ಹಂತಗಳಲ್ಲಿ ಅಕ್ರಮವಾಗಿದೆ ;

(ಆ) ಸದರಿ ಅಕ್ರಮದಲ್ಲಿ ಭಾಗಿಯಾಗದ ಸಂಘದ ಸದಸ್ಯರು ಹಾಗೂ ಅಧಿಕಾರಿಗಳು ಯಾರು ಅವರ ಮೇಲೆ ಕೈಗೊಂಡ ಕ್ರಮಗಳೇನು ;

(ಇ) ಸಹಕಾರ ಮಂಡಲಳದಲ್ಲಿ ನಿಯಮಿತವಾಗಿ ಲೆಕ್ಕ ಪರಿಶೋಧನೆಯಲ್ಲಿ ಅಕ್ರಮವಾಗಿ ಹಣ ವರ್ಗಾವಣೆಯಾಗಿರುವುದನ್ನು ಪತ್ತೆ ಹಚ್ಚಲಾಗಿದೆಯೇ: ಪತ್ತೆ ಹಚ್ಚದಿದ್ದಲ್ಲ. ಕಾರಣಗಳೇನು ;

(ಈ) ಅಕ್ರಮವಾಗಿ ವರ್ಗಾವಣೆಯಾದ ಸಂಪೂರ್ಣ ಹಣ ವಸೂಲಾತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ಯಾವ ಕಾಲಮಿತಿಯಲ್ಲಿ ವಸೂಲಾತಿ ಮಾಡಲಾಗುವುದು ?

## ಹಿಂದುಳಿದ ಅಲೆಮಾರಿ ಜನಾಂಗದವರಿಗೆ ವಸತಿ ನೀಡುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೨೪೦ (೨೫೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದ ಹಿಂದುಳಿದ ವರ್ಗಗಳ ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರಿಗೆ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇದುವರೆವಿಗೂ ಸ್ವೀಕೃತವಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; ಹಂಚಿಕೆಯಾಗಿರುವ ಮನೆ ಎಷ್ಟು; ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಇ) ಹಿಂದುಳಿದ ವರ್ಗಗಳ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೆ ವಿಶೇಷ ವಸತಿ ಯೋಜನೆ ಅಥವಾ ಮೀಸಲಾತಿ ಕಲ್ಪಿಸುವ ಬಗ್ಗೆ ಸರ್ಕಾರದ ಮುಂದಿನ ಕ್ರಮಗಳೇನು ;

(ಈ) ಹಿಂದುಳಿದ ವರ್ಗಗಳ ಅಲೆಮಾರಿ ಜನಾಂಗದವರಿಗೆ ವಸತಿ ಯೋಜನೆಗಳ ಫಲಾನುಭವಿಗಳಿಗೆ ಪ್ರತ್ಯೇಕ ಆದ್ಯತೆ ನೀಡಲಾಗುತ್ತಿದೆಯೇ ; ಇಲ್ಲದಿದ್ದರೆ, ಅಂತಹ ಆದ್ಯತೆ ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಬರಪೀಡಿತ ಪ್ರದೇಶಗಳಿಗೆ ಅನುದಾನ ಮಂಜೂರು ಮಾಡಿರುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೨೪೧ (೨೬೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ ; ಅದರ ಮಾನದಂಡಗಳು ಯಾವುವು ;

(ಆ) ಬರ ಪರಿಸ್ಥಿತಿಯಿಂದ ಎಷ್ಟು ಹೆಕ್ಟೇರ್ ಕೃಷಿ ಬೆಳೆ ಹಾನಿಯಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬೆಳೆಹಾನಿಗೊಳಗಾದ ರೈತರಿಗೆ ಎಷ್ಟು ಪರಿಹಾರ ಮಂಜೂರಾಗಿದೆ ಮತ್ತು ಎಷ್ಟು ರೈತರಿಗೆ ವಿತರಿಸಲಾಗಿದೆ ;

(ಈ) ಬರಪೀಡಿತ ಪ್ರದೇಶಗಳಲ್ಲಿ ರೈತರಿಗೆ ಉಚಿತ ಅಥವಾ ರಿಯಾಯಿತಿ ದರದಲ್ಲಿ ಮೇವು, ಬೀಜ ಮತ್ತು ರಸಗೊಬ್ಬರ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಬರಪೀಡಿತ ರೈತರಿಗೆ ಕೃಷಿ ಸಾಲ ಮರುಪಾವತಿಗೆ ಅವಧಿ ವಿಸ್ತರಣೆ ಅಥವಾ ಬಡ್ಡಿ ವಿನಾಯಿತಿ ನೀಡುವ ಕುರಿತು ಸರ್ಕಾರದ ನಿರ್ಧಾರವೇನು ?

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ (PACS) ಸಂಸ್ಥೆಗಳ ಮಾಹಿತಿ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೨೪೨ (೨೬೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ (PACS) ಸಂಖ್ಯೆ ಎಷ್ಟು; ಕಳೆದ ಮೂರು ವರ್ಷಗಳಲ್ಲಿ ಎಷ್ಟು ಹೊಸ ಸಂಘಗಳಿಗೆ ನೋಂದಣಿ ನೀಡಲಾಗಿದೆ ;

(ಆ) ಸಹಕಾರ ಬ್ಯಾಂಕುಗಳಲ್ಲಿ ರೈತರಿಗೆ ನೀಡಲಾಗಿರುವ ಬೆಳೆ ಸಾಲದ ಒಟ್ಟು ಮೊತ್ತ ಎಷ್ಟು, ; (ಜಿಲ್ಲಾವಾರು ವಿವರವನ್ನು ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಸಹಕಾರ ಸಂಘಗಳಲ್ಲಿ ನಡೆದಿರುವ ಹಣಕಾಸಿನ ಅಕ್ರಮಗಳ ಕುರಿತು ಎಷ್ಟು ಪ್ರಕರಣಗಳು ದಾಖಲಾಗಿವೆ ;

(ಈ) ರಾಜ್ಯದ ಸಹಕಾರ ಸಂಘಗಳ ಲೆಕ್ಕಪರಿಶೋಧನೆ (Audit) ಬಾಕಿ ಇರುವ ಸಂಘಗಳ ಸಂಖ್ಯೆ ಎಷ್ಟು, ಅವುಗಳನ್ನು ಪೂರ್ಣಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಸಹಕಾರ ಸಂಘಗಳ ಚುನಾವಣೆಗಳನ್ನು ನಿಗದಿತ ಅವಧಿಯಲ್ಲಿ ನಡೆಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕಳೆದ ೦೩ ವರ್ಷಗಳಲ್ಲಿ ಪಶು ಇಲಾಖೆಯ ಸ್ಥಿತಿಯ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೨೪೩ (೨೬೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೦೩ ವರ್ಷಗಳಲ್ಲಿ ಎಷ್ಟು ಪಶುಗಳಿಗೆ ಉಚಿತ ಲಸಿಕೆ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪಶು ಆಸ್ಪತ್ರೆಗಳು ಮತ್ತು ಪಶು ಚಿಕಿತ್ಸಾ ಕೇಂದ್ರಗಳಲ್ಲಿ ವೈದ್ಯರು ಹಾಗೂ ಸಿಬ್ಬಂದಿ ಹುದ್ದೆಗಳ ಮಂಜೂರಾತಿ ಭರ್ತಿ ಮತ್ತು ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಬರಪೀಡಿತ ಪ್ರದೇಶಗಳಲ್ಲಿ ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಇದಕ್ಕಾಗಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ;

(ಈ) ಜಾನುವಾರುಗಳಿಗೆ ಹರಡುವ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಕಳೆದ ಮೂರು ವರ್ಷಗಳಲ್ಲಿ ಗೋಶಾಲೆಗಳಿಗೆ ನೀಡಿರುವ ಅನುದಾನ ಹಾಗೂ ಅದರ ಫಲಾನುಭವಿಗಳ ವಿವರವನ್ನು ನೀಡುವುದು ?

## ರಾಜ್ಯದಲ್ಲಿರುವ ನಗರಸಭೆ, ಪುರಸಭೆಗಳ ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೨೪೪ (೨೬೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ ಖಾಲಿ ಇರುವ ಅಧಿಕಾರಿ ಮತ್ತು ಸಿಬ್ಬಂದಿ ಹುದ್ದೆಗಳ ಸಂಖ್ಯೆ ಎಷ್ಟು; ಅವುಗಳನ್ನು ಯಾವಾಗ ಭರ್ತಿ ಮಾಡಲಾಗುವುದು ;

(ಆ) ಕಳೆದ ಮೂರು ವರ್ಷಗಳಲ್ಲಿ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; ಎಷ್ಟು ಅನುದಾನ ಬಳಸಲಾಗಿದೆ ;

(ಇ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರು, ಒಳಚರಂಡಿ ಹಾಗೂ ಘನ ತ್ಯಾಜ್ಯ ನಿರ್ವಹಣೆಗೆ ಕೈಗೊಂಡಿರುವ ಯೋಜನೆಗಳು ಯಾವುವು ;

(ಈ) ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆ (ನಗರ) ಹಾಗೂ ರಾಜ್ಯ ವಸತಿ ಯೋಜನೆಗಳಡಿ ಎಷ್ಟು ಮನೆಗಳು ಮಂಜೂರಾಗಿದೆ ; ಎಷ್ಟು ಪೂರ್ಣಗೊಂಡಿವೆ ; (ಸಂಪೂರ್ಣ ವಿವರ ನೀಡುವುದು)

(ಉ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ರಸ್ತೆ, ಚರಂಡಿ ಮತ್ತು ಸಾರ್ವಜನಿಕ ಮೂಲಸೌಕರ್ಯ ಕಾಮಗಾರಿಗಳ ಗುಣಮಟ್ಟ ಪರಿಶೀಲನೆಗಾಗಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಕಲಬುರಗಿ ಜಿಲ್ಲೆಯಲ್ಲಿ ರೈತರ ಆತ್ಮಹತ್ಯೆ ಪ್ರಕರಣ ಹಾಗೂ ಪರಿಹಾರ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೫ (೨೨೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದೀಚೆಗೆ ೨೦೨೩-೨೪ ರಿಂದ ೨೦೨೫-೨೬ ರವರೆಗೆ ಬರ ಅತಿವೃಷ್ಠಿ, ಸಾಲ ಬಾಧೆ ಹಾಗೂ ಬೆಳೆ ನಷ್ಟದಿಂದಾಗಿ ಒಟ್ಟು ಎಷ್ಟು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ; (ವರ್ಷಾವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಪೈಕಿ ಸರ್ಕಾರದಿಂದ ಅಧಿಕೃತವಾಗಿ ಅಂಗೀಕರಿಸಲ್ಪಟ್ಟು ಪರಿಹಾರ ಮಂಜೂರಾದ ಪ್ರಕರಣಗಳು ಎಷ್ಟು ತಿರಸ್ಕೃತಗೊಂಡ ಪ್ರಕರಣಗಳು ಎಷ್ಟು ; (ಪ್ರಕರಣವಾರು ಕಾರಣಗಳೊಂದಿಗೆ ವಿವರ ನೀಡುವುದು)

(ಇ) ಮೃತ ರೈತರ ಕುಟುಂಬಗಳಿಗೆ ಸರ್ಕಾರದಿಂದ ನೀಡಲಾಗುವ ತಲಾ ರೂ. ೫ ಲಕ್ಷ ಪರಿಹಾರ ಧನವನ್ನು ಎಲ್ಲಾ ಅರ್ಹ ಕುಟುಂಬಗಳಿಗೆ ಸಂಪೂರ್ಣವಾಗಿ ವಿತರಿಸಲಾಗಿದೆಯೇ ; ವಿತರಿಸದಿದ್ದಲ್ಲಿ, ಬಾಕಿ ಇರುವ ಪ್ರಕರಣಗಳೆಷ್ಟು ಮತ್ತು ಇದಕ್ಕೆ ಕಾರಣಗಳೇನು ;

(ಈ) ಬೆಳೆಗಳಿಗೆ ಸೂಕ್ತ ಬೆಂಬಲ ಬೆಲೆ (MSP)ಸಿಗದಿರುವುದು ಮತ್ತು ಕೃಷಿ ವೆಚ್ಚ ಹೆಚ್ಚಾಗುತ್ತಿರುವುದು ರೈತರ ಆತ್ಮಹತ್ಯೆಗೆ ಪ್ರಮುಖ ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ರೈತರ ಆತ್ಮಹತ್ಯೆಯನ್ನು ತಡೆಗಟ್ಟಲು ಮತ್ತು ಸಂಕಷ್ಟದಲ್ಲಿರುವ ಕೃಷಿಕ ಕುಟುಂಬಗಳಿಗೆ ನೆರವಾಗಲು ಸರ್ಕಾರವು ಜಿಲ್ಲೆಯಲ್ಲಿ ಕೈಗೊಂಡಿರುವ ಪ್ರಮುಖ ಮುನ್ನೆಚ್ಚರಿಕಾ ಹಾಗೂ ಪರಿಹಾರ ಕ್ರಮಗಳೇನು ?

# ರೈಲ್ವೆ ಪರೀಕ್ಷೆಗಳಲ್ಲಿ ಕನ್ನಡಿಗರಿಗೆ ಅನ್ಯಾವಾಗಿರುವ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೬ (೨೩೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೈರುತ್ಯ ರೈಲ್ವೆಯು (South Western Railway) ನಡೆಸಲು ಉದ್ದೇಶಿಸಿರುವ ಇಲಾಖೆಯ ಪದೋನ್ನತಿ (Promotion) ಪರೀಕ್ಷೆಗಳಲ್ಲಿ ಕನ್ನಡ ಭಾಷೆಗೆ ಅವಕಾಶ ನೀಡದೆ ಕನ್ನಡಿಗ ನೌಕರರಿಗೆ ಪದೇ ಪದೇ ಭಾರಿ ಅನ್ಯಾಯ ಎಸಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) "ಗೂಡ್ಸ್ ಟ್ರೇನ್ ಮ್ಯಾನೇಜರ್" ಹುದ್ದೆಯ ಕಂಪ್ಯೂಟರ್ ಆಧಾರಿತ (CBT) ಪದೋನ್ನತಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳನ್ನು ಕೇವಲ ಇಂಗ್ಲೀಷ್ ಮತ್ತು ಹಿಂದಿ ಭಾಷೆಗಳಲ್ಲಿ ಮಾತ್ರ ಸಿದ್ದಪಡಿಸುತ್ತಿರುವುದಕ್ಕೆ ರಾಜ್ಯ ಸರ್ಕಾರದ ಆಕ್ಷೇಪವೇನು ;

(ಇ) ರಾಜ್ಯದ ನೆಲದಲ್ಲೇ ನಡೆಯುವ ಕೇಂದ್ರ ಸರ್ಕಾರದ ವ್ಯಾಪ್ತಿಯ ಇಲಾಖಾ ಪರೀಕ್ಷೆಗಳಲ್ಲಿ ಸ್ಥಳೀಯ ಅಧಿಕೃತ ಭಾಷೆಯಾದ ಕನ್ನಡದಲ್ಲಿ ಪರೀಕ್ಷೆ ಬರೆಯಲು ಅವಕಾಶ ನೀಡದಿರುವುದು ಕನ್ನಡಿಗರ ಭಾಷಾ ಹಕ್ಕುಗಳ ಉಲ್ಲಂಘನೆಯಲ್ಲವೇ: ಈ ತಾರತಮ್ಯ ನೀತಿಯನ್ನು ಖಂಡಿಸಿ ರೈಲ್ವೆ ಮಂಡಳಿ (Railway Board) ಹಾಗೂ ಕೇಂದ್ರ ರೈಲ್ವೆ ಸಚಿವರಿಗೆ ರಾಜ್ಯ ಸರ್ಕಾರದಿಂದ ಯಾವುದೇ ತುರ್ತು ಪ್ರತಿಭಟನಾ ಪತ್ರ ಅಥವಾ ಕಟ್ಟು ನಿಟ್ಟಿನ ಸೂಚನೆಗಳನ್ನು ರವಾನಿಸಲಾಗಿದೆಯೇ ;

(ಈ) ಮುಂದಿನ ದಿನಗಳಲ್ಲಿ ಕನ್ನಡದಲ್ಲೂ ಪ್ರಶ್ನೆಪತ್ರಿಕೆ ಸಿದ್ಧಪಡಿಸಿದ ನಂತರವೇ ಮರುಪರೀಕ್ಷೆ ನಡೆಸುವಂತೆ ನೈರುತ್ಯ ರೈಲ್ವೆಯ ಮಹಾಪ್ರಬಂಧಕರಿಗೆ (GM) ರಾಜ್ಯ ಸರ್ಕಾರವು ಕಟ್ಟು ನಿಟ್ಟಿನ ನಿರ್ದೇಶನ ನೀಡಲು ಮುಂದಾಗುವುದೇ ?

## ವಸತಿ ಯೋಜನೆಯ ಸಬ್ಸಿಡಿ ಹಣ ಬಿಡುಗಡೆಯಾಗದಿರುವ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೭ (೨೩೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಸತಿ ರಹಿತರಿಗೆ ಆಸರೆಯಾಗಬೇಕಿದ್ದ ರಾಜೀವ್ ಗಾಂಧಿ ವಸತಿ ನಿಗಮದ ಯೋಜನೆಗಳು ಹಳ್ಳ ಹಿಡಿದಿದ್ದು ಕಳೆದ ೧೮ ತಿಂಗಳುಗಳಿಂದ ಬಿಡುಗಡೆಯಾಗಬೇಕಿದ್ದ ರೂ.೪೫೦೦ ಕೋಟಿಗೂ ಅಧಿಕ ಸಬ್ಸಿಡಿ ಅನುದಾನ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಡ ಮತ್ತು ಮಧ್ಯಮ ವರ್ಗದ ಫಲಾನುಭವಿಗಳು ಮನೆ ನಿರ್ಮಾಣ ಮಾಡಿಕೊಂಡಿದ್ದರೂ, ಸರ್ಕಾರದ ಹಂತದಲ್ಲಿ ಸಬ್ಸಿಡಿ ಹಣ ಬಿಡುಗಡೆಯಾಗದ ಕಾರಣ ಸಾಲದ ಸುಳಿಗೆ ಸಿಲುಕಿ ತೀವ್ರ ಆರ್ಥಿಕ ಸಂಕಷ್ಟ ಅನುಭವಿಸುತ್ತಿರುವುದು ನಿಜವೇ ;

(ಇ) ವಸತಿ ಇಲಾಖೆಯು ನಿಗಮಕ್ಕೆ ರೂ.೪೫೦೦ ಕೋಟಿ ವಿಶೇಷ ಅನುದಾನ ನೀಡುವಂತೆ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿರುವುದು ನಿಜವೇ ; ಹಾಗಿದ್ದಲ್ಲಿ, ಆರ್ಥಿಕ ಇಲಾಖೆಯಿಂದ ಈ ಅನುದಾನ ಬಿಡುಗಡೆಗೆ ಅನುಮೋದನೆ ದೊರೆತಿದೆಯೇ ಮತ್ತು ಪ್ರಸ್ತುತ ಈ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಈ) ಲಕ್ಷಾಂತರ ಬಡ ಕುಟುಂಬಗಳ ಹಿತದೃಷ್ಟಿಯಿಂದ ಬಾಕಿ ಇರುವ ಸಂಪೂರ್ಣ ಸಬ್ಸಿಡಿ ಮೊತ್ತವನ್ನು ಫಲಾನುಭವಿಗಳ ಖಾತೆಗೆ ನೇರವಾಗಿ ಜಮೆ ಮಾಡಲು ಸರ್ಕಾರ ರೂಪಿಸಿರುವ ತುರ್ತು ಕಾಲಮಿತಿ ಯೋಜನೆ ಯಾವುದು ?

## ಮೃತ ಜಾನುವಾರುಗಳಿಗೆ ಪರಿಹಾರ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೮ (೨೩೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಕಸ್ಮಿಕವಾಗಿ ಮೃತಪಡುವ ಜಾನುವಾರುಗಳಿಗೆ 'ಅನುಗ್ರಹ' (ಕುರಿ/ಮೇಕೆ) ಮತ್ತು "ಕಾಮಧೇನು" (ಹಸು/ಎಮ್ಮೆ/ ಎತ್ತು) ಯೋಜನೆಗಳಡಿ ನೀಡಬೇಕಾದ ಪರಿಹಾರ ಹಣವು ಕಳೆದ ಒಂದು ವರ್ಷದಿಂದ ಬಿಡುಗಡೆಯಾಗದೇ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯಾದ್ಯಂತ ಸುಮಾರು ೫೦ ಸಾವಿರಕ್ಕೂ ಹೆಚ್ಚು ರೈತರಿಗೆ ರೂ.೬೨ ಕೋಟಿಗೂ ಅಧಿಕ ಪರಿಹಾರ ಮೊತ್ತ ಬಾಕಿ ಇರಲು ಕಾರಣವೇನು ; (ಅನುಗ್ರಹ ಯೋಜನೆ ಅಡಿ ರೂ.೩೩.೯೦ ಕೋಟಿ ಹಾಗೂ ಕಾಮಧೇನು ಯೋಜನೆ ಅಡಿ ರೂ.೨೬.೬೫ ಕೋಟಿ ಬಾಕಿ ಇರುವ ವಿವರ ನೀಡುವುದು)

(ಇ) ೨೦೨೫–೨೬ನೇ ಸಾಲಿನಲ್ಲಿ ರಾಜ್ಯದಲ್ಲಿ ಮೃತಪಟ್ಟ ೨೮ ಸಾವಿರಕ್ಕೂ ಹೆಚ್ಚು ಜಾನುವಾರುಗಳ ಪೈಕಿ, ಬಾಗಲಕೋಟೆ ಒಂದೇ ಜಿಲ್ಲೆಯಲ್ಲಿ 'ಅನುಗ್ರಹ' ಅಡಿ ೧,೫೧೪ ಹಾಗೂ 'ಕಾಮಧೇನು' ಅಡಿ ೧.೦೦೦ ರೈತರ ಪರಿಹಾರ ಪ್ರಸ್ತಾವನೆಗಳು ಸಲ್ಲಿಕೆಯಾಗಿದ್ದರೂ ಪರಿಹಾರ ವಿತರಿಸದಿರಲು ಕಾರಣಗಳೇನು ;

(ಈ) ಮರಣೋತ್ತರ ಪರೀಕ್ಷೆ ನಡೆಸಿದ ದಾಖಲೆಗಳನ್ನು ಸಲ್ಲಿಸಿ ತಿಂಗಳುಗಳು ಕಳೆದರೂ ಪರಿಹಾರ ಸಿಗದೆ ಸಂಕಷ್ಟದಲ್ಲಿರುವ ಜಾನುವಾರು ಮಾಲೀಕರು/ರೈತರಿಗೆ ಈ ಬಾಕಿ ಪರಿಹಾರ ಮೊತ್ತವನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ತಕ್ಷಣದ ಕ್ರಮಗಳೇನು ಮತ್ತು ಕಾಲಮಿತಿ ಏನು ?

## ಸ್ಥಳೀಯ ಸಂಸ್ಥೆಗಳಿಂದ ಸಂಗ್ರಹಿಸಲಾದ ಗ್ರಂಥಾಲಯ ಮತ್ತು ಭಿಕ್ಷಾಟನಾ ಉಪಕರಗಳ ಬಗ್ಗೆ

**ಡಾ. ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೨೪೯ (೨೮೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭ ರಿಂದ ೨೦೨೨ ರವರೆಗೂ ರಾಜ್ಯದ ಸ್ಥಳೀಯ ಸಂಸ್ಥೆಗಳಿಂದ ಸಂಗ್ರಹಿಸಲಾಗಿರುವ ಆರೋಗ್ಯ ಉಪಕರ, ಗ್ರಂಥಾಲಯ ಉಪಕರ ಮತ್ತು ಭಿಕ್ಷಾಟನಾ ಉಪಕರಗಳ ಹಣವೆಷ್ಟು (ಸೆಸ್) ; (ವರ್ಷವಾರು ವಿವರ ನೀಡುವುದು)

(ಆ) ಸಂಗ್ರಹಿಸಲಾಗಿರುವ ಸೆಸ್ ಹಣವನ್ನು ಸಂಬಂಧಪಟ್ಟ ಇಲಾಖೆಗೆ ವರ್ಗಾಯಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ; (ಇದರ ಪೂರ್ಣ ವಿವರ ಒದಗಿಸುವುದು)

(ಇ) ಸೆಸ್ ಹಣವನ್ನು ಇದುವರೆಗೂ ಸಂಬಂಧಪಟ್ಟ ಇಲಾಖೆಗಳ ಖಾತೆಗೆ ವರ್ಗಾಯಿಸದೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹೀಗೆ ವರ್ಗಾಯಿಸದೇ ಉಳಿಸಿಕೊಳ್ಳುವುದು ಕಾಯ್ದೆಯ ನಿಬಂಧನೆಗಳ ಉಲ್ಲಂಘನೆಯಾಗುವುದಿಲ್ಲವೇ ?

# ವಿವಿಧ ವಸತಿ ಯೋಜನೆಗಳಡಿ ಹಂಚಿಕೆಯಾಗಿರುವ ಮನೆಗಳ ಮತ್ತು ಆಯ್ಕೆಯಾದ ಫಲಾನುಭವಿಗಳ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೦ (೨೮೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಜ್ಯದಲ್ಲಿರುವ ವಸತಿ ರಹಿತ ಕುಟುಂಬಗಳ ಸಂಖ್ಯೆ ಎಷ್ಟು; ವಸತಿ ರಹಿತ ಕುಟುಂಬಗಳನ್ನು ಗುರುತಿಸಲು ಸರ್ಕಾರವು ನಿಗದಿಪಡಿಸಿರುವ ಮಾನದಂಡಗಳೇನು; ವಸತಿ ರಹಿತರನ್ನು ಗುರುತಿಸಿ ಅವರಿಗೆ ವಸತಿಯನ್ನು ಕಲ್ಪಿಸಿ ರಾಜ್ಯವನ್ನು ಗುಡಿಸಲು ಮುಕ್ತವಾಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ವಸತಿರಹಿತ ಬಡಜನರಿಗೆ ವಸತಿ ಸೌಲಭ್ಯ ಕಲ್ಪಿಸಲು ವಿವಿಧ ವಸತಿ ಯೋಜನೆಯಡಿಯಲ್ಲಿ ಎಷ್ಟು ಮನೆಗಳ ಅನುಷ್ಠಾನದ ಗುರಿಯನ್ನು ನಿಗದಿ ಪಡಿಸಲಾಗಿರುತ್ತದೆ ; ಎಷ್ಟು ಮನೆಗಳನ್ನು ಹಂಚಲಾಗಿರುತ್ತದೆ; ಯಾವ ಯೋಜನೆಗಳಡಿ (ಕೇಂದ್ರ / ರಾಜ್ಯ) ಮನೆಗಳನ್ನು ಹಂಚಿಕೆ ಮಾಡಲಾಗಿದೆ ; ಎಷ್ಟು ಮೊತ್ತವನ್ನು ಫಲಾನುಭವಿಗಳಿಗೆ ಪಾವತಿಸಲಾಗಿದೆ ಹಾಗೂ ಪಾವತಿಸಲು ಬಾಕಿಯಿದೆ ; ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಪ್ರತ್ಯೇಕವಾಗಿ ಸಂಪೂರ್ಣ ಮಾಹಿತಿ ನೀಡುವುದು.)

(ಇ) ಒಂದು ವೇಳೆ ಮನೆಗಳ ಹಂಚಿಕೆಯ ಗುರಿಯನ್ನು ಮೇಲ್ಕಾಣಿಸಿದ ಸಾಲಿನಲ್ಲಿ ನಿಗದಿ ಪಡಿಸದೇ ಇದ್ದಲ್ಲಿ ಯೋಜನೆಗಳ ಅನುಷ್ಠಾನ ವಿಳಂಬವಾಗುವುದಿಲ್ಲವೇ ; ಗುರಿಯನ್ನು ನಿಗದಿಪಡಿಸದೇ ಇರಲು ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ PMAY ಯೋಜನೆಯಡಿ ರಾಜ್ಯಕ್ಕೆ ಹಂಚಿಕೆಯಾದ ಅನುಷ್ಠಾನಗೊಂಡ ಮನೆಗಳ ವಿವರ ಮತ್ತು ಫಲಾನುಭವಿಗಳಿಗೆ ಪಾವತಿಸಿರುವ ಮೊತ್ತವೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು.)

## ರೈತರ ಆತ್ಮಹತ್ಯೆಗಳ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೧ (೨೮೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ವರದಿಯಾದ ರೈತರ ಆತ್ಮಹತ್ಯೆ ಪ್ರಕರಣಗಳು ಎಷ್ಟು ; ಯಾವ ಕಾರಣಕ್ಕಾಗಿ ಆತ್ಮಹತ್ಯೆ ಮಾಡಿಕೊಂಡಿರುತ್ತಾರೆ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಆತ್ಮಹತ್ಯೆ ಮಾಡಿಕೊಂಡ ರೈತರಿಗೆ ಸರ್ಕಾರ ಒದಗಿಸುವ ಪರಿಹಾರಗಳೇನು; ಪರಿಹಾರವನ್ನು ಒದಗಿಸಲು ರೂಪಿಸಿರುವ ಮಾನದಂಡಗಳೇನು ; ಇಲ್ಲಿಯವರೆಗೆ ಆತ್ಮಹತ್ಯೆ ಮಾಡಿಕೊಂಡ ಎಲ್ಲಾ ರೈತರ ಕುಟುಂಬಗಳಿಗೆ ಪರಿಹಾರವನ್ನು ಒದಗಿಸಲಾಗಿದೆಯೇ ; ಪರಿಹಾರ ಒದಗಿಸುವಲ್ಲಿ ವಿಳಂಬವಾದ ಪ್ರಕರಣಗಳೆಷ್ಟು ;

(ಇ) ರೈತರ ಆತ್ಮಹತ್ಯೆಯನ್ನು ತಡೆಯಲು ಸರ್ಕಾರ ಯಾವ ರೀತಿಯಲ್ಲಿ ಕಾರ್ಯೋನ್ಮುಖವಾಗಿದೆ ; ರೂಪಿಸಿರುವ ನೀತಿ ನಿಯಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

# ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಿಗೆ ಸರ್ಕಾರ ಒದಗಿಸಿರುವ ಅನುದಾನದ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೨ (೨೮೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ૩ ವರ್ಷಗಳಲ್ಲಿ ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಿಗೆ (ನಗರಸಭೆಗಳು, ಪುರಸಭೆಗಳು ಮತ್ತು ಪಟ್ಟಣ ಪಂಚಾಯಿತಿಗಳು) ರಾಜ್ಯ ಸರ್ಕಾರ ಒದಗಿಸಿರುವ ಅನುದಾನವೆಷ್ಟು ; ಯಾವ ಉದ್ದೇಶಗಳಿಗೆ ಅನುದಾನವನ್ನು ಒದಗಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಿಗೆ (ನಗರಸಭೆಗಳು, ಪುರಸಭೆಗಳು ಮತ್ತು ಪಟ್ಟಣ ಪಂಚಾಯಿತಿಗಳು) ರಾಜ್ಯ ಸರ್ಕಾರ ಒದಗಿಸಿರುವ ಅನುದಾನವೆಷ್ಟು ; ಬಳಕೆಯಾದ ಅನುದಾನವೆಷ್ಟು ; ಯಾವ ಉದ್ದೇಶಗಳಿಗೆ ಬಳಕೆಯಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ (ನಗರಸಭೆಗಳು, ಪುರಸಭೆಗಳು ಮತ್ತು ಪಟ್ಟಣ ಪಂಚಾಯಿತಿಗಳು) ಮೇಲ್ಕಾಣಿಸಿದ ಸಾಲಿನಲ್ಲಿ ಎಲ್ಲಾ ತರಹದ ತೆರಿಗೆಯ ರೂಪದಲ್ಲಿ ಸಾರ್ವಜನಿಕರಿಂದ ಸಂಗ್ರಹಿಸಿದ ಮೊತ್ತವೆಷ್ಟು ; ಸಂಗ್ರಹಿಸಿದ ಮೊತ್ತವನ್ನು ಯಾವ ಉದ್ದೇಶಗಳಿಗೆ ಬಳಸಲಾಗಿದೆ ; ಸಂಗ್ರಹಿಸಿದ ಮೊತ್ತವನ್ನು ಬಳಸಿಕೊಳ್ಳಲು ಸರ್ಕಾರ ರೂಪಿಸಿರುವ ನಿಯಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಜಾನುವಾರುಗಳ ಸಾವಿಗೆ ನೀಡುತ್ತಿರುವ ಪರಿಹಾರದ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೩ (೨೮೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ವರದಿಯಾದ ಜಾನುವಾರುಗಳ (ಹಸು, ಎಮ್ಮೆ, ಕುರಿ, ಎತ್ತು ಇತ್ಯಾದಿ ಜಾನುವಾರುಗಳು) ಸಾವಿನ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಜಾನುವಾರುಗಳ ಸಾವಿನ ಪ್ರಕರಣದಲ್ಲಿ ಸರ್ಕಾರವು ಸಂತ್ರಸ್ಥರಿಗೆ ಪರಿಹಾರವನ್ನು ಒದಗಿಸಲು ರೂಪಿಸಿರುವ ಯೋಜನೆಗಳು ಯಾವುವು ;

(ಇ) ಜಾನುವಾರುಗಳ ಸಾವಿನ ಪ್ರಕರಣದಲ್ಲಿ ಸರ್ಕಾರ ಸಂತ್ರಸ್ಥರಿಗೆ ಒದಗಿಸುವ ಪರಿಹಾರಗಳೇನು; ಪರಿಹಾರವನ್ನು ಒದಗಿಸಲು ರೂಪಿಸಿರುವ ಮಾನದಂಡಗಳೇನು; ಮೇಲ್ಕಾಣಿಸಿದ ಸಾಲಿನಲ್ಲಿ ವರದಿಯಾದ ಎಲ್ಲಾ ಪ್ರಕರಣಗಳಿಗೆ ಪರಿಹಾರವನ್ನು ಒದಗಿಸಲಾಗಿದೆಯೇ; ಪರಿಹಾರದ ಮೊತ್ತವೆಷ್ಟು, ಪರಿಹಾರ ಒದಗಿಸದೇ ಇರುವ ಪ್ರಕರಣಗಳ ಸಂಖ್ಯೆ ಮತ್ತು ಮೊತ್ತವೆಷ್ಟು; ಯಾವ ಕಾರಣಕ್ಕಾಗಿ ಪರಿಹಾರವನ್ನು ಒದಗಿಸುವಲ್ಲಿ ವಿಳಂಬವಾಗಿರುತ್ತದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಜಾನುವಾರುಗಳ ಸಾವನ್ನು ತಡೆಗಟ್ಟಲು ಸರ್ಕಾರ ಯಾವ ರೀತಿಯಲ್ಲಿ ಕಾರ್ಯೋನ್ಮುಖವಾಗಿದೆ ?

# ಹಾಲಿನ ಪ್ರೋತ್ಸಾಹಧನದ ಬಾಕಿ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೪ (೨೮೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಹಾಲು ಉತ್ಪಾದಕರ ಒಕ್ಕೂಟಗಳೆಷ್ಟು ; ಹಾಲು ಉತ್ಪಾದಕರ ಸಹಕಾರ ಸಂಘಗಳು ಎಷ್ಟಿವೆ ; ಎಷ್ಟು ಜನ ನೋಂದಾಯಿತ ಹಾಲು ಉತ್ಪಾದಕರಿದ್ದಾರೆ ; ದಿನಪ್ರತಿ ಎಷ್ಟು ಜನ ರೈತರು ಹಾಲು ಸರಬರಾಜು ಮಾಡುತ್ತಿದ್ದಾರೆ ; ಹಾಲಿನ ಪ್ರೋತ್ಸಾಹಧನವನ್ನು ಪಡೆಯುತ್ತಿರುವ ರೈತರ ಸಂಖ್ಯೆ ಎಷ್ಟು; ಸಾಮಾನ್ಯ, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ರೈತರ ಸಂಖ್ಯೆ ಎಷ್ಟು ;

(ಆ) ಹೈನುಗಾರಿಕೆ ನಡೆಸುವ ರೈತರಿಗೆ ಅನೂಕೂಲವಾಗುವ ಉದ್ದೇಶದಿಂದ ಯಾವ ಯೋಜನೆಗಳಡಿ ಪ್ರತಿ ಲೀಟರ್ ಹಾಲಿಗೆ ಎಷ್ಟು ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ ; ೨೦೨೩–ಏಪ್ರಿಲ್ ತಿಂಗಳಿನಿಂದ ೨೦೨೬–ಜುಲೈ ತಿಂಗಳ ಅಂತ್ಯದವರೆಗೆ ಎಷ್ಟು ಮೊತ್ತವನ್ನು ರೈತರಿಗೆ ಪ್ರೋತ್ಸಾಹಧನದ ಯೋಜನೆಯಡಿ ಪಾವತಿ ಮಾಡಲಾಗಿದೆ ; ಪ್ರೋತ್ಸಾಹಧನವನ್ನು ಪಾವತಿ ಮಾಡದೇ ಬಾಕಿ ಉಳಿಸಿಕೊಂಡಿರುವ ರೈತರ ಸಂಖ್ಯೆ ಮತ್ತು ಮೊತ್ತವೆಷ್ಟು ; ಯಾವ ಕಾರಣಕ್ಕಾಗಿ ಬಾಕಿ ಉಳಿಸಿಕೊಳ್ಳಲಾಗಿದೆ ; ಪ್ರೋತ್ಸಾಹಧನ ಬಾಕಿ ಇರುವುದರಿಂದ ಸರ್ಕಾರ ರೈತರಿಗೆ ಅನ್ಯಾಯ ಮಾಡಿದಂತಾಗುವುದಿಲ್ಲವೇ ;

(ಇ) ರೈತರಿಂದ ಸಂಗ್ರಹಿಸಿದ ಹಾಲು ಹಲವು ಸಹಕಾರಿ ಹಾಲು ಮಾರಾಟ ಮಂಡಳಿಗಳ ಮೂಲಕ ವಿತರಣೆ, ಮಾರಾಟ ಹಾಗೂ

ಹಾಲಿನ ಇತರೆ ಉತ್ಪನ್ನಗಳ ಮಾರಾಟದಿಂದ ಹಣ ಸಂಗ್ರಹವು ಅಪಾರವಾಗಿ ಬರುತ್ತದೆ ; ಆದರೂ ಕೂಡ ಹಾಲಿನ ಪ್ರೋತ್ಸಾಹಧನವನ್ನು ರೈತರಿಗೆ ನಿಗದಿತ ಸಮಯದಲ್ಲಿ ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಈ) ಹಾಲಿನ ಪ್ರೋತ್ಸಾಹಧನವನ್ನು ಕಡ್ಡಾಯವಾಗಿ ಫಲಾನುಭವಿಗಳಿಗೆ ನಿಗದಿತ ಸಮಯದಲ್ಲಿ ನೀಡಲು ಸರ್ಕಾರ ರೂಪಿಸಿರುವ ನಿಯಮಗಳೇನು ?

## ರೈತರಿಗೆ ಶೂನ್ಯ ಬಡ್ಡಿ ಸಾಲದ ಕುರಿತು

**ಶ್ರೀ ದಿನೇಶ್ ಗೂಳಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೫ (೧೮೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ರಾಜ್ಯದ ರೈತರಿಗೆ ಶೂನ್ಯ ಬಡ್ಡಿ ದರದ ಸಾಲ ನೀಡಲು ಆಯವ್ಯಯದಲ್ಲಿ ಒದಗಿಸಲಾದ ಅನುದಾನ ಮತ್ತು ವೆಚ್ಚದ ವಿವರಗಳನ್ನು ನೀಡುವುದು ; (ಅಂಕಿ–ಅಂಶಗಳೊಂದಿಗೆ ವರ್ಷವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಜಿಲ್ಲೆಯ ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ನೀಡಲಾದ ಸಾಲದ ವಿವರಗಳ ಅಂಕಿ–ಅಂಶಗಳನ್ನು ನೀಡುವುದು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಸರ್ಕಾರವು ಎಸ್ ಡಿ ಸಿ ಮತ್ತು ನಬಾರ್ಡ್ ಗಳಿಂದ ಕೋರಲಾದ ಮತ್ತು ಒದಗಿಸಲಾದ ಸಾಲದ ವಿವರಗಳನ್ನು ನೀಡುವುದು ?

## ಮೀನುಮರಿ ಖರೀದಿಯ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೨೫೬ (೨೯೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೬–೨೭ನೇ ಸಾಲಿನ ರಾಜ್ಯ ಬಜೆಟ್‌ನಲ್ಲಿ ರಾಜ್ಯದ ಜಲಾಶಯಗಳಿಗೆ ಮೀನುಮರಿಗಳನ್ನು ಖರೀದಿಸಿ ಬಿಡಲು ಎಷ್ಟು ಅನುದಾನವನ್ನು ಮೀಸಲಿಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಮೂರು ಹಣಕಾಸು ವರ್ಷಗಳಲ್ಲಿ ಮೀನುಮರಿ ಖರೀದಿಗಾಗಿ ವರ್ಷವಾರು ಎಷ್ಟು ಅನುದಾನವನ್ನು ಮೀಸಲಿಡಲಾಗಿತ್ತು ಹಾಗೂ ಎಷ್ಟು ವೆಚ್ಚ ಮಾಡಲಾಗಿದೆ ; (ವರ್ಷವಾರು ವಿವರ ನೀಡುವುದು)

(ಇ) ೨೦೨೩–೨೪ನೇ ಸಾಲಿನ ರಾಜ್ಯ ಬಜೆಟ್‌ನಲ್ಲಿ ರಾಜ್ಯದ ಜಲಾಶಯಗಳಿಗೆ ಗುಣಮಟ್ಟದ ಮೀನುಮರಿಗಳ (Ranching) ಬಿಡುವ ಕಾರ್ಯಕ್ರಮಕ್ಕಾಗಿ ರೂ. ೨೦ ಕೋಟಿ ಅನುದಾನವನ್ನು ಘೋಷಿಸಲಾಗಿತ್ತು. ಆ ಅನುದಾನವನ್ನು ಹೇಗೆ ಬಳಸಲಾಗಿದೆ; ಎಷ್ಟು ಮೊತ್ತ ವೆಚ್ಚ ಮಾಡಲಾಗಿದೆ, ಎಷ್ಟು ಮೀನುಮರಿಗಳನ್ನು ಖರೀದಿಸಿ ಯಾವ ಯಾವ ಜಲಾಶಯಗಳಿಗೆ ಬಿಡಲಾಗಿದೆ ; (ಜಲಾಶಯವಾರು ವಿವರ ನೀಡುವುದು)

(ಈ) ೨೦೨೬–೨೭ನೇ ಸಾಲಿನಲ್ಲಿ ಭದ್ರಾ, ತುಂಗಭದ್ರಾ ಸೇರಿದಂತೆ ರಾಜ್ಯದ ಪ್ರಮುಖ ಜಲಾಶಯಗಳಿಗೆ ಒಟ್ಟು ಎಷ್ಟು ಮೀನುಮರಿಗಳ ಅಗತ್ಯವಿದೆ; ಅವುಗಳನ್ನು ಯಾವ ಸಂಸ್ಥೆ/ಹ್ಯಾಚರಿಗಳಿಂದ, ಯಾವ ದರದಲ್ಲಿ ಹಾಗೂ ಯಾವ ಖರೀದಿ ವಿಧಾನದಲ್ಲಿ (ಟೆಂಡರ್/ ನೇರ ಖರೀದಿ) ಖರೀದಿಸಲಾಗುತ್ತಿದೆ ; (ಜಲಾಶಯವಾರು ವಿವರ ನೀಡುವುದು)

(ಉ) ರಾಜ್ಯದ ಜಲಾಶಯಗಳಲ್ಲಿ ಮೀನುಮರಿ ಬಿಡುವ ಕಾರ್ಯಕ್ರಮದಡಿ ಒಟ್ಟು ಎಷ್ಟು ಹೆಕ್ಟೇರ್/ಎಕರೆ ಜಲವಿಸ್ತೀರ್ಣ ಒಳಗೊಂಡಿದೆ; ಈ ಕಾರ್ಯಕ್ರಮದಿಂದ ಎಷ್ಟು ಮೀನುಗಾರರ ಸಹಕಾರ ಸಂಘಗಳು, ಎಷ್ಟು ಮೀನುಗಾರ ಕುಟುಂಬಗಳು ಜೀವನೋಪಾಯವನ್ನು ಅವಲಂಬಿಸಿವೆ ಹಾಗೂ ಕಳೆದ ಮೂರು ವರ್ಷಗಳ ಮೀನು ಉತ್ಪಾದನೆಯ ವರ್ಷವಾರು ವಿವರ ನೀಡುವುದು ;

(ಊ) ಪ್ರಸಕ್ತ ಸಾಲಿನಲ್ಲಿ ಮೀನುಮರಿ ಖರೀದಿಗೆ ಅನುದಾನವನ್ನು ಕಡಿತಗೊಳಿಸಿರುವುದಾದರೆ ಅಥವಾ ಸ್ಥಗಿತಗೊಳಿಸಿರುವುದಾದರೆ ಅದರ ಕಾರಣಗಳೇನು ; ಇದರಿಂದ ಮೀನು ಉತ್ಪಾದನೆ, ಸ್ಥಳೀಯ ಮೀನುಮರಿ ಉತ್ಪಾದಕರು ಹಾಗೂ ಮೀನುಗಾರರ ಜೀವನೋಪಾಯದ ಮೇಲೆ ಉಂಟಾಗುವ ಪರಿಣಾಮವನ್ನು ಸರ್ಕಾರ ಮೌಲ್ಯಮಾಪನ ಮಾಡಿರುವುದೇ; ಮಾಡಿದ್ದರೆ, ಅದರ ವಿವರ ಹಾಗೂ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕೃಷಿ ಅಧಿಕಾರಿ/ ಸಹಾಯಕ ಕೃಷಿ ಅಧಿಕಾರಿಗಳ ನೇಮಕಾತಿ ಗೊಂದಲದ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೨೫೭ (೯೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಅಧಿಕಾರಿ (AO) ಹಾಗೂ ಸಹಾಯಕ ಕೃಷಿ ಅಧಿಕಾರಿ (AAO) ನೇಮಕಾತಿಗೆ ಸಂಬಂಧಿಸಿದಂತೆ ಕೃಷಿ ವಿದ್ಯಾರ್ಥಿಗಳು ನಡೆಸುತ್ತಿರುವ ಪ್ರತಿಭಟನೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೃಷಿ ಇಲಾಖೆಯ ತಾಂತ್ರಿಕ ಹುದ್ದೆಗಳಿಗೆ ICAR ಮಾನ್ಯತೆ ಪಡೆದ ಪದವೀಧರರಿಗೆ ಮಾತ್ರ ಕಡ್ಡಾಯವಾಗಿ ಅವಕಾಶ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಕೃಷಿ ವಿಜ್ಞಾನದ ಮೂಲ ಅರಿವಿಲ್ಲದ ಕಡಿಮೆ ವಿದ್ಯಾರ್ಹತೆ ಹೊಂದಿರುವವರನ್ನು 'ದೇಸಿ ಪ್ರೋಗ್ರಾಂ' (DAESI) ಮೂಲಕ ರಸಗೊಬ್ಬರ ಮತ್ತು ಕೀಟನಾಶಕ ಮಾರಾಟ ಮಾಡಲು ನೇಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹೀಗೆ ಕಡಿಮೆ ವಿದ್ಯಾರ್ಹತೆ ಉಳ್ಳವರನ್ನು 'ದೇಸಿ ಪ್ರೋಗ್ರಾಂ' ಮೂಲಕ ರಸಗೊಬ್ಬರ ಮತ್ತು ಕೀಟನಾಶಕ ಮಾರಾಟ ಮಾಡಲು ನೇಮಿಸುವುದರಿಂದ ರೈತರಿಗೆ ಆಗುವ ಸಮಸ್ಯೆ (ಬೆಳೆ ನಷ್ಟ) ಕುರಿತು ಸರ್ಕಾರದ ನಿಲುವೇನು; ಪ್ರಸ್ತುತ ಉದ್ಭವಿಸಿರುವ ಸಮಸ್ಯೆ ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕೃಷಿ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಅಳವಡಿಸುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೮ (೧೬೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಮಹಾರಾಷ್ಟ್ರ ಹಾಗೂ ಇನ್ನಿತರ ರಾಜ್ಯಗಳಲ್ಲಿ ರೈತರಿಗೆ ನೆರವಾಗುವಂತೆ ಕೃಷಿ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ ಆಧಾರಿತ ತಂತ್ರಜ್ಞಾನ ಅಳವಡಿಸಿ ಕಾರ್ಯಕ್ರಮಗಳನ್ನು ಹಾಕಿಕೊಂಡು ಭೂಮಿಯ ಗುಣಧರ್ಮ, ಫಲವತ್ತತೆ, ವಾತಾವರಣದಲ್ಲಿಯ ದಿಢೀರ್ ಬದಲಾವಣೆ ಎದುರಿಸುವ ತಂತ್ರಜ್ಞಾನ ಜತೆಗೆ ಕಡಿಮೆ ನೀರಿನಲ್ಲಿ ಕಬ್ಬು ಮುಂತಾದ ಪೀಕುಗಳಲ್ಲಿ ಉತ್ಕೃಷ್ಟವಾದ ಹೆಚ್ಚುವರಿ ಉತ್ಪನ್ನ ಪಡೆಯುತ್ತಿರುವ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದಲ್ಲಿ ಕೂಡಾ ಕೃಷಿ ಕ್ಷೇತ್ರಕ್ಕೆ ಸಹಾಯಕಾರಿಯಾದ ಕೃತಕ ಬುದ್ಧಿಮತ್ತೆ ಆಧಾರಿತ ತಂತ್ರಜ್ಞಾನ ಅಳವಡಿಸುವಂತಹ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗುವುದೇ ? (ಮಾಹಿತಿ ಒದಗಿಸುವುದು)

## ಆಲಮಟ್ಟಿ ಜಲಾಶಯದಲ್ಲಿ ಅಕ್ರಮವಾಗಿ ಮೀನುಗಾರಿಕೆ ಮಾಡುತ್ತಿರುವವರ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೯ (೧೬೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಲವಾರು ವರ್ಷಗಳಿಂದ ಆಲಮಟ್ಟಿ ಜಲಾಶಯದ ಹಿನ್ನೀರಿನಲ್ಲಿ ಹೊರರಾಜ್ಯದ ಮೀನುಗಾರರು ಅಕ್ರಮವಾಗಿ ಮೀನುಗಾರಿಕೆ ಮಾಡುತ್ತಿದ್ದು, ಇದರಿಂದ ಉದ್ಯೋಗವಿಲ್ಲದೇ ಸ್ಥಳೀಯ ಸುತ್ತಮುತ್ತಲಿನ ನದಿ ಪ್ರದೇಶದ ಮೀನುಗಾರರು ಪರದಾಡುವಂತಹ ಪರಿಸ್ಥಿತಿ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಕ್ರಮವಾಗಿ ಮೀನು ಹಿಡಿಯುವವರ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ; ಅದಕ್ಕಾಗಿ ಸರ್ಕಾರ ರೂಪಿಸಿರುವ ಕಾನೂನು ನಿಯಮಾವಳಿಗಳೇನು ; ಇಲ್ಲಿಯವರೆಗೆ ಎಷ್ಟು ಜನರ ಮೇಲೆ ಕ್ರಮ ಜರುಗಿಸಲಾಗಿದೆ ;

(ಇ) ಮೀನುಗಾರಿಕೆ ಉದ್ಯೋಗದಲ್ಲಿ ಸ್ಥಳೀಯರನ್ನು ಪ್ರೋತ್ಸಾಹಿಸಲು ಅನೇಕ ರೀತಿಯ ಬೇಡಿಕೆಗಳನ್ನು ಇಟ್ಟಿದ್ದು, ಅವುಗಳನ್ನು ಈಡೇರಿಸಲು ಸರ್ಕಾರ ಹಾಕಿಕೊಂಡ ಕಾರ್ಯಕ್ರಮಗಳೇನು ? (ವಿವರ ನೀಡುವುದು)

# ವಸತಿ ಯೋಜನೆಯಡಿ ಮನೆ ನಿರ್ಮಾಣ ಮಾಡಿಕೊಂಡಿರುವ ಫಲಾನುಭವಿಗಳಿಗೆ ಅನುದಾನ ಬಿಡುಗಡೆ ಆಗದೇ ಇರುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೦ (೧೬೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಯಲ್ಲಿ ವಸತಿ ಯೋಜನೆಯಡಿ ವಿವಿಧ ಹಂತಗಳಲ್ಲಿ ಅರ್ಹ ಫಲಾನುಭವಿಗಳು ಮನೆ ನಿರ್ಮಿಸಿಕೊಂಡರೂ ತಾಂತ್ರಿಕ ದೋಷದಿಂದ "ನಾಟ್ ಒಕೆ" ಆಗಿದ್ದು, ಇದರಿಂದ ಫಲಾನುಭವಿಗಳಿಗೆ ಅನುದಾನ ಬಿಡುಗಡೆಯಾಗದೇ ಇರುವುದರಿಂದ ಫಲಾನುಭವಿಗಳು ಅನುಭವಿಸುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲಾ ಪಂಚಾಯತ್ ಕಛೇರಿಯಿಂದ ದಿನಾಂಕ:೦೧.೦೪.೨೦೨೫ ರಿಂದ ಪ್ರಸ್ತುತ ಇಲ್ಲಿಯವರೆಗೆ ರಾಜೀವ್ ಗಾಂಧಿ ವಸತಿ ನಿಗಮ (ಗ್ರಾಮೀಣ) ಬೆಂಗಳೂರು ಇವರ ಕಛೇರಿಗೆ ಎಷ್ಟು ಪ್ರಕರಣಗಳನ್ನು "ಒಕೆ" ಗೊಳಿಸಲು ಪ್ರಸ್ತಾವನೆಗಳನ್ನು ಸಲ್ಲಿಸಲಾಗಿದೆ ; ಎಷ್ಟು ಪ್ರಕರಣಗಳನ್ನು "ಒಕೆ"ಗೊಳಿಸಲಾಗಿದೆ ; ಎಷ್ಟು ಪ್ರಕರಣಗಳು ಬಾಕಿ ಇವೆ; ರಾಜೀವ್ ಗಾಂಧಿ ವಸತಿ ನಿಲಯ (ಗ್ರಾಮೀಣ) ಬೆಂಗಳೂರು ಇವರ ಕಛೇರಿಯಲ್ಲಿ "ನಾಟ್ ಒಕೆ" ತೆರವುಗೊಳಿಸಲು ಬಾಕಿ ಉಳಿದಿರುವ ಪ್ರಕರಣಗಳು ಎಷ್ಟು ದಿನಗಳಿಂದ ಬಾಕಿ ಇವೆ ; (ಮಾಹಿತಿ ಒದಗಿಸುವುದು)

(ಇ) ಬಾಕಿ ಉಳಿದಿರುವ ಪ್ರಕರಣಗಳನ್ನು ಯಾವ ಕಾಲಮಿತಿಯಲ್ಲಿ "ನಾಟ್ ಒಕೆ" ತೆರವುಗೊಳಿಸಿ ಫಲಾನುಭವಿಗಳ ಖಾತೆಗೆ ಸಹಾಯಧನ ಬಿಡುಗಡೆ ಮಾಡಲಾಗುವುದು? (ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಹಾಗೂ ಬಾಗಲಕೋಟೆ ಸೇರಿದ ಸಾರ್ವಜನಿಕರಿಗೆ ಇ–ಆಸ್ತಿ ವಿತರಣೆ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೧ (೨೨೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಎಲ್ಲಾ ನಗರ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿನ ಸಾರ್ವಜನಿಕರು ತಮ್ಮ ನಿವೇಶನಗಳ ಇ–ಆಸ್ತಿ ಪಡೆಯಲು ಪರದಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ. ೨೦೨೪–೨೫, ೨೦೨೫–೨೬ ಮತ್ತು ಇಂದಿನವರೆಗೆ ಸ್ವೀಕೃತವಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಇ–ಆಸ್ತಿ ವಿತರಿಸಲಾದ ಆಸ್ತಿಗಳ ಸಂಖ್ಯೆ ಎಷ್ಟು: ವಿತರಿಸಲು ಬಾಕಿ ಇರುವ ಸಂಖ್ಯೆ ಎಷ್ಟು: ಜಿಲ್ಲಾವಾರು ಮಾಹಿತಿಯನ್ನು ಪ್ರತ್ಯೇಕವಾಗಿ ನೀಡುವುದು ;

(ಆ) ಇಲ್ಲಿಯವರಿಗೆ ಸ್ವೀಕೃತವಾಗಿರುವ ಅರ್ಜಿದಾರರಿಗೆ ಇ–ಆಸ್ತಿಯನ್ನು ಯಾವ ಕಾಲಮಿತಿಯಲ್ಲಿ ನೀಡಲಾಗುವುದು ? (ಮಾಹಿತಿ ನೀಡುವುದು)

## ದಾಳಿಂಬೆ ಬೆಳೆಗಾರರ ರೈತರಿಗೆ ಆರ್ಥಿಕ ನೆರವು ನೀಡುವ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೨ (೨೨೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದಲ್ಲಿ ಅದರಲ್ಲೂ ಮುಖ್ಯವಾಗಿ ಚಿತ್ರದುರ್ಗ, ಕೊಪ್ಪಳ, ಬಾಗಲಕೋಟೆ–ವಿಜಯಪುರ ಜಿಲ್ಲೆಗಳಲ್ಲಿ ದಾಳಿಂಬೆ ಬೆಳೆಯು ಪ್ರಮುಖ ಬೆಳೆಯಾಗಿದ್ದು, ರಫ್ತು ಗುಣಮಟ್ಟದ ದಾಳಿಂಬೆ ಹಣ್ಣುಗಳನ್ನು ಬೆಳೆಯಲಾಗುತ್ತಿದ್ದು ಇತ್ತೀಚೆಗೆ ದಾಳಿಂಬೆ ಬೆಳೆಗೆ ದುಂಡಾಣು ರೋಗ, ಕೊಳೆ ರೋಗ ಸೊರಗು ಕಾಂಡಕೊರಕ ಕೀಟಗಳಿಂದ ರೈತರು ಹಾನಿ ಅನುಭವಿಸುತ್ತಿರುವುದು ಗಂಭೀರ ವಿಷಯವಾಗಿದ್ದು, ಈ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸಂಕಷ್ಟದಲ್ಲಿರುವ ದಾಳಿಂಬೆ ಬೆಳೆಗಾರರ ಆರ್ಥಿಕ ನೆರವಿಗಾಗಿ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಇ) ನಿಂಬೆ ಅಭಿವೃದ್ಧಿ ನಿಗಮ, ತೆಂಗು ಆಡಿಕೆ ಅಭಿವೃದ್ಧಿ ನಿಗಮಗಳಂತೆ ಸರ್ಕಾರವು ದಾಳಿಂಬೆ ಅಭಿವೃದ್ಧಿ ನಿಗಮವನ್ನು ಕೂಡಾ ಪ್ರಾರಂಭಿಸಬೇಕೆಂದು ರೈತರ ಕೋರಿಕೆಯಂತೆ ದಾಳಿಂಬೆ ಅಭಿವೃದ್ಧಿ ನಿಗಮವನ್ನು ಸ್ಥಾಪನೆ ಮಾಡಲು ಸರ್ಕಾರ ಉದ್ದೇಶಿಸಿದೆಯೇ ?

## ಯಾದಗಿರಿ ಜಿಲ್ಲೆಯಲ್ಲಿ ಯೂರಿಯ, ಡಿಎಪಿ ಸೇರಿದಂತೆ ಇನ್ನಿತರ ರಸಗೊಬ್ಬರಗಳನ್ನು ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೩ (೧೭೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿ ಜಿಲ್ಲೆಯ ವಿವಿಧ ಅಗ್ರೋ ಏಜೆನ್ಸಿಗಳಲ್ಲಿ ಯೂರಿಯ ಹಾಗೂ ಡಿ.ಎ.ಪಿ ಸೇರಿದಂತೆ ಇನ್ನಿತರ ರಸಗೊಬ್ಬರಗಳು ಸರ್ಕಾರ ನಿಗಧಿಪಡಿಸಿದ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಆ) ಈ ಮೇಲ್ಕಂಡ ಜಿಲ್ಲೆಗಳಲ್ಲಿ ಸಮರ್ಪಕ ಮಳೆಯಾಗದ ಕಾರಣ ಈಗಾಗಲೇ ರೈತರು ಸಂಕಷ್ಟದಲ್ಲಿದ್ದು, ಇಂತಹ ಸಂದರ್ಭದಲ್ಲಿ ಅಗತ್ಯ ರಸಗೊಬ್ಬರಗಳನ್ನು ದುಬಾರಿ ಬೆಲೆಗೆ ಅಕ್ರಮ ಮಾರಾಟ ಮಾಡಲು ಸಹಕರಿಸಿದ ಅಧಿಕಾರಿಗಳು ಯಾರು ಎಂದು ಸರ್ಕಾರ ಪತ್ತೆ ಹಚ್ಚಿದೆಯೇ; ಪತ್ತೆ ಹಚ್ಚಿದಲ್ಲಿ, ಅಧಿಕಾರಿಗಳು ಹಾಗೂ ವ್ಯಾಪರಸ್ಥರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆಗಳಲ್ಲಿರುವ ಪೌರಸೇವಾ ನೌಕರರ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೪ (೧೭೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಪಟ್ಟಣ ಪಂಚಾಯತ್, ಪುರಸಭೆ ಮತ್ತು ನಗರ ಸಭೆಗಳಲ್ಲಿ ಸಮರ್ಪಕ ಸಂಖ್ಯೆಯಲ್ಲಿ ಪೌರಸೇವಾ ನೌಕರರು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಜಿಲ್ಲೆಗಳಲ್ಲಿ ಬರುವ ಸ್ಥಳೀಯ ಸಂಸ್ಥೆಗಳಿಗೆ ಮಂಜೂರಾದ ಪೌರಸೇವಾ ನೌಕರರ ಹುದ್ದೆಗಳೆಷ್ಟು ; ಅದರಲ್ಲಿ ಭರ್ತಿ ಮಾಡಿದ ಹುದ್ದೆಗಳು ಹಾಗೂ ಬಾಕಿ ಇರುವ ಹುದ್ದೆಗಳೆಷ್ಟು ; (ವಿವರ ನೀಡುವುದು)

(ಇ) ಪೌರಸೇವಾ ನೌಕರರ ಕೊರತೆ ಇದ್ದಲ್ಲಿ, ಅದನ್ನು ಸರಿಪಡಿಸಲು ಸರ್ಕಾರ ಇದುವರೆಗೂ ಕೈಗೊಂಡ ಕ್ರಮಗಳೇನು ?

## ಬಳ್ಳಾರಿ ನಗರದ ಶ್ರೀಗಡಿಗಿ ಚನ್ನಪ್ಪ ವೃತ್ತದಲ್ಲಿ ಪುತ್ಥಳಿ ಸ್ಥಾಪನೆ ಕುರಿತು

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೫ (೨೭೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ನಗರದ ಶ್ರೀ ಗಡಿಗಿ ಚನ್ನಪ್ಪ ವೃತ್ತದಲ್ಲಿ ಮಹಾತ್ಮ ಗಾಂಧಿ ಹಾಗೂ ಕಲಾ ಪ್ರಪೂರ್ಣ ಶ್ರೀ ರಾಘವ ಪುತ್ಥಳಿ ಇರುವುದು ನಿಜವೇ ;

(ಆ) ಇದ್ದಲ್ಲಿ, ಬಳ್ಳಾರಿ ನಗರದ ಶ್ರೀ ಗಡಿಗಿ ಚನ್ನಪ್ಪ ವೃತ್ತದಲ್ಲಿ (ನೇತಾಜಿ) ಮಹಾತ್ಮ ಗಾಂಧಿ ಹಾಗೂ ಕಲಾ ಪ್ರಪೂರ್ಣ ಶ್ರೀ ರಾಘವ ಪುತ್ಥಳಿ ಹಾಲಿ ಸ್ಥಳದಲ್ಲಿ ಕಾಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇಲ್ಲದಿದ್ದಲ್ಲಿ, ಬಳ್ಳಾರಿ ನಗರದ ಶ್ರೀ ಗಡಿಗಿ ಚನ್ನಪ್ಪ ವೃತ್ತದಲ್ಲಿ (ನೇತಾಜಿ) ಮಹಾತ್ಮ ಗಾಂಧಿ ಹಾಗೂ ಕಲಾ ಪ್ರಪೂರ್ಣ ಶ್ರೀ ರಾಘವ ಪುತ್ಥಳಿ ಸ್ಥಾಪಿಸಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗುವುದು ?

## ಬಳ್ಳಾರಿ ನಗರದ ಡಾ. ರಾಜ್ ಕುಮಾರ್ ಉದ್ಯಾನವನ ಪಾಳು ಬಿದ್ದಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೬ (೨೮೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ನಗರದ ಡಾ. ರಾಜ್ ಕುಮಾರ್ ಉದ್ಯಾನವನ ಪಾಳು ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಳ್ಳಾರಿ ನಗರದ ಡಾ. ರಾಜ್ ಕುಮಾರ್ ಉದ್ಯಾನವನದಲ್ಲಿ ಅನೈತಿಕ ಚಟುವಟಿಕೆಗಳು ನಡೆಯುತ್ತಿದ್ದು ಇದರಿಂದಾಗಿ ಸಾರ್ವಜನಿಕರ ಆಗಮನ ಕಡಿಮೆಯಾಗಿ ಉದ್ಯಾನವನದ ಆದಾಯದಲ್ಲಿ ಕಡಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಳ್ಳಾರಿ ನಗರದ ಡಾ. ರಾಜ್ ಕುಮಾರ್ ಉದ್ಯಾನವನವನ್ನು ಅಭಿವೃದ್ಧಿಪಡಿಸಲು ಹಾಗೂ ಸೂಕ್ತ ಭದ್ರತೆ ಮತ್ತು ಅನೈತಿಕ ಚಟುವಟಿಕೆಗೆ ಕಡಿವಾಣ ಹಾಕಲು ಸರ್ಕಾರದಿಂದ ಯಾವ ಕ್ರಮ ಜರುಗಿಸಲಾಗುವುದು ?

## ರಾಜ್ಯದಲ್ಲಿರುವ ಸರ್ಕಾರಿ ಸಹಕಾರಿ ಬ್ಯಾಂಕುಗಳಲ್ಲಿ ಹಾಗೂ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ರೈತರಿಗೆ ಇರುವ ವ್ಯವಹಾರಿಕ ಸೌಲಭ್ಯಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೨೬೭ (೩೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಸರ್ಕಾರಿ ಸಹಕಾರಿ ಬ್ಯಾಂಕುಗಳು ಮತ್ತು ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳ ಸಂಖ್ಯೆ ಎಷ್ಟು; ಮತ್ತು ಅವು ಯಾವುವು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಸರ್ಕಾರಿ ಸಹಕಾರಿ ಬ್ಯಾಂಕುಗಳು ಮತ್ತು ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳು ರೈತರಿಗೆ ಬ್ಯಾಂಕ್ ಖಾತೆಗಳ ಪಾಸ್‌ಬುಕ್‌ಗಳನ್ನು ನೀಡದೇ ಇರಲು ಕಾರಣವೇನು ; ರೈತರು ಬ್ಯಾಂಕ್‌ಗಳಿಗೆ ತೆರಳಿ ಪ್ರಶ್ನಿಸಿದರೆ ಸಿಬ್ಬಂದಿಗಳು ಈ ಬಗ್ಗೆ ಉತ್ತರಿಸುತ್ತಿಲ್ಲ ಎಂಬ ಆರೋಪಗಳು ಕೇಳಿಬರುತ್ತಿದ್ದು ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸರ್ಕಾರಿ ಸಹಕಾರಿ ಬ್ಯಾಂಕುಗಳಲ್ಲಿ ಖಾತೆದಾರಿಗೆ ವಿಶೇಷವಾಗಿ ರೈತರಿಗೆ ವಾರದಲ್ಲಿ ಕೇವಲ ೩ ದಿನಗಳು ಮಾತ್ರ ಹಣದ ವ್ಯವಹಾರ ಮಾಡಲಾಗುವುದು ಎಂದು ಸಿಬ್ಬಂದಿಗಳು ತಿಳಿಸುತ್ತಿದ್ದು ಇದರಿಂದಾಗಿ ರೈತರಿಗೆ ವ್ಯವಹರಿಸಲು ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಈ) ರೈತರಿಗೆ ಸರ್ಕಾರಿ ಸಹಕಾರಿ ಬ್ಯಾಂಕ್‌ಗಳ ಮತ್ತು ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಇರುವ ವ್ಯವಹಾರಿಕ ಸೌಲಭ್ಯಗಳು ಯಾವುವು ; ಈ ಎರಡು ಬ್ಯಾಂಕುಗಳ ದಿನನಿತ್ಯದ ಕಾರ್ಯವೈಖರಿಯ ಮಾಹಿತಿಯನ್ನು ನೀಡುವುದು ?

## ರಾಜ್ಯದ–ಬಡವರ್ಗದ ಜನರಿಗೆ ಹೆಚ್ಚು ವಸತಿಗಳನ್ನು ನೀಡುವ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೨೬೮ (೧೯೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಸತಿ ಇಲಾಖೆ ವತಿಯಿಂದ ಬಡವರ್ಗದ ಜನರಿಗೆ ೨೦೨೫ನೇ ಸಾಲಿನಿಂದ ಇಲ್ಲಿಯವರೆಗೆ ಎಷ್ಟು ವಸತಿಗಳನ್ನು ಮಂಜೂರು ಮಾಡಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರವು ಈ ಸಾಲಿನಲ್ಲಿ ನೀಡಿರುವ ವಸತಿ ಯೋಜನೆಗಳು ಬಹಳ ಕಡಿಮೆಯಾಗಿರುವುದರಿಂದ ಗ್ರಾಮೀಣ ಭಾಗದ ಬಡವರ್ಗದ ಜನರಿಗೆ ಇನ್ನು ಹೆಚ್ಚಿನ ವಸತಿಗಳು ಅವಶ್ಯಕತೆ ಇರುವುದರಿಂದ ಹೆಚ್ಚು ವಸತಿಗಳನ್ನು ಮಂಜೂರು ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

**ಜ್ಯೋತಿ**

ಕಾರ್ಯದರ್ಶಿ (ಪ್ರ)

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O-45/500 ಪ್ರತಿಗಳು/13–08–2026